ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 72 ಸಂಚಿಕೆ- 72 | PAGE- 8 ಪುಟ-8 | ಗುರುವಾರ 24.04.2025 | RS.2/- ಬೆಲೆ 2/-

# ಶೀಘ್ರ ಪ್ರತಿಕಾರ:ಉಗ್ರರಿಗೆ ರಾಜನಾಥಸಿಂಗ್ ಎಚ್ಚರಿಕೆ

ನವದೆಹಲಿ:ಏ.23: ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿರುವ ಜನರಿಗೆ "ಮುಂದಿನ ದಿನಗಳಲ್ಲಿ" ಬಲವಾದ ಪ್ರತಿಕ್ರಿಯೆ ಸಿಗುತ್ತದೆ ಮತ್ತು ಅಂತಹ ಯಾವುದೇ ಭಯೋತ್ಪಾದಕ ಚಟುವಟಿಕೆಗಳಿಂದ ಭಾರತವನ್ನು "ಬೆದರಿಸಲು" ಸಾಧ್ಯವಿಲ್ಲ,ಶೀಘ್ರ ಭಾರತ ಪ್ರತಿಕಾರ ತೀರಿಸಿಕೊಳ್ಳಲಿದೆ ಎಂದು ಉಗ್ರರಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬುಧವಾರ ಎಚ್ಚರಿಕೆ ನೀಡಿದ್ದಾರೆ.

ಭಾರತ ಮತ್ತು ವಿದೇಶಗಳಲ್ಲಿ ವ್ಯಾಪಕ ಆಕ್ರೋಶಕ್ಕೆ ಕಾರಣವಾದ ಭಯೋತ್ಪಾದಕ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ಒಂದು ದಿನದ ನಂತರ ಕಾರ್ಯಕ್ರಮವೊಂದರಲ್ಲಿ ರಾಜನಾಥ್ ಸಿಂಗ್ ಈ ಹೇಳಿಕೆ ನೀಡಿದ್ದಾರೆ.

ಈ ಉಗ್ರ ಘಟನೆಯನ್ನು ಗಮನದಲ್ಲಿಟ್ಟುಕೊಂಡು, ಭಾರತ ಸರ್ಕಾರ ಅಗತ್ಯ ಮತ್ತು ಸೂಕ್ತವಾದ ಪ್ರತಿಯೊಂದು ಹೆಜ್ಜೆಯನ್ನು ತೆಗೆದುಕೊಳ್ಳುತ್ತದೆ ಎಂದು ನಾನು ದೇಶವಾಸಿಗಳಿಗೆ ಭರವಸೆ ನೀಡುತ್ತೇನೆ" ಎಂದು ಸಿಂಗ್ ಹೇಳಿದರು.

"ಮತ್ತು ನಾವು ಈ ಘಟನೆಯನ್ನು ಮಾಡಿದವರನ್ನು ಪತ್ತೆಹಚ್ಚುವುದಲ್ಲದೆ, ಭಾರತದ ನೆಲದಲ್ಲಿ ಈ ದುಷ್ಕೃತ್ಯವನ್ನು ನಡೆಸಲು ಸಂಚು ರೂಪಿಸಿದವರನ್ನು ಸಹ ನಾವು ಬಿಡುವುದಿಲ್ಲ" ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ.

"ಭಾರತವು ತುಂಬಾ ಹಳೆಯ ನಾಗರಿಕತೆ ಮತ್ತು ದೊಡ್ಡ ದೇಶವಾಗಿದ್ದು, ಯಾವುದೇ ಭಯೋತ್ಪಾದಕ ಚಟುವಟಿಕೆಗಳಿಂದ ಅದನ್ನು ಬೆದರಿಸಲು ಸಾಧ್ಯವಿಲ್ಲ" ಎಂದು ರಕ್ಷಣಾ ಸಚಿವರು ಹೇಳಿದರು.

ಪಹಲ್ಗಾಮ್‌ನಲ್ಲಿ ನಡೆದ ದಾಳಿಯನ್ನು "ಅತ್ಯಂತ ಅಮಾನವೀಯ" ಎಂದು ಸಿಂಗ್ ಹೇಳಿದ್ದು, "ನಮ್ಮೆಲ್ಲರನ್ನೂ ತೀವ್ರ ದುಃಖ ಮತ್ತು ನೋವಿಗೆ ತಳ್ಳಿದೆ" ಎಂದಿದ್ದಾರೆ.

"ಭಯೋತ್ಪಾದನೆಯ ವಿರುದ್ಧ ನಾವು



ಶೂನ್ಯ ಸಹಿಷ್ಣುತಾ ನೀತಿಯನ್ನು ಹೊಂದಿದ್ದೇವೆ ಎಂಬ ಭಾರತದ ದೃಢ ಸಂಕಲ್ಪವನ್ನು ನಾನು ಪುನರುಚ್ಚರಿಸಲು ಬಯಸುತ್ತೇನೆ" ಎಂದು ಸಿಂಗ್ ಹೇಳಿದ್ದಾರೆ.

ಈ ಹೇಡಿತನದ ಕೃತ್ಯದ ವಿರುದ್ಧ ಭಾರತದ ಪ್ರತಿಯೊಬ್ಬ ನಾಗರಿಕನೂ ಒಗ್ಗಟ್ಟಾಗಿದ್ದಾರೆ ಎಂದು ಅವರು ಹೇಳಿದರು. ಪಹಲ್ಗಾಮ್ ಉಗ್ರ ದಾಳಿ ಇತ್ತೀಚಿನ ವರ್ಷಗಳಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಅತ್ಯಂತ ಭೀಕರ ಭಯೋತ್ಪಾದಕ ದಾಳಿಗಳಲ್ಲಿ ಒಂದಾಗಿದೆ. ರಮಣೀಯ ಬೈಸರನ್ ಹುಲ್ಲುಗಾವಲಿನಲ್ಲಿ ಮಂಗಳವಾರ ಮಧ್ಯಾಹ್ನ ಶಂಕಿತ ಭಯೋತ್ಪಾದಕರು ಪ್ರವಾಸಿಗರ ಗುಂಪಿನ ಮೇಲೆ ಗುಂಡು ಹಾರಿಸಿ ಇಬ್ಬರು ವಿದೇಶಿ ಪ್ರಜೆಗಳು ಸೇರಿದಂತೆ 26 ಜನರು ಸಾವನ್ನಪ್ಪಿದ್ದಾರೆ.

ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಲಷ್ಕರ್-ಎ-ತೈಬಾ ನ ಹಿರಿಯ ಕಮಾಂಡರ್, ಅಲಿಯಾಸ್ ಖಾಲಿದ್ ಎಂದೂ ಕರೆಯಲ್ಪಡುವ ಸೈಫುಲ್ಲಾ ಕಸೂರಿಯನ್ನು ಈ ಹತ್ಯಾಕಾಂಡದ ಹಿಂದಿನ ಮಾಸ್ಟರ್ ಮೈಂಡ್ ಎಂದು ಗುಪ್ತಚರ ಸಂಸ್ಥೆಗಳು ಗುರುತಿಸಿವೆ.

ಗುಪ್ತಚರ ಮೂಲಗಳ ಪ್ರಕಾರ, ಐದರಿಂದ ಆರು ಉಗ್ರರು ದಾಳಿಯಲ್ಲಿ ಭಾಗಿಯಾಗಿದ್ದಾರೆ, ಇದರಲ್ಲಿ ಇತ್ತೀಚೆಗೆ ನಿಯಂತ್ರಣ ರೇಖೆ ಆಚೆಯಿಂದ ಕಣಿವೆಗೆ ನುಸುಳಿದ ಹಲವರು ಸೇರಿದ್ದಾರೆ.

ಭದ್ರತಾ ಪಡೆಗಳು ಪಹಲ್ಗಾಮ್ ಪ್ರದೇಶ ಮತ್ತು ಸುತ್ತಮುತ್ತ ಬೃಹತ್ ಹುಡುಕಾಟವನ್ನು ಆರಂಭಿಸಿದ್ದು, ದುಷ್ಕರ್ಮಿಗಳನ್ನು ಪತ್ತೆಹಚ್ಚಲು ವೈಮಾನಿಕ ಕಣ್ಗಾವಲು ಮತ್ತು ನೆಲದ ಕಾರ್ಯಾಚರಣೆಗಳು ನಡೆಯುತ್ತಿವೆ.

ಘೋರದಾಳಿಯಲ್ಲಿ ಭಾಗಿಯಾಗಿರುವ ಮೂವರು ಭಯೋತ್ಪಾದಕರ ರೇಖಾಚಿತ್ರಗಳನ್ನು ಭದ್ರತಾ ಸಂಸ್ಥೆಗಳು ಬಿಡುಗಡೆ ಮಾಡಿವೆ.

## ತಲೆ ಮೇಲೆ ಕಲ್ಲು ಹಾಕಿ ಯುವಕನ ಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.23: ತಾಲೂಕಿನ ಚಾಂಡೇಶ್ವರ ಗ್ರಾಮದ ಹೊರವಲಯದ ಖೇಡ್ ರಸ್ತೆ ಬಳಿಯ ಹೊಲದಲ್ಲಿ ತಲೆ ಮೇಲೆ ಕಲ್ಲು ಹಾಕಿ ಯುವಕನ ಹತ್ಯೆ ಮಾಡಿದ ಘಟನೆ ನಡೆದಿದೆ.




ಚಾಂಡೇಶ್ವರ ಗ್ರಾಮದ ಗಂಗಶೆಟ್ಟಿ ಅಲಿಯಾಸ್ ಸಾಗರ ಧನರಾಜ ಧಭಾಲೆ (26) ಕೊಲೆಯಾದ ಯುವಕ ಎನ್ನಲಾಗಿದೆ.

ಕಮಲನಗರ ಪೊಲೀಸ್ ಠಾಣಿ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು,ತನಿಖೆ ಮುಂದುವರೆದಿದೆ.ಘಟನಾ ಸ್ಥಳಕ್ಕೆ ಭಾಲ್ಕಿ ಡಿವೈಎಸ್ಪಿ ಶಿವಾನಂದ್ ಪವಾಡ ಶೆಟ್ಟಿ, ಕಮಲನಗರ ಸಿಪಿಐ ಅಮರೆಪ್ಪ ಶಿವಬಲ್, ಭಾಲ್ಕಿ ಸಿಪಿಐ ಹಣಮರೆಡ್ಡಪ್ಪ, ಕಮಲನಗರ ಪಿಎಸ್ಐ ಚಂದ್ರಶೇಖರ್ ನಿರ್ಣೆ, ಪಿಎಸ್ಐ ಬಾಲಾಜಿ ಬೆಳಕಟ್ಟೆ ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದರು.

## ಪಹಲ್ಗಾಮ್ ದಾಳಿ:ಸಚಿವ ರಾಮಲಿಂಗಾರೆಡ್ಡಿ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.23: ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ಪಾಕಿಸ್ತಾನ ಮೂಲದ ಉಗ್ರಗಾಮಿಗಳು ನಡೆಸಿರುವ ಹೇಯ ಕೃತ್ಯ ಖಂಡನೀಯ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಬೇಸರ ವ್ಯಕ್ತಪಡಿಸಿದರು.



ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ರಕ್ಷಣಾ ಸಚಿವ ರಾಜನಾಥ ಸಿಂಗ್ ಇಂತಹ ಘಟನೆಗಳು ಪುನರಾವರ್ತನೆ ಆಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.ಕೇಂದ್ರ ಸರ್ಕಾರ ಸೇನಾ ನೇಮಕಾತಿ ಮಾಡಿಕೊಳ್ಳುವುದನ್ನು ನಿಲ್ಲಿಸಿದೆ. 1 ಲಕ್ಷ 9 ಸಾವಿರ ಯೋಧರ ನೇಮಕಾತಿ ಕಡಿಮೆ ಮಾಡಿ, ಅವರ ಬದಲು ಅಗ್ನಿವೀರರ ಸೇವೆಯನ್ನು ಕೇವಲ ಮೂರು ವರ್ಷಕ್ಕೆ ನಿಗದಿಪಡಿಸಿದೆ. ಇದರ ಬದಲು ಅಗ್ನಿವೀರರ ನೇಮಕಾತಿ ಕಾಯಂ ಮಾಡಬೇಕೆಂದು ಅವರು ಒತ್ತಾಯಿಸಿದರು. ಪರೋಕ್ಷವಾಗಿ ಸೇನಾನೇಮಕಾತಿ ಕಡಿಮೆಯಾಗಿರುವುದೇ ಉಗ್ರರು ದೇಶದೊಳಗೆ ನುಸುಳಲು ಕಾರಣ ಎಂದು ವ್ಯಾಖ್ಯಾನಿಸಿದ ಸಚಿವ ರೆಡ್ಡಿ, ಅತ್ಯಂತ ಸೂಕ್ಷ್ಮ ಪ್ರದೇಶ ಎಂದು ಗೊತ್ತಿದ್ದಾಗ್ಯೂ ಸಾರ್ವಜನಿಕರ ಮುಕ್ತ ಓಡಾಟಕ್ಕೆ ಅನುವು ಮಾಡಿಕೊಟ್ಟಿದ್ದರಿಂದ ಈ ದುರ್ಘಟನೆ ನಡೆಯಲು ಕಾರಣವಾಗಿದೆ. ಈ ಹಿಂದೆ ಪುಲ್ವಾಮ ಘಟನೆಗೂ ಮುಂಚೆ ಇದೇ ರೀತಿ ಸಾರ್ವಜನಿಕರ ಮುಕ್ತ ಓಡಾಟಕ್ಕೆ ಅನುವು ಮಾಡಿಕೊಡಲಾಗಿತ್ತು. ಹೀಗಾಗಿ, ಪುಲ್ವಾಮ ದುರ್ಘಟನೆ ನಡೆಯಿತು. ಈಗ ಪಹಲ್ಗಾಮ್ ಘಟನೆಗೂ ಇಂಥದ್ದೇ ನಿರ್ಲಕ್ಷ್ಯ ಕಾರಣ ಎಂದರು.ಈ ಹಿಂದೆ ಇಂದಿರಾಗಾಂಧಿ ಪಾಕ್ ಉಗ್ರರ ಜೊತೆಗೆ ಹೇಗೆ ನಡೆದುಕೊಂಡಿದ್ದರೋ ಅದೇ ರೀತಿ ಪ್ರಧಾನಿ ಮೋದಿ ಮತ್ತು ಗೃಹಸಚಿವ ಅಮಿತ್ ಶಾ ಸಹ ಉಗ್ರರನ್ನು ಸದೆಬಡಿಯುವ ನಿಟ್ಟಿನಲ್ಲಿ ಕಾರ್ಯತಂತ್ರ ಅನುಸರಿಸಬೇಕು ಎಂದು ಕಿವಿಮಾತು ಹೇಳಿದರು.

## ಕಾಶ್ಮೀರದಲ್ಲಿ ಸಿಲುಕಿದ ಕೊಪ್ಪಳದ ನಿವಾಸಿಗರು ಶೀಘ್ರ ವಾಪಸ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.23: ಶ್ರೀನಗರ ಪ್ರವಾಸ ಕೈಗೊಂಡಿರುವ ಕೊಪ್ಪಳದ ನಾಲ್ಕು ಕುಟುಂಬಗಳ ಸದಸ್ಯರನ್ನು ಕಾರ್ಮಿಕ ಸಚಿವ ಸಂತೋಷ್ ಲಾಡ್ ಬುಧವಾರ ಭೇಟಿಯಾಗಿದ್ದು, ಹೋಟೆಲ್ ಬಿಟ್ಟು ಎಲ್ಲಿಯೂ ಹೋಗದಂತೆ ಸಲಹೆ ನೀಡಿದ್ದಾರೆ. ಕೊಪ್ಪಳದ ಸಿದ್ದು ಗಣವಾರಿ, ಉದ್ಯಮಿ ಶರಣಪ್ಪ ಸಜ್ಜನ, ಕಾಂಗ್ರೆಸ್ ಮುಖಂಡ ಕಾಟನ್ ಪಾಷಾ ಮತ್ತು ಶಿವಕುಮಾರ ಪಾವಲಿ ಶೆಟ್ಟರ್ ಕುಟುಂಬ ಸದಸ್ಯರ ಜೊತೆ ಮಂಗಳವಾರ ಶ್ರೀನಗರಕ್ಕೆ ತೆರಳಿದ್ದು, ಅಲ್ಲಿಗೆ ಹೋದಾಗಿನಿಂದಲೂ ಹೋಟೆಲ್‌ನಲ್ಲಿಯೇ ಉಳಿದುಕೊಂಡಿದ್ದಾರೆ. ಪ್ರವಾಸ ರದ್ದುಗೊಳಿಸಿ ಬುಧವಾರ (ಇಂದು) ಸಂಜೆ ನವದೆಹಲಿಗೆ ವಾಪಸ್ ಹೋಗಲು ತೀರ್ಮಾನಿಸಿದ್ದಾರೆ.

'ನಾವು ತಂಗಿದ್ದ ಹೋಟೆಲ್‌ಗೆ ಸಚಿವ ಸಂತೋಷ ಲಾಡ್ ಭೇಟಿ ನೀಡಿದ್ದರು. ಎಲ್ಲಿಯೂ ಹೋಗಬೇಡಿ ಹೋಟೇಲ್‌ನಲ್ಲಿಯೂ ಇರಿ. ಸಂಜೆ ವೇಳೆಗೆ ವಿಮಾನದ ವ್ಯವಸ್ಥೆ ಮಾಡುವುದಾಗಿ ಹೇಳಿದ್ದಾರೆ' ಎಂದು ಕೊಪ್ಪಳದ ನಿವಾಸಿಗಳು 'ಮಲ್ಲಮ್ಮನುಡಿ ಪತ್ರಿಕೆಗೆ ತಿಳಿಸಿದರು.

## ಎಂಜಿನ್ ನಲ್ಲಿ ಕಾಣಿಸಿಕೊಂಡ ಬೆಂಕಿ: ಸುಟ್ಟು ಕರಕಲಾದ ಕಾರು



ಮಲ್ಲಮ್ಮನುಡಿ ವಾರ್ತೆ ಭಾಲ್ಕಿ:ಏ.23: ತಾಲ್ಲೂಕಿನ ನೀಲಮನಳ್ಳಿ ತಾಂಡಾ ಬಳಿ ರೇಂಜ್ ರೋವರ್ ಕಾರಿನಲ್ಲಿ ಮಂಗಳವಾರ ಬೆಂಕಿ ಕಾಣಿಸಿಕೊಂಡು ಸಂಪೂರ್ಣ ಸುಟ್ಟು ಹೋಗಿದೆ. ಬೀದರ್‌ನ ಕೆಇಬಿ ಕಾಲೋನಿ ನಿವಾಸಿ ರಾಜಶೇಖರ ಪಾಟೀಲ ಅವರು ತಮಗೆ ಸೇರಿರುವ ರೇಂಜ್ ರೋವರ್ ಕಾರಿನಲ್ಲಿ ಹುಮನಾಬಾದ್ ನಿಂದ ಬೀದರ್ ಕಡೆಗೆ ಬರುತ್ತಿದ್ದಾಗ ಎಂಜಿನ್ ನಲ್ಲಿ ಬೆಂಕಿ ಕಾಣಿಸಿಕೊಂಡಿದೆ.

ಇದನ್ನು ಗಮನಿಸಿದ ಅವರು ಕೂಡಲೇ ಕಾರನ್ನು ನೀಲಮನಹಳ್ಳಿ ತಾಂಡಾದ ಬಳಿ ರಸ್ತೆ ಪಕ್ಕಕ್ಕೆ ನಿಲ್ಲಿಸಿ ಕೆಳಗಿಳಿದಿದ್ದಾರೆ. ಕೆಲವೇ ನಿಮಿಷಗಳಲ್ಲಿ ಬೆಂಕಿ ಸಂಪೂರ್ಣ ಕಾರಿಗೆ ಆವರಿಸಿದೆ. ಅಗ್ನಿಶಾಮಕ ಸಿಬ್ಬಂದಿ ಬಂದು ನೀರು ಮತ್ತು ನೊರೆಯ ಮೂಲಕ ಬೆಂಕಿ ನಂದಿಸುವುದರೊಳಗಾಗಿ ಕಾರು ಸಂಪೂರ್ಣ ಸುಟ್ಟು ಹೋಗಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದರು.

ಬೆಂಕಿ ನಂದಿಸಲು ಬೀದರ್ ಅಗ್ನಿಶಾಮಕ ಠಾಣಾಧಿಕಾರಿ ನವೀನ್ ಬಾಬು, ಸಿಬ್ಬಂದಿಗಳಾದ ರವಿ, ಶ್ರೀಕಾಂತ, ಸೆಲ್ವಿನ್, ಲಕ್ಷ್ಮಿಪುತ್ರ ಶ್ರಮಿಸಿದರು.

## ಪಹಲ್ಗಾಮ್ ಭಯೋತ್ಪಾದಕ ಕೃತ್ಯ, ಭಾರತದ ಮೇಲಿನ ನೇರ ದಾಳಿ:ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.23: 26 ಜನರನ್ನು ಬಲಿತೆಗೆದುಕೊಂಡ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಭಾರತದ ಮೇಲಿನ ನೇರ ದಾಳಿ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಈ ಕ್ಷಣದಲ್ಲಿ ಇಡೀ ರಾಷ್ಟ್ರವು ಭಯೋತ್ಪಾದಕರ ವಿರುದ್ಧ ಹೋರಾಡಲು ಸರ್ಕಾರದೊಂದಿಗೆ ಒಂದಾಗಿದೆ ಎಂದು ತಿಳಿಸಿದ್ದಾರೆ.

ಭಯೋತ್ಪಾದಕರನ್ನು ಬೇಟೆಯಾಡಲು

(2ನೇ ಪುಟ ನೋಡಿ)

## ಬೆಲೆ ಏರಿಕೆಯೇ ಸಿದ್ದರಾಮಯ್ಯ ಸರಕಾರದ 6ನೇ ಗ್ಯಾರಂಟಿ: ಬಿ.ವೈ.ವಿಜಯೇಂದ್ರ

ಮಲ್ಲಮ್ಮನುಡಿ ವಾರ್ತೆ ಯಾದಗಿರಿ:ಏ.23: ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಬಡವರು ಪರದಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಶಾಸಕ ಬಿ.ವೈ. ವಿಜಯೇಂದ್ರ ಅವರು ಎಂದು ಅವರು ತಿಳಿಸಿದ್ದಾರೆ.



ಇಂದು ಇಲ್ಲಿ ಜನಾಕ್ರೋಶ ಯಾತ್ರೆ ಸಂಬಂಧ ಬೃಹತ್ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯನವರು 5 ಗ್ಯಾರಂಟಿಗಳನ್ನು ಕೊಟ್ಟಿದ್ದು, 6ನೇ ಗ್ಯಾರಂಟಿಗೆ ಹೆಚ್ಚು ಪ್ರಚಾರ ಕೊಟ್ಟಿಲ್ಲ; ಅದುವೇ ಬೆಲೆ ಏರಿಕೆಯ ಗ್ಯಾರಂಟಿ ಎಂದು ವ್ಯಂಗ್ಯವಾಡಿದರು. ರಾಜ್ಯದ ಕಾಂಗ್ರೆಸ್ ಸರಕಾರವು 50ಕ್ಕೂ ಹೆಚ್ಚು ಅಗತ್ಯ ವಸ್ತುಗಳ ಬೆಲೆ ಏರಿಸಿದ್ದರಿಂದ ಜನಸಾಮಾನ್ಯರು, ರೈತರು, ಬಡವರು ಜೀವನ ಸಾಗಿಸುವುದೇ ಕಷ್ಟವಾಗಿದೆ ಎಂದು ಟೀಕಿಸಿದರು.

ಉಗ್ರರ ವಿರುದ್ಧ ಪ್ರಧಾನಿಯವರ ದಿಟ್ಟ ಕ್ರಮದ ವಿಶ್ವಾಸ

ಕಾಶ್ಮೀರದಲ್ಲಿ ಹಿಂದೂ ಪಂಡಿತರಿಗೆ ಅವಮಾನ ಮಾಡಿದ, ಸೈನಿಕರ ಸಾವಿಗೆ ಕಾರಣವಾದ 370ನೇ ವಿಧಿಯನ್ನು ಬಿಜೆಪಿ ಸರಕಾರ ರದ್ದು ಮಾಡಿದೆ. ನಿನ್ನೆ ನಡೆದ ಭಯೋತ್ಪಾದಕರ ದಾಳಿ ಘಟನೆಯ ಮಾಹಿತಿ ತಿಳಿದ ಪ್ರಧಾನಿ ನರೇಂದ್ರ ಮೋದಿಯವರು ಸೌದಿ ಅರೇಬಿಯದಿಂದ ಧಾವಿಸಿ ಬಂದಿದ್ದಾರೆ ಎಂದು ವಿಜಯೇಂದ್ರ ಅವರು ವಿವರಿಸಿದರು.

ಹಿಂದೂಗಳ ಮಾರಣಹೋಮದ ವಿಚಾರ ತಿಳಿದಾಕ್ಷಣ ಅಮಿತ್ ಶಾ, ಅಧಿಕಾರಿಗಳನ್ನು ಕಳಿಸಿದ್ದಾರೆ. ನಾವೆಲ್ಲರೂ ಹಿಂದೂಗಳು ಮೊದಲು. ಆ ಜಾತಿ, ಈ ಜಾತಿ ಅಲ್ಲ; 28 ಜನರ ಹತ್ಯೆಗೆ ಪಾಕಿಸ್ತಾನ ಬೆಲೆ ತೆರಲೇಬೇಕು ಎಂದು ನುಡಿದರು. ಉಗ್ರರ ವಿರುದ್ಧ ಪ್ರಧಾನಿಯವರು ದಿಟ್ಟಕ್ರಮ ಕೈಗೊಳ್ಳಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪೆಟ್ರೋಲ್, ಸ್ಟಾಂಪ್ ಡ್ಯೂಟಿ ದರ ಏರಿಸಿದ್ದಾರೆ ಎಂದು ಖಂಡಿಸಿದರು. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ ರೈತರು ಹೊಲಕ್ಕೆ ವಿದ್ಯುತ್ ಸಂಪರ್ಕ ಪಡೆಯಲು 25 ಸಾವಿರ ಕಟ್ಟಿದರೆ ಸಾಕಿತ್ತು. ಇವತ್ತು ಕಾಂಗ್ರೆಸ್ಸಿನ ಸಿದ್ದರಾಮಯ್ಯನವರ ಆಡಳಿತದಲ್ಲಿ 2.5 ಲಕ್ಷದಿಂದ 3 ಲಕ್ಷ ಕಟ್ಟಬೇಕಾಗಿದೆ ಎಂದು ಆಕ್ಷೇಪಿಸಿದರು. ಬಡವರ, ರೈತರ ಮೇಲೆ ಹೊರೆ ಆಗಿದೆ ಎಂದು ಟೀಕಿಸಿದರು.

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಕೇಂದ್ರವು 6 ಸಾವಿರ ಹಾಗೂ ಯಡಿಯೂರಪ್ಪ ಅವರು 4 ಸಾವಿರ ಕೊಡುತ್ತಿದ್ದರು. ಅದನ್ನೂ ಈಗ ನಿಲ್ಲಿಸಿದ್ದಾರೆ. ಗ್ರಾಮೀಣ ಭಾಗದಲ್ಲಿ ಬಡವರು ರಕ್ತಪರೀಕ್ಷೆ ಮಾಡಿಸಿಕೊಳ್ಳಲು 3ರಿಂದ 4 ಪಟ್ಟು ಹೆಚ್ಚು ದರ ಕೊಡಬೇಕಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಹಾಲಿನ ಮೇಲೆ 9 ರೂ. ಹೆಚ್ಚಿಸಿದ್ದಾರೆ ಎಂದು ವಿವರಿಸಿದರು. ಪೆಟ್ರೋಲ್ ಮೇಲೆ 3 ರೂ, ಡೀಸೆಲ್ ಮೇಲೆ 5.50 ರೂ. ಹೆಚ್ಚಿಸಿದ್ದಾರೆ ಎಂದು ದೂರಿದರು.

ಜಾತಿ–ಜಾತಿಗಳ ನಡುವೆ ಕಂದಕ

(2ನೇ ಪುಟ ನೋಡಿ)

## ಪಹಲ್ಗಾಮ್ ದಾಳಿಗೆ ಹಿಂದುತ್ವವೇ ಕಾರಣ: ರಾಬರ್ಟ್ ವಾದ್ರಾ

ಮಲ್ಲಮ್ಮನುಡಿ ವಾರ್ತೆ ನವದೆಹಲಿ:ಏ.23: ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ಪೈಶಾಚಿತ ಕೃತ್ಯವನ್ನು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರ ಪತಿ ರಾಬರ್ಟ್ ವಾದ್ರಾ ನೀಡಿರುವ ಹೇಳಿಕೆ ಭಾರೀ ಚರ್ಚೆಗೆ ಗ್ರಾಸವಾಗಿದೆ. ಕಾಶ್ಮೀರದ ನರಮೇಧವನ್ನು ಬಿಜೆಪಿಯ ಹಿಂದುತ್ವದ ಜೊತೆಗೆ ಲಿಂಕ್ ಮಾಡಿ ಟೀಕೆಗೆ ಗುರಿಯಾಗಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿರುವ ಅವರು, ಭಾರತದಲ್ಲಿ ಅಲ್ಪಸಂಖ್ಯಾತರು ಅನಾನುಕೂಲ ಮತ್ತು ತೊಂದರೆ ಅನುಭವಿಸುತ್ತಿದ್ದಾರೆ. ಬಿಜೆಪಿಯ ಹಿಂದುತ್ವದ ಪ್ರಚೋದನೆಯೇ ಇದಕ್ಕೆ ಕಾರಣ ಎಂದು ದೂಷಿಸಿದರು. ನಮ್ಮ ದೇಶದಲ್ಲಿ ಇಂದಿನ ಬಿಜೆಪಿ ಸರ್ಕಾರ ಪದೇ ಪದೇ ಹಿಂದುತ್ವದ ಬಗ್ಗೆ ಮಾತನಾಡುವುದನ್ನು ನಾವು ನೋಡುತ್ತಿದ್ದೇವೆ. ಮತ್ತೊಂದೆಡೆ ಅಲ್ಪಸಂಖ್ಯಾತರು ತೊಂದ–ರೆ ಅನುಭವಿಸುತ್ತಿದ್ದಾರೆ. ಈಗ ದುಷ್ಕೃತ್ಯವನ್ನು ಏಕೆ ಮಾಡಿದ್ದಾರೆ ಅಂತ ವಿಶ್ಲೇಷಣೆ ಮಾಡಿದ್ರೆ, ನಮ್ಮ ದೇಶದಲ್ಲಿ ಹಿಂದೂಗಳು ಮತ್ತು ಮುಸ್ಲಿಮರ ನಡುವೆ ವಿಭಜನೆ (ಒಡಕು) ಉಂಟಾಗಿದೆ ಎಂದು ಹೇಳಿದ್ದಾರೆ.

ಗುರುತನ್ನು ಪರಿಶೀಲಿಸಿ, ಹಿಂದೂಗಳನ್ನು ಮಾತ್ರವೇ ಕೊಲ್ಲುವ ಭಯೋತ್ಪಾದಕರ ಕೃತ್ಯವು ಪ್ರಧಾನಿ ಮೋದಿ ಅವರಿಗೆ ನೀಡಿದ ಸಂದೇಶವಾಗಿದೆ. ಹಿಂದೂಗಳು ಎಲ್ಲಾ ಮುಸ್ಲಿಮರಿಗೆ ತೊಂದರೆ ಕೊಡುತ್ತಿದ್ದಾರೆ ಅಂತ ಈ ರೀತಿಯ ಉಗ್ರ ಸಂಘಟನೆಗಳಿಗೆ ಅನ್ನಿಸಿದೆ. ಗುರುತನ್ನು ಪತ್ತೆ ಹಚ್ಚಿ ನಂತರ ಯಾರನ್ನೊ ಕೊಲ್ಲುವುದು ಪ್ರಧಾನಿಗೆ ನೀಡಿದ ಸಂದೇಶವಾಗಿದೆ. ಕಾರಣ, ಮುಸ್ಲಿಮರು ದುರ್ಬಲರಾಗಿದ್ದಾರೆ ಎನ್ನುವ ಭಾವನೆ ಉಗ್ರ ಸಂಘಟನೆಗಳಲ್ಲಿ ಇದೆ. ಅಲ್ಪಸಂಖ್ಯಾತರಲ್ಲಿ ದುರ್ಬಲರೆಂಬ ಭಾವನೆಯಿದೆ. ನಮ್ಮ ದೇಶದಲ್ಲಿ ನಾವು ಸುರಕ್ಷಿತರು ಮತ್ತು ಜಾತ್ಯತೀತರು ಎಂಬ ಭಾವನೆ ಸರ್ಕಾರದ ಮಟ್ಟದಿಂದ ಬರಬೇಕು. ಆಗ ಈ ರೀತಿಯ ಕೃತ್ಯಗಳು ನಡೆಯುವುದನ್ನು ನಾವು ನೋಡುವುದಕ್ಕೆ ಆಗಲ್ಲ ಎಂದು ಹೇಳಿದ್ದಾರೆ.

ಈ ವಿಡಿಯೋವನ್ನು ಹಂಚಿಕೊಂಡಿರುವ ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವಿಯಾ, ರಾಬರ್ಟ್ ವಾದ್ರಾ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸೋನಿಯಾ ಗಾಂಧಿ ಅವರ ಅಳಿಯ ಭಯೋತ್ಪಾದಕ ಕೃತ್ಯವನ್ನು ನಾಚಿಕೆಯಿಲ್ಲದೇ ಸಮರ್ಥಿಸಿಕೊಳ್ಳುತ್ತಾರೆ. ಭಯೋತ್ಪಾದಕರನ್ನು ಖಂಡಿಸುವ ಬದಲು ಅವರಿಗೆ ರಕ್ಷಣೆ ನೀಡುತ್ತಾರೆ. ಪಾಕಿಸ್ತಾನಿ ಭಯೋತ್ಪಾದಕರು ಮಾಡಿದ ದೌರ್ಜನ್ಯಗಳಿಗೆ ಭಾರತದ ಮೇಲೆ ಹೊಣೆಯನ್ನು ಹೊರಿಸುತ್ತಿದ್ದಾರೆ. ಇದು ನಾಚಿಕೆಗೇಡಿನ ಸಂಗತಿ ಎಂದು ಅಸಮಾಧಾನ ಹೊರಹಾಕಿದ್ದಾರೆ.

## ಒಂದನೇ ಪುಟದಿಂದ

# 6ನೇ ಗ್ಯಾರಂಟಿ: ಬಿ.ವೈ.ವಿಜಯೇಂದ್ರ

ನಿರ್ಮಿಸುವ ಕಾರ್ಯಅಭಿವೃದ್ಧಿ ಕೆಲಸ ಕಾರ್ಯ ಶೂನ್ಯವಾಗಿದೆ. ಸಮಾಜ– ಸಮಾಜಗಳ ನಡುವೆ ಈ ಸರಕಾರ ವಿಷಬೀಜ ಬಿತ್ತುತ್ತಿದೆ. ಜಾತಿ– ಜಾತಿಗಳ ನಡುವೆ ಕಂದಕ ನಿರ್ಮಿಸುವ ಕಾರ್ಯವನ್ನು ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದು ವಿಜಯೇಂದ್ರ ಅವರು ಟೀಕಿಸಿದರು.

ಈ ಸರಕಾರ ಅಧಿಕಾರಕ್ಕೆ ಬಂದು 2 ವರ್ಷವಾಗುತ್ತಿದ್ದು, ಅಭಿವೃದ್ಧಿ ಕಾರ್ಯಕ್ಕೆ ಯಾವುದೇ ಹಣ ನೀಡುತ್ತಿಲ್ಲ ಎಂದು ಆಕ್ಷೇಪಿಸಿದರು. ಬಿಜೆಪಿ ಸರಕಾರ ಇದ್ದಾಗ ಯಡಿಯೂರಪ್ಪ ಅವರು ಯಾದಗಿರಿ ಜಿಲ್ಲೆ ಘೋಷಿಸಿ ನೂರಾರು ಕೋಟಿ ಅಭಿವೃದ್ಧಿ ಮೊತ್ತ ನೀಡಿದ್ದಾರೆ ಎಂದು ವಿವರಿಸಿದರು.ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಬಿ. ಶ್ರೀರಾಮುಲು,ಮಾಜಿ ಸಚಿವ ನರಸಿಂಹ ನಾಯಕ ರಾಜುಗೌಡ,ಶಾಸಕ ದೊಡ್ಡಣ್ಣಗೌಡ ಪಾಟೀಲ, ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ,ಬಿ.ಜಿ.ಪಾಟೀಲ,ಶಶೀಲ್ ನಮೋಶಿ,ರಾಜ್ಯ ಕಾರ್ಯದರ್ಶಿ ತಮ್ಮೇಶ್ ಗೌಡ, ಶರಣು ತಳ್ಳಿಕೇರಿ,ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ,

ರಾಚನಗೌಡ ಮುದ್ನಾಳ್,ಮಹೇಶ್ ರೆಡ್ಡಿ ಗೌಡ ಮುದ್ನಾಳ್,ನಾಗರತ್ನ ಕುಪ್ಪಿ,ಮಾಜಿ ಜಿಲ್ಲಾಧ್ಯಕ್ಷರಾದ ಅಮೀನ್ ರೆಡ್ಡಿ ಯಾಳಗಿ ಹಾಗೂ ಶರಣಭೂಪಾಲರೆಡ್ಡಿ,ದೇವಿಂದ್ರನಾಥ ನಾದ,ಹೆಚ್.ಸಿ ಪಾಟೀಲ್,ರಾಜಾ ಹನುಮಂತ ನಾಯಕ ತಾತಾ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರು ಕಾಮ ಹಾಗೂ ಪರಶುರಾಮ ಕುರಕುಂದಿ, ಜಿಲ್ಲಾ ವಕ್ತಾರ ಹಣಮಂತ ಇಟಗಿ, ಶ್ರೀಧರ ಸಾಹುಕಾರ, ಸುನೀತಾ ಚೌವ್ಹಾಣ್,ಡಾ.ಚಂದ್ರಶೇಖರ್ ಸುಬೇದಾರ್, ರಾಜಶೇಖರ ಕಾಡಂನೂರ, ಲಿಂಗಪ್ಪ ಹತ್ತಿಮನಿ,ಜಿಲ್ಲಾ ಪದಾಧಿಕಾರಿಗಳು,ಆರು ಮಂಡಲ ಅಧ್ಯಕ್ಷರು,ಎಲ್ಲಾ ಮೋರ್ಚಾದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸೇರಿ ಸಾವಿರಾರು ಕಾರ್ಯಕರ್ತರು ಭಾಗಿಯಾಗಿದ್ದರು

# ಭಾರತದ ಮೇಲಿನ ನೇರ ದಾಳಿ:ಖರ್ಗೆ

ಸರ್ಕಾರ ತನ್ನ ಎಲ್ಲಾ ಶಕ್ತಿಯನ್ನು ಬಳಸಬೇಕೆಂದು ಅವರು ಒತ್ತಾಯಿಸಿದರು. ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಿನ್ನೆ ಮಧ್ಯಾಹ್ನ 2:30 ರ ಸುಮಾರಿಗೆ ನಡೆದ ಘಟನೆ ತೀವ್ರ ದುಃಖಕರವಾಗಿದೆ. ಭಯೋತ್ಪಾದಕರು ಅಮಾಯಕ ಮತ್ತು ಅನುಮಾನಾಸ್ಪದ ಪ್ರವಾಸಿಗರನ್ನು ಭೀಕರವಾಗಿ ಕೊಲೆ ಮಾಡಿದ್ದಾರೆ. ಇದು ನಮಗೆಲ್ಲರಿಗೂ ತೀವ್ರ ನೋವು, ಆಘಾತ ಮತ್ತು ದುಃಖವನ್ನುಂಟು ಮಾಡಿದೆ. ಕಾಂಗ್ರೆಸ್ ಪಕ್ಷವು ಈ ಹೇಡಿತನದ ಭಯೋತ್ಪಾದಕ ಕೃತ್ಯಕ್ಕೆ ಕಾರಣರಾದವರನ್ನು ಖಂಡಿಸುತ್ತದೆ ಎಂದಿದ್ದಾರೆ.ಇಂದು ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಪಹಲ್ಗಾಮ್ ದಾಳಿ ನಮ್ಮ ರಾಷ್ಟ್ರದ ಏಕತೆ ಮತ್ತು ಸಮಗ್ರತೆಯ ಮೇಲೆ ನೇರ ದಾಳಿಯಾಗಿದೆ. 2000 ದಲ್ಲಿ ನಡೆದ ಭೀಕರ ಚಿಟ್ಟಿಸಿಂಗ್‌ಪುರ ಹತ್ಯಾಕಾಂಡದ ನಂತರ ಇದು ಭಯೋತ್ಪಾದಕರು ಮತ್ತು ಪ್ರತ್ಯೇಕತಾವಾದಿಗಳ ಅತ್ಯಂತ ಲಜ್ಜೆಗೆಟ್ಟ ಮತ್ತು ಅತಿರೇಕದ ಪ್ರಯತ್ನಗಳಲ್ಲಿ ಒಂದಾಗಿದೆ. ಮುಗ್ಧ ನಾಗರಿಕರನ್ನು ಕೊಂದವರು ಮನುಷ್ಯರಲ್ಲ ಎಂದು ನಾವು ದೃಢವಾಗಿ ಪುನರುಚ್ಚರಿಸುತ್ತೇವೆ ಎಂದು ಹೇಳಿದ್ದಾರೆ.

ಜಮ್ಮು–ಕಾಶ್ಮೀರದಲ್ಲಿ ಕಠಿಣ ಕ್ರಮ ಕೈಗೊಳ್ಳಲಿದ್ದಾರೆ ಎಂದು ಅಮಿತ್ ಶಾ ನನಗೆ ಭರವಸೆ ನೀಡಿದ್ದಾರೆ. ಭಯೋತ್ಪಾದಕ ದಾಳಿಯ ಕುರಿತು ಚರ್ಚಿಸಲು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ನಾಳೆ ಬೆಳಗ್ಗೆ 11 ಗಂಟೆಗೆ ದೆಹಲಿಯ ಎಐಸಿಸಿ ಕಚೇರಿಯಲ್ಲಿ ಸಭೆ ಸೇರಲಿದೆ ಎಂದು ತಿಳಿಸಿದ್ದಾರೆ.ಪಕ್ಷಪಾತದ ರಾಜಕೀಯಕ್ಕೆ ಇದು ಸಮಯವಲ್ಲ ಎಂದು ಹೇಳಿದ ಖರ್ಗೆ, ಈ ಭಯೋತ್ಪಾದಕ ದಾಳಿಯ ಅಪರಾಧಿಗಳನ್ನು ನ್ಯಾಯದ ಕಟಕಟೆಗೆ ತರುವ ಮೂಲಕ ಜೀವ ಕಳೆದುಕೊಂಡವರಿಗೆ ಮತ್ತು ಅವರ ದುಃಖಿತ ಕುಟುಂಬಗಳಿಗೆ ನ್ಯಾಯ ಖಚಿತಪಡಿಸಬೇಕು ಎಂದರು.ಈ ಕ್ಷಣದಲ್ಲಿ ನಾವೆಲ್ಲರೂ ಸರ್ಕಾರದೊಂದಿಗೆ ಒಂದಾಗಿದ್ದೇವೆ ಮತ್ತು ಇಂತಹ ಘಟನೆಗಳು, ಭಯೋತ್ಪಾದಕರು ಮತ್ತು ನಮ್ಮ ವಿರುದ್ಧ ಹೋರಾಡುವ ಯಾರೇ ಆಗಲಿ ನಾವು ಒಟ್ಟಾಗಿ ಹೋರಾಡಬೇಕಾಗಿದೆ. ದೇಶವನ್ನು ಉಳಿಸಲು ಮತ್ತು ದೇಶದ ಏಕತೆ ಮತ್ತು ಸಮಗ್ರತೆಗಾಗಿ ನಾವು ಒಂದಾಗುತ್ತೇವೆ ಎಂದು ಅವರು ಹೇಳಿದರು.

ಭಯೋತ್ಪಾದಕನನ್ನು ಬೇಟೆಯಾಡಲು ಸರ್ಕಾರ ತನ್ನ ಎಲ್ಲಾ ಶಕ್ತಿಯನ್ನು ಬಳಸಬೇಕೆಂದು ನಾವು ಒತ್ತಾಯಿಸುತ್ತೇವೆ, ಈಗ ಸುಮಾರು 22 ಗಂಟೆಗಳು ಕಳೆದಿವೆ. ಜಮ್ಮು ಮತ್ತು ಕಾಶ್ಮೀರದ ಭದ್ರತಾ ವ್ಯವಸ್ಥೆಯಲ್ಲಿ ಪ್ರವಾಸಿಗರ ವಿಶ್ವಾಸವನ್ನು ಕಾಪಾಡಿಕೊಳ್ಳಲು ಸರ್ಕಾರ ಸಾಧ್ಯವಿರುವ ಎಲ್ಲವನ್ನೂ ಮಾಡಬೇಕು ಎಂದರು.

## ಏ. 30 ರಂದು ಬಸವ ಜಯಂತಿ ಪ್ರಯುಕ್ತ: ಸಾರ್ವಜನಿಕರಿಗೆ ಅನ್ನದಾಸೋಹ ಮತ್ತು ಆರೋಗ್ಯ ತಪಾಸಣಾ ಶಿಬಿರ ಆಯೋಜನೆ

ಕಲಬುರಗಿ,ಏ.23:ಇದೇಏಪ್ರಿಲ್ 30 ರಂದು ಬಸವ ಜಯಂತಿ ಪ್ರಯುಕ್ತಲೋಕೋಪಯೋಗಿ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳವತಿಯಿಂದಕಲಬುರಗಿ ನಗರದ ಸರದಾರ ವಲ್ಲಭಭಾಯಿ ಪಟೇಲ್ ವೃತ್ತದ ಮರಾಠ ಮಂಡಳ ಎದುರುಗಡೆಯಲ್ಲಿ ಸಾರ್ವಜನಿಕರಿಗೆಅನ್ನದಾಸೋಹ ಹಾಗೂ ಕಲಬುರಗಿಯ ಶಾಂತಾ ಆಸ್ಪತ್ರೆಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನುಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗಪಡೆಯಬೇಕೆಂದು ಕಲಬುರಗಿಲೋಕೋಪಯೋಗಿ ಇಲಾಖೆಯ ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ) ಮುಖ್ಯ ಇಂಜಿನೀಯರ್ ಕಚೇರಿಯ ಸಹಾಯಕ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

# ಪಹಲ್ಲಾಮ್ ದಾಳಿ: ಮರತೂರಕರ್ ಖಂಡನೆ

ಕಲಬುರಗಿ:ಏ.23:ಜಮ್ಮುಮತ್ತು ಕಾಶ್ಮೀರದ ಪಹಲ್ಲಾಮ್‌ನಲ್ಲಿ ಅಮಾಯಕರ ಮೇಲೆ ದಾಳಿ ಮಾಡಿರುವುದು ಇದೊಂದು ಹೇಯ ಕೃತ್ಯ ಮತ್ತು ಇದು ಭಯೋತ್ಪಾದನೆಮರುಸ್ಥಾಪಿಸುವ ಪ್ರಯತ್ನ ಇದನ್ನುಪ್ರತಿಯೊಬ್ಬ ನಾಗರಿಕರು ಖಂಡಿಸುತ್ತೇವೆ ಎಂದು ಮಹಾಗಾಂವ ಬಿಜೆಪಿ ಮುಖಂಡ ಮಲ್ಲಿಕಾರ್ಜುನ ಮರತೂರಕರ್ ಅವರು ತೀವ್ರವಾಗಿ ಖಂಡಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದಅವರು,ಧರ್ಮದಹೆಸರು ಕೇಳಿ ಗುಂಡು ಹಾರಿಸಿರುವುದು ಭಾರತದ ವಿರೋಧಿ ಶಕ್ತಿಗಳ ಕೈವಾಡ ಇರುವುದು ಬಹಳ ಸ್ಪಷ್ಟ. ಇದನ್ನು ಕೂಡಲೇ ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಂಡು ಮಟ್ಟ ಹಾಕಬೇಕು.

# ಕಾಂಗ್ರೆಸ್ ನೀತಿಗಳ ವಿರುದ್ಧ ಜನತಾದಳ ಆಕ್ರೋಶ



ಅಫಜಲಪುರ:ಏ.23:ದಿನನಿತ್ಯ ಬಳಕೆ ಮಾಡುವ ವಸ್ತುಗಳ ಕಾಂಗ್ರೆಸ ಸರಕಾರ ಅಧಿಕಾರಕ್ಕೆ ಬಂದಾಗಿನಿಂದಲು ಗ್ಯಾರಂಟಿಗಳ ಹೆಸರಿನ ಮೇಲೆ ರೈತರಿಗೆ ಮತ್ತು ಬಡ ಕೂಲಿ ಕಾರ್ಮಿಕರಿಗೆ ಹೋರೆಯಾಗಿ ವಸ್ತುಗಳ ಮೇಲೆ ದರ ಹೆಚ್ಚಿಸಿ ಜನರಿಗೆ ಜೀವನ ನಡೆಸಲು ತೊಂದರೆ ಆಗುತ್ತಿದೆ. ಹಾಲು ದರ ಎಣ್ಣೆ ದರೆ, ವಿದ್ಯುತ್ ದರ, ನೋಂದಣಿ ಶುಲ್ಕ ಹೆಚ್ಚಳ, ಮರಣೋತ್ತರ ಪ್ರಮಾಣ ಪತ್ರ ಹೆಚ್ಚಳ, ಬಸ್ಸಿನ ದರ, ವೈದ್ಯಕೀಯ ಪ್ರಮಾಣ ಪತ್ರ, ದತ್ತು ಸ್ವೀಕಾರ ಪತ್ರ. ಇನ್ನೂ ಹಲವಾರು ವಸ್ತುಗಳ ಮೇಲೆ ಬೆಲೆ ಏರಿಕೆ ಮಾಡಿದರಿಂದ ಜನರಿಗೆ ತೊಂದರೆ ಆಗುತ್ತಿದೆ. ಟಿ.ಎಸ್.ಸಿ ಹಣ ದುರ್ಬಳಕೆ ಸೇರಿದಂತೆ ಹತ್ತು ಹಲವು ಕಾಂಗ್ರೆಸ್ ನೀತಿಗಳ ವಿರುದ್ಧ ಜನತಾದಳ ಆಕ್ರೋಶವ್ಯಕ್ತಪಡಿಸಿ ಅಂಬೇಡ್ಕರ ವೃತ್ತದಿಂದ ಕಾಲ ನಡಿಗೆಯ ಮುಖಾಂತರ ತಹಸೀಲ್ದಾರ ಕಚೇರಿ ವರೆಗೆ ಪ್ರತಿಭಟನೆ ನಡೆಸಿತು.

ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಜೆ.ಡಿ.ಎಸ್ ಜಿಲ್ಲಾ ಕಾರ್ಯದರ್ಶಿ ರಾಜು ಬಡದಾಳ.ಕಾಂಗ್ರೇಸ ಅಧಿಕಾರಕ್ಕೆ ಬಂದಾಗಿನಿಂದಲೂ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ದಿನ ಬೆಳಗಾದರೆ ಪ್ರತಿಯೊಂದು ವಸ್ತುವಿನ ದರ ಏರಿಕೆ ಮಾತ್ರ ನಿಲ್ಲುತ್ತಿಲ್ಲ. ಜಾತಿ ಆಧಾರದ ಮೇಲೆ ಮೀಸಲಾತಿ ಜೆ.ಡಿ.ಎಸ್. ಯಾವತ್ತು ಸಹಿಸುವುದಿಲ್ಲ. ರಾಜ್ಯದಲ್ಲಿ ನೆಮ್ಮದಿಯಿಂದ ಜನ ಜಾತಿ ಗಣತಿಯಲ್ಲಿ ಮೀಸಲಾತಿಯನ್ನು ಸರಿಪಡಿಸಲಿಲ್ಲಾ ಅದಕ್ಕೆ ಜನ "ಸಾಕಪ್ಪ–ಸಾಕೂ ಕಾಂಗ್ರೆಸ್ ಸರಕಾರ ಅನ್ನುತ್ತಿದ್ದಾರೆ"

ಕಲಬುರಗಿ ಜಿಲ್ಲೆಯ ಪ್ರಮುಖ ಬೆಳೆಯಾದ ತೊಗರಿ ಬೆಳೆ ನೆಟೆ ರೋಗದಿಂದ ರೈತರು ತತ್ತರಿಸಿದಾಗ ಕಲಬುರಗಿ ಜಿಲ್ಲೆಯ ರೈತರು ಸರಕಾರದ ಕಡೆ ಮುಖ ಮಾಡಿದಾಗ ಕ್ಯಾರೆ ಎನ್ನದ ಕಾಂಗ್ರೆಸ್ ಸರಕಾರ ರೈತ ವಿರೋಧಿ, ಬಡ ಮತ್ತು ಕೂಲಿ ಕಾರ್ಮಿಕರ ವಿರೋಧಿಯಾಗಿದೆ. ಆದರೇ ಜೆ.ಡಿ.ಎಸ್. ಪಕ್ಷ ಇದನ್ನು ಸಹಿಸಲಾರದೇ ಪ್ರತಿಭಟನೆ ಮುಖಾಂತರ ತಿಳಿಸುತ್ತಿದ್ದೇವೆ ಎಂದರು.

ನಂತರ ಮಾತನಾಡಿದ ಸಿದ್ದು ಸುಲ್ತಾನ್ ಪುರ್ ದಿನನಿತ್ಯದ ವಸ್ತುಗಳ ಮೇಲಿನ ದರ ತಕ್ಷಣ ಇಳಿಕೆಯಾಗಬೇಕು. ನೆಟೆ ರೋಗದಿಂದ ಹಾಳಾದ ತೊಗರಿಯ ಬೆಳೆಗೆ ತಕ್ಷಣ ಪ್ರತಿ ಎಕರೆಗೆ ರೂ. 30,000 ಪರಿಹಾರ ಕೊಡಬೇಕು.ಜಿಲ್ಲೆಯ ತೋಟನ ಮನೆಗಳಿಗೆ ಸಿಂಗಲ್ ಪೇಸ್ ವಿದ್ಯುತ್ ತಕ್ಷಣ ನೀಡಬೇಕು.ಮಹಾರಾಷ್ಟ್ರ ಉಜನಿ ಡ್ಯಾಮನಿಂದ ಭೀಮಾ ನದಿಗೆ ಬೇಸಿಗೆಕಾಲದಲ್ಲಿ ಐದು.ಟಿ. ಎಮ್.ಸಿ ನೀರು ಹರಿಸಬೇಕು ಎಂಬ ಬೇಡಿಕೆಗಳ ಬಗ್ಗೆ ಮಾತನಾಡಿದರು.ತಾಲೂಕು ದಂಡಾಧಿಕಾರಿಗಳಾದ ಸಂಜಯ್ ಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈಸಂದರ್ಭದಲ್ಲಿ ಮಹಾನಂದ ಪಡಶೆಟ್ಟಿ,ಸುನಿತಾಕೊರವ್ಯಾರ್,ಮಾರುತಿ ಚವಾಣ್, ಬೈಲಪ್ಪ ಪಟ್ಟೆದಾರ, ಹನುಮಂತರಾಯ ಬಿರಾದರ್, ನಿಂಗಣ್ಣ ಇರಕರ, ಶಿವಾನಂದ ಬಡದಾಳ, ನಾಗಪ್ಪ ಪೂಜಾರಿ, ಸಾಗರ್ ರಾಥೋಡ್, ನಾಗಣ್ಣ ಎಸ್ ವಾರದ್, ಚಿತಾಪುರ್. ಬಸಂಡಿ ಆಳೋಳ್ಳಿ,ಸಂಜು ಕುಮಾರ್ ಮಡಕಿ ಅಶೋಕ್ ಪರಿಟ್,ಚನ್ನಬಸು ಚೋರ್ಮಲೆ. ಜೆಡಿಎಸ್ ಸದಸ್ಯರು ಹಾಗೂ ಅನೇಕ ಮುಖಂಡರು ಪಾಲ್ಗೊಂಡಿದ್ದರು.

# ಪತ್ರಕರ್ತ ಹಾಜಿಪಾಶಾಗೆ ದತ್ತಿ ನಿಧಿ ಪ್ರಶಸ್ತಿ: ಕೆ ಯು ಡಬ್ಲ್ಯೂ ಜೆ ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯ ಹಾಜಿಪಾಶಾ(ಮೌಲಾನಾ ಸಾಬ್) ಅವರಿಗೆ ಕೆರಳ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದಿಂದ ವಾರ್ಷಿಕ ದತ್ತಿನಿಧಿ ಪ್ರಶಸ್ತಿ ನೀಡಿ ಗೌರವಿಸಲಿದ್ದು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಿಂದ ಹರ್ಷ ವ್ಯಕ್ತಪಡಿಸಲಾಗಿದೆ.

ಹಾಜಿಪಾಶಾ ಅವರು ಈ ಹಿಂದೆ ಒಂದು ವರೆ ದಶಕಗಳ ಕಾಲ ಬೀದರ್ ಕಿ ಆವಾಜ್ ಹಿಂದಿ ಪತ್ರಿಕೆ, ಒಂದು ದಶಕಗಳ ಕಾಲ ನಾನಕ ಟೈಮ್ಸ್ ಹಿಂದಿ ಪತ್ರಿಕೆಯಲ್ಲಿ, ಸೇವೆ ಸಲ್ಲಿಸಿ 2012ರಿಂದ ವರ್ಷಗಳಿಂದ ಕನ್ನಡಪ್ರಭ ಕನ್ನಡ ಪತ್ರಿಕೆಯಲ್ಲಿ ಸಹಾಯಕ ವರದಿಗಾರರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅತ್ಯಂತ ಸರಳ ಹಾಗೂ ಸ್ವಾಭಿಮಾನಿ ಪತ್ರಕರ್ತರೆಂದು ಹೆಸರು ಗಳಿಸಿರುವ ಅವರು ಕಳೆದ ಮೂರು ವರ್ಷಗಳಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಾಗಿ ಸಂಘಟಿತರಾಗಿ ಸೇವೆ ಸಲ್ಲಿಸುತ್ತಿರುವರು. ಇವರ ಹಿರಿತನವನ್ನು ಗುರುತಿಸಿ ಕೆರಳ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದಿಂದ ಉದ್ಯಮಿ ಸದಾಶಿವ ಶೆಟ್ಟಿ ಕುಳುರು ಕನ್ಯಾನ ಇವರು ನೀಡುವ ವಾರ್ಷಿಕ ದತ್ತಿನಿಧಿ ಪ್ರಶಸ್ತಿಗೆ ಹಾಜಿಪಾಶಾ ಅವರನ್ನು ಗುರುತಿಸಿರುವುದಕ್ಕೆ ಕೆಯುಡಬ್ಲು ??ಜೆ ಜಿಲ್ಲಾ ಘಟಕವು ಕೇರಳ ಕಾಸರಗೋಡು ಜಿಲ್ಲಾ ಕನ್ನಡ ಪತ್ರಕರ್ತರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುತ್ತದೆ. ಮೇ.3ರಂದು ಕಾಸರಗೋಡುದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

# ಅಲೆಮಾರಿ ಸಮುದಾಯದವರನ್ನು ಮುಖ್ಯ ವಾಹಿನಿಗೆ ತರಬೇಕಿದೆ:ಪಲ್ಲವಿ ಜಿ.



ಕಲಬುರಗಿ,ಏ.23:ರಾಜ್ಯದಲ್ಲಿರುವ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಹಾಗೂ ಅರೇ ಅಲೆಮಾರಿ ಜನಸಮುದಾಯ ಶಿಕ್ಷಣದಿಂದ ವಂಚಿತವಾಗಿ ಸಮಾಜದಿಂದ ವಿಮುಖವಾಗಿದ್ದು, ಇವರನ್ನು ಮುಖ್ಯವಾಹಿನಿಗೆ ತರಬೇಕಿದೆ ಎಂದು ಕರ್ನಾಟಕ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಹೇಳಿದರು.

ಮಂಗಳವಾರ ಇಲ್ಲಿನ ಡಿ.ಸಿ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ನಾಗರಿಕ ಸಮಾಜದಿಂದ ದೂರ ಇರುವ ಅಲೆಮಾರಿ ಸಮುದಾಯಕೆ ಬದುಕು ಕಟ್ಟಿಕೊಳ್ಳಲು ಅನೇಕ ಕಾರ್ಯಕ್ರಮರೂಪಿಸಿದ್ದು,ಅಧಿಕಾರಿ ವರ್ಗ ಈ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೆ ತರಬೇಕಿದೆ ಎಂದರು.

## ಪ್ರತಿಯೊಬ್ಬರಿಗೂ ಕಾನೂನು ಅರಿವು ಇರಬೇಕು



ಸೇಡಂ, ಏ. 23: ತಾಲೂಕಿನ ಮುಧೋಳ ಜಿಲ್ಲಾಪಂಚಾಯತ ಕ್ಷೇತ್ರದ ವ್ಯಾಪ್ತಿಗೆ ಒಳಪಡುವು ಗುಂಡೇಪಲ್ಲಿ (ಕೆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಖಿ ಒನ್ ಸಾಪ್ಟ ಸೆಂಟರ್ ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತಪೋಲಿಸ ಇಲಾಖೆ ಇವರುಗಳ ಸಹಯೋಗ ದೊಂದಿಗೆ ಮಹಿಳಾ ಮತ್ತು ಮಕ್ಕಳ ಕಾನೂನಿನ ಅರಿವು ಮತ್ತು ಪರಿಹಾರೋಪಾಯಗಳ ಕುರಿತು ವಿಶೇಷ ಉಪನ್ಯಾಸ ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯು ಸ್ಥಳೀಯ ಮುಧೋಳ ಪೊಲೀಸ್ ಠಾಣೆಯ ಎ.ಎಸ್.ಐ ಗೌರಿಶಂಕರ್ ಬಾಗೋಡಿಕರ್ ಉದ್ಘಾಟಿಸಿದರು. ನಂತರ ಮಾತನಾಡುತ್ತಾ ಎಲ್ಲರಿಗೂ ಕಾನೂನಿನ ಅರಿವು ಇರಬೇಕು ಅಪರಾಧ ರೈತ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದರು ವಿಶೇಷ ಸಂಪನ್ಮೂಲ ವ್ಯಕ್ತಿಗಳಾಗಿ ಸಖಿ ಒನ್ ಸಾಪ್ಟ ಸೆಂಟರ್ ಕಲ್ಬುರ್ಗಿಯಿಂದ ಆಗಮಿಸಿದ ಪ್ರಮೀಳಾ ಮೋದಿ ನ್ಯಾಯವಾದಿಗಳು ಮಾತನಾಡುತ್ತಾ ಪೋಸ್ಕೊ ಕಾಯಿದೆ ಅದರ ತೀವ್ರತೆ ಬಗ್ಗೆ ವಿವರವಾಗಿ ವಿದ್ಯಾರ್ಥಿಗಳಿಗೆ ತಿಳಿಸಿದರು ಇತ್ತೀಚಿನ ದಿನಗಳಲ್ಲಿ ಎಲ್ಲ ದುರ್ನಡತೆಗಳು ಕಾನೂನಿನ ಅಡಿಯಲ್ಲಿ ಬರುತ್ತಿವೆ ಹಾಗಾಗಿ ಕಾನೂನು ಜ್ಞಾನ ಎಲ್ಲರಿಗೂ ಅನಿವಾರ್ಯ ಎಂದರು ಆಪ್ತ ಸಮಾಲೋಚಕಿ ಪ್ರಭಾವತಿ ಕರ್ಲಿ ಸಖಿ ವನ್ ಸಾಫ್ಟ್ ಸೆಂಟರ್ ಇದರ ಕಾರ್ಯ ಇದರ ಪ್ರಯೋಜನೆಗಳ ಬಗ್ಗೆ ಮಾಹಿತಿ ನೀಡಿದರು ಲೈಂಗಿಕ್ ದೌರ್ಜನ್ಯ ಲೈಂಗಿಕ ಕಿರುಕುಳ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದು ಕಾನೂನಿನ ತಿಳುವಳಿಕೆ ಹಾಗೂ ಶಿಕ್ಷಯ ಪ್ರಮಾಣ ಗೋತ್ತಿಲ್ಲ ಹಾಗಾಗಿ ಸಖಿ ಒನ್ ಸಾಫ್ಟ್ ಸೆಂಟರ್ 24/7 ಕೆಲಸ ಮಾಡುತ್ತ ಪಿಡಿತರಿಗೆ ಉಚಿತ ಕಾನೂನಿನ ನೆರವು ಪೋಲಿಸರ ಸಹಾಯ ಮಾನಸಿಕ ಒತ್ತಡ ನಿರ್ಮಾಲನೆ ತಕ್ಷ ಣ ಅಶ್ರಯ ನೀಡುವದು ಎಂದರು ಪ್ರಾಂಶುಪಾಲರಾದ ಡಾ. ಜಯಕಿಷನ ಠಾಕುರ ಮಾತನಾಡಿದರು. ಈ ಸಂದರ್ಭದಲ್ಲಿ

ಡಾ. ಸೌಭಾಗ್ಯ ಕನ್ನಡ ಉಪನ್ಯಾಸಕರು ಸ್ವಾಗತಿಸಿದರು ಡಾ. ಗುಂಡಪ್ಪ ಸಿಂಗೇ ವಂದಿಸಿದರು. ಶ್ರೀ ಜಯಣ್ಣ ಕೊರವರ ಕಾರ್ಯಕ್ರಮ ನಿರೂಪಿಸಿದರು. ಗಂಗಾರಾಮ ರಾಥೋಡ್ ಅತಿಥಿಗಳ ಪರಿಚಯಿಸಿದರು ಶರಣು ಹಾಗೂ ಇನ್ನಿತರರು ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

# ಉಗ್ರರ ದುಷ್ಕೃತಕ್ಕೆ ತೀವ್ರ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ಕಾಶ್ಮೀರದ ಪಹಲ್ಗಾಮ್ ಬಳಿಯ ಬೈಸರನ್ ಕಣಿವೆಯಲ್ಲಿ ಉಗ್ರರು ನಡೆಸಿದ ಘೋರ ದುಷ್ಕೃತ್ಯವನ್ನು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ್ ಕುಲಕರ್ಣಿ ತೀವ್ರವಾಗಿ ಖಂಡಿಸಿದ್ದಾರೆ.

ಉಗ್ರರು ಗುಂಡಿನ ಮಳೆಗರೆದು ಕರ್ನಾಟಕದ ಇಬ್ಬರು ಸೇರಿ 28 ಪ್ರವಾಸಿಗರನ್ನು ಹತ್ಯೆಗೈದಿರುವುದು ಅಕ್ಷಮ್ಯ ಹಾಗೂ ಅಮಾನವೀಯ ಎಂದು ಹೇಳಿದ್ದಾರೆ.

ಅಮಾಯಕರ ಮೇಲಿನ ಉಗ್ರರ ದಾಳಿಗೆ ದೇಶದಾದ್ಯಂತ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಕೇಂದ್ರ ಸರ್ಕಾರ ದಾಳಿಯಲ್ಲಿ ಭಾಗಿಯಾದವರನ್ನು ಸುಮ್ಮನೆ ಬಿಡಬಾರದು. ಉಗ್ರರನ್ನು ಮಟ್ಟ ಹಾಕಬೇಕು ಎಂದು ಒತ್ತಾಯಿಸಿದ್ದಾರೆ.

ದಾಳಿಯಲ್ಲಿ ಮೃತಪಟ್ಟ ಶಿವಮೊಗ್ಗದ ಮಂಜುನಾಥರಾವ್ ಸೇರಿ ಇಬ್ಬರ ಕುಟುಂಬಗಳಿಗೆ ತಲಾ 1 ಕೋಟಿ ರೂಪಾಯಿ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

# ಭ್ರಷ್ಟ ಬೇಜವಾಬ್ದಾರಿ ಕಂಪ್ಯೂಟರ್ ಆಪರೇಟರನ್ನು ಸೇವೆಯಿಂದ ಅಮಾನತುಗೊಳಿಸಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ಯದಲಾಪುರ ಗ್ರಾಮ ಪಂಚಾಯತ್ ನಲ್ಲಿ ಕಾರ್ಯನಿರ್ವಹಿಸುತ್ತಿರುವ ಕಂಪ್ಯೂಟರ್ ದೇವೇಂದ್ರ ಇವರು ಯದಲಾಪುರ ಗ್ರಾಮ ಪಂಚಾಯತಿನಲ್ಲಿ ಸುಮಾರು ಹತ್ತು ವರ್ಷಗಳಿಗಿಂತ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಇವರು ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಹಣದ ಬೇಡಿಕೆ ಇಡುತ್ತಿದ್ದಾರೆ. ಹಣ ಪಡೆದ ನಂತರ ಯಾವುದೇ ತರಹದ ಸರ್ವಜನಿಕರ ಕೆಲಸವನ್ನು ಮಾಡದೆ ಮೇಲಾಧಿಕಾರಿಗಳ ಕೈಗೊಂಬೆಯಾಗಿ ತನ್ನಮನಬಂದಂತೆ ಹಲವು ಕಾಮಗಾರಿಗಳ ಓ. ಓ. ಖ ಆಗಲಿ ಒ ಎಸ್ ಆಗಲಿ ಮತ್ತು ಡಿಜಿಟಲ್ ಖಾತೆಗಳ ಅನುಮೋದನೆ ನೀಡಿರುವುದನ್ನು ಗಣಕಯಂತ್ರದಲ್ಲಿ ಪ್ರಿಂಟ್ ನೀಡುವ ಸಲುವಾಗಿ ಸಾರ್ವಜನಿಕರ ಹತ್ತಿರ ಸುಮಾರು 1000 ದಿಂದ 2000 ಲಂಚ ತೆಗೆದುಕೊಳ್ಳುತ್ತಿದ್ದಾರೆ ಇಂತಹ ಒಬ್ಬ ಭ್ರಷ್ಟ ಬೇಜವಾಬ್ದಾರಿಂದ ಕೆಲಸ ಮಾಡುತ್ತಿದ್ದು ಇವರನ್ನು ತಕ್ಷಣದಿಂದ ಸೇವೆಯಿಂದ ಅಮಾನತುಗೊಳಿಸಿ ಇಲಾಖೆ ವಿಚಾರಣೆ ಕೈಗೊಳ್ಳಬೇಕೆಂದು ಜಿಲ್ಲಾ ಅಧ್ಯಕ್ಷರಾದ ಸುಧಾಕರ ಕೋಟೆ ಕರ್ನಾಟಕ ರಕ್ಷಣಾ ವೇದಿಕೆ ಸಿಂಹ ಸೈನ್ಯ ಜಿಲ್ಲಾ ಘಟಕದಿಂದ ಮನವಿ ಸಲ್ಲಿಸಿದ್ದಾರೆ.

## ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಮುಸ್ಲಿಮ್ ಸಂಘಟನೆಗಳ ಖಂಡನೆ ವಕ್ಫ್ ತಿದ್ದುಪಡಿ ಕಾಯ್ದೆ ಜಾರಿ ವಿರುದ್ಧದ ಇಂದಿನ ಪ್ರತಿಭಟನೆ ಮುಂದೂಡಿಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಕಾಯ್ದೆ 2025 ಜಾರಿಗೊಳಿಸಿರುವುದನ್ನು

ವಿರೋಧಿಸಿ ವಕ್ಫ್ ತಿದ್ದುಪಡಿ ಕಾಯ್ದೆ 2025 ವಿರೋಧಿ ಜಂಟಿ ಕ್ರಿಯಾ ಸಮಿತಿ ನಗರದಲ್ಲಿ

ಏಪ್ರಿಲ್ 24 ರಂದು ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ಮುಂದೂಡಿದೆ.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಹಿನ್ನೆಲೆಯಲ್ಲಿ ನಗರದ ಜಾಮಾ

ಮಸೀದಿಯಲ್ಲಿ ಬುಧವಾರ ತುರ್ತು ಸಭೆ ನಡೆಸಿದ ಮುಸ್ಲಿಮ್ ಸಂಘಟನೆಗಳ ಪದಾಧಿಕಾರಿಗಳು

ಹಾಗೂ ಪ್ರಮುಖರು ಪ್ರತಿಭಟನೆ ಮುಂದೂಡುವ ನಿರ್ಣಯ ಕೈಗೊಂಡರು.

ಅಖಿಲ ಭಾರತ ಮುಸ್ಲಿಮ್ ವೈಯಕ್ತಿಕ ಕಾನೂನು ಮಂಡಳಿಯ ನಿರ್ದೇಶನದ ಮೇರೆಗೆ

ಪ್ರತಿಭಟನೆಯನ್ನು ಮುಂದೂಡಲಾಗಿದೆ ಎಂದು ಮಂಡಳಿಯ ಸದಸ್ಯರೂ ಆದ ವಕ್ಫ್ ತಿದ್ದುಪಡಿ

ಕಾಯ್ದೆ 2025 ವಿರೋಧಿ ಜಂಟಿ ಕ್ರಿಯಾ ಸಮಿತಿಯ ಸಂಚಾಲಕ ಡಾ. ಅಬ್ದುಲ್ ಖದೀರ್

ತಿಳಿಸಿದರು.

ಕಾಶ್ಮೀರದ ಪಹಲ್ಗಾಮ್ ಸಮೀಪದ ಬೈಸರನ್ ಕಣಿವೆಯಲ್ಲಿ ಭಯೋತ್ಪಾದಕರು ಗುಂಡಿನ ದಾಳಿ

ನಡೆಸಿ ಅಮಾಯಕ ಪ್ರವಾಸಿಗರನ್ನು ಹತ್ಯೆಗೈದ ಘಟನೆಯನ್ನು ಸಭೆಯಲ್ಲಿ ತೀವ್ರವಾಗಿ

ಖಂಡಿಸಲಾಯಿತು ಎಂದು ಅವರು ಹೇಳಿದರು.

ಪ್ರವಾಸಿಗರ ಮೇಲಿನ ದಾಳಿ ಅಮಾನವೀಯ. ಅತ್ಯಂತ ನೋವಿನ ಸಂಗತಿ. ಸಂಕಷ್ಟದ ಈ

ಸಂದರ್ಭದಲ್ಲಿ ಮುಸ್ಲಿಮ್ ಸಮುದಾಯ ಸೇರಿದಂತೆ ದೇಶದ ಎಲ್ಲರೂ ಸಂತ್ರಸ್ತ ಕುಟುಂಬಗಳ ಪರ ನಿಲ್ಲಲಿದ್ದಾರೆ. ಅವರ ದುಃಖದಲ್ಲಿ ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.

ನಗರಸಭೆ ಅಧ್ಯಕ್ಷ ಮಹ್ಮಮದ್ ಗೌಸ್, ಸದಸ್ಯ ಮನ್ಸೂರ್ ಅಹಮ್ಮದ್ ಖಾದ್ರಿ, ಪ್ರಮುಖರಾದ

ಸರ್ಫರಾಜ್ ಹಾಸ್ಮಿ,ಅಬ್ದುಲ್ ಅಜೀಜ್ ಮುನ್ನಾ,ಮೌಲಾನಾ ಮೋನಿಸ್ ಕಿರ್ಮಾನಿ, ಡಾ.

ಜಿಯಾವುಲ್ ಇಸ್ಲಾಂ ಕುಂಜೆನಶೀನ್, ಕಾಂಗ್ರೆಸ್ ಬೀದರ್ ನಗರ ಘಟಕದ ಅಧ್ಯಕ್ಷ ಮಹಮ್ಮದ್

ಯುಸೂಫ್, ರಫೀಕ್ ಅಹಮ್ಮದ್ ಮತ್ತಿತರರು ಇದ್ದರು.

# ರಥಯಾತ್ರೆಯನ್ನು ಯಶಸ್ವಿಗೊಳಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ.23: ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ ಮತ್ತು ಚಿಂತನೆಗಳನ್ನು ನಾಡಿನಾದ್ಯಂತ ತಿಳಿಸಲು ರಥಯಾತ್ರೆಯು ಬೀದರ ತಾಲ್ಲೂಕಿನಿಂದ ಸಂಚರಿಸುತ್ತಾ ಹುಮನಾಬಾದ ತಾಲ್ಲೂಕಿನ ಗಡಿ ಗ್ರಾಮವಾದ ಸಿಂದಬಂದಗಿ ಗ್ರಾಮದಲ್ಲಿ ಏಪ್ರಿಲ್.24 ರಂದು ಮಧ್ಯಾಹ್ನ 12.30 ಗಂಟೆಗೆ ಆಗಮಿಸಲಿದೆ. ಈ ರಥಯಾತ್ರೆಯನ್ನು ಗೌರವಯುತವಾಗಿ ಸ್ವಾಗತಿಸಿ ರಥ ಸಂಚಲನ ಮಾಡಿ ಕರ್ನಾಟಕ ನಾಡ, ನುಡಿ, ಭಾಷೆ ಮತ್ತು ಸಂಸ್ಕೃತಿಯ ಅರಿವು ಮೂಡಿಸುವ ಸದರಿ ರಥಯಾತ್ರೆಯನ್ನು ಜಿಲ್ಲೆಯ ಗಡಿ ಭಾಗಗಳಲ್ಲಿ ಬಿಳ್ಕೊಡುಗೆ ಮಾಡಬೇಕಾಗಿರುತ್ತದೆ. ಕಾರಣ ಹುಮನಾಬಾದ ತಾಲ್ಲೂಕಿನ ಎಲ್ಲಾ ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳ ಸದಸ್ಯರುಗಳು, ಚುನಾಯಿತ ಪ್ರತಿನಿಧಿಗಳು, ತಾಲ್ಲೂಕು ಮಟ್ಟದ ಅಧಿಕಾರಿಗಳು, ಹಾಗೂ ಎಲ್ಲ ಸರ್ಕಾರಿ ನೌಕರರು ಎಲ್ಲರೂ ಕೈ ಜೋಡಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಹುಮನಾಬಾದ ತಹಸೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವಾಸಿಗರ ಮೇಲೆ ಉಗ್ರರ ದಾಳಿ: ಕಠಿಣ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಂಗಳವಾರ ನಡೆದ ಪ್ರವಾಸಿಗರ ಮೇಲಿನ ಕ್ರೂರ ದಾಳಿಯನ್ನು ಬ್ರಾಹ್ಮಣ ಮಹಾಸಂಘದ ಜಿಲ್ಲಾಧ್ಯಕ್ಷ ರಮೇಶ ಕುಲರ್ಣಿ ತೀವ್ರವಾಗಿ ಖಂಡಿಸಿದ್ದಾರೆ. ಈ ಹೀನ ಕೃತ್ಯದ ಹಿಂದೆ ಪಾಕಿಸ್ತಾನ್ ಆಧಾರಿತ ಉಗ್ರ ಸಂಘಟನೆಗಳ ನಿಶ್ಚಿತ ಕೈವಾಡವಿದೆ ಎಂದು ಹೇಳಿದ್ದಾರೆ. ಅಮಾಯಕ ಹಿಂದೂ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗಿದೆ. ಭಾರತ ಶಾಂತಿಪ್ರಿಯ ದೇಶ. ಆದರೆ, ಅದನ್ನು ದೌರ್ಬಲ್ಯ ಎಂದು ಭಾವಿಸುವ ವೈರಿ ರಾಷ್ಟ್ರಗಳಿಗೆ ತಕ್ಕ ಪಾಠ ಕಲಿಸಲು ಇದು ಸಕಾಲ ಎಂದು ತಿಳಿಸಿದ್ದಾರೆ. ಉಗ್ರರ ಕೃತ್ಯಗಳನ್ನು ತಡೆಯಲು ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ರ‍್ಕಾರ ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಯೋಧರು, ಗುಪ್ತಚರ ಸಂಸ್ಥೆಗಳು ಮತ್ತು ರಾಜಕಾರಣಿಗಳು ಇಂತಹ ಘಟನೆಗಳನ್ನು ತಡೆಗಟ್ಟಲು ಸ್ಪಷ್ಟ ಮತ್ತು ದಿಟ್ಟ ನರ್ಧಾರ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ಘಟನೆಗೆ ಹೊಣೆಗಾರರಾದ ಎಲ್ಲರ ಮೇಲೂ ಕಠಿಣ ಕ್ರಮ ಕೈಗೊಂಡರೆ ಮಾತ್ರ ಭವಿಷ್ಯದಲ್ಲಿ ಈ ರೀತಿಯ ಘಟನೆಗಳು ಪುನರಾರ್ತನೆಯಾಗದಂತೆ ತಡೆಯಲು ಸಾಧ್ಯವಿದೆ ಎಂದು ತಿಳಿಸಿದ್ದಾರೆ.

# ವಾರ್ತಾ ಇಲಾಖೆಯಿಂದ ಡಿಜಿಟಲ್ ಜಾಹೀರಾತಿಗೆ ಮಾಧ್ಯಮ, ಏಜೆನ್ಸಿಗಳ ನೊಂದಣಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏಪ್ರಿಲ್ 23–ಸರ್ಕಾರದ ನೀತಿ ಮತ್ತು ಯೋಜನೆಗಳನ್ನು ಅಂತರ್ಜಾಲ ಬಳಸುವ ಜನರಿಗೆ ಡಿಜಿಟಲ್ ಜಾಹೀರಾತುಗಳ ಮೂಲಕ ತಲುಪಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ – 2024 ಅನ್ನು ಜಾರಿಗೆ ತಂದಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರವು ಡಿಜಿಟಲ್ ಜಾಹೀರಾತಿಗಾಗಿ ಡಿಜಿಟಲ್ ಜಾಹೀರಾತು ಏಜೆನ್ಸಿ ಮತ್ತು ಡಿಜಿಟಲ್ ಮಾಧ್ಯಮಗಳನ್ನು ಎಂಪ್ಯಾನಲ್‌ಮೆಂಟ್ ಮಾಡಿಕೊಳ್ಳುತ್ತಿದೆ. ದೇಶದಲ್ಲಿಯೇ ಮೊದಲ ಬಾರಿಗೆ ಡಿಜಿಟಲ್ ಏಜೆನ್ಸಿ ಮತ್ತು ಮಾಧ್ಯಮಗಳನ್ನು ನೊಂದಾಯಿಸಿಕೊಳ್ಳಲಾಗುತ್ತಿದೆ ಎಂದು ಮಾನ್ಯ ಮುಖ್ಯಮಂತ್ರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಲವು ವರ್ಷಗಳಿಂದ ಮಾಧ್ಯಮದ ವ್ಯಾಪ್ತಿ ಮತ್ತು ಸ್ವರೂಪ ಬದಲಾಗಿದೆ. ಅಂತರ್ಜಾಲ, ಖಾಸಗಿ ಕಂಪ್ಯೂಟರ್, ಸ್ಮಾರ್ಟ್ ಟಿವಿ ಹಾಗೂ ಸ್ಮಾರ್ಟ್ ಫೋನ್, ಸಾಮಾಜಿಕ ಜಾಲತಾಣಗಳ ಬಳಕೆ ಹೆಚ್ಚಾಗಿದೆ. ಸಾಂಪ್ರದಾಯಿಕ ಜಾಹೀರಾತುಗಳಿಗಿಂತ ಡಿಜಿಟಲ್ ಜಾಹೀರಾತು ಹೆಚ್ಚು ಪ್ರಭಾವಶಾಲಿಯಾಗಿದೆ. ಜೊತೆಗೆ, ಹೆಚ್ಚು ವ್ಯಾಪ್ತಿ ಮತ್ತು ನಿರ್ದಿಷ್ಟ ಜನರನ್ನು ತಲುಪುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಕಾರ್ಯಕ್ರಮಗಳು ಮತ್ತು ನೀತಿಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಮಾದರಿಯಲ್ಲಿ ಡಿಜಿಟಲ್ ಜಾಹೀರಾತು ನೀಡಲು ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿಯನ್ನು ಸರ್ಕಾರ ಹೊರತಂದಿದೆ ಎಂದು ಮುಖ್ಯಮಂತ್ರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊಸ ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ ಅನ್ವಯ ಎಲ್ಲಾ ಇಲಾಖೆಗಳು, ನಿಗಮಗಳು, ಪ್ರಾಧಿಕಾರಗಳು, ಮಂಡಳಿಗಳು, ಸ್ಥಳೀಯಾಡಳಿತಗಳು, ಪುರಸಭೆಗಳು, ನಗರ ಪಾಲಿಕೆಗಳು ಮೊದಲಾದವುಗಳಲ್ಲಿ ಡಿಜಿಟಲ್ ಜಾಹೀರಾತುಗಳನ್ನು ಕಡ್ಡಾಯವಾಗಿ ಈ ಮಾರ್ಗಸೂಚಿಗೆ ಅನುಸಾರವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಬಿಡುಗಡೆ / ಪೂರೈಸಬೇಕಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ ಅನ್ವಯ ವೀಡಿಯೊ ಸ್ಟ್ರೀಮಿಂಗ್ ಪ್ಲಾಟ್‌ಫಾರ್ಮ್‌ಗಳಾದ ಗೂಗಲ್ (ಯೂಟ್ಯೂಬ್), ಮೆಟಾ (ಫೇಸ್‌ಬುಕ್, ಇನ್‌ಸ್ಟಾಗ್ರಾಂ, ವಾಟ್ಸಾಪ್ ಬಿಸಿನೆಸ್, ವಾಟ್ಸಾಪ್ ಚಾನಲ್), ಸರ್ಚ್ ಇಂಜಿನ್‌ಗಳಾದ ಗೂಗಲ್, ಬಿಂಗ್, ಸಾಮಾಜಿಕ ಜಾಲತಾಣಗಳಾದ ಎಕ್ಸ್ (ಈ ಹಿಂದೆ ಟ್ವಿಟರ್), ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಲಿಂಕ್ಡ್‌ಇನ್, ವಾಟ್ಸಾಪ್, ಸ್ನಾಪ್‌ಚಾಟ್, ಟೆಲಿಗ್ರಾಂ, ಒಟಿಟಿ ಪ್ಲಾಟ್‌ಫಾರ್ಮ್‌ಗಳಾದ ನೆಟ್‌ಫ್ಲಿಕ್ಸ್, ಅಮೇಜಾನ್ ಪ್ರೈಮ್, ಡಿಸ್ನಿ ಹಾಟ್‌ಸ್ಟಾರ್ ಸೋನಿಲೈವ್, ಜಿಯೋ ಸಿನಿಮಾ, ಜೀ 5, ವೂಟ್, ಸನ್ ನೆಕ್ಸ್ಟ್ ಮತ್ತು ಟಾಕೀಸ್, ಫಿನ್‌ಟೆಕ್ ಪ್ಲಾಟ್‌ಫಾರ್ಮ್‌ಗಳಾದ ಪೇಟಿಎಂ, ಫೋನ್‌ಪೇ ಮತ್ತು ಜಿಪೇ ಸೇರಿದಂತೆ ಇನ್ನಿತರ ಡಿಜಿಟಲ್ ವೇದಿಕೆಗಳಡಿ ಜಾಹೀರಾತು ಅರ್ಹ ಏಜೆನ್ಸಿಗಳ ಮೂಲಕ ನೀಡಲು ಅವುಗಳನ್ನು ಎಂಪ್ಯಾನಲ್ ಮಾಡಿಕೊಳ್ಳಲು ವಾರ್ತಾ ಇಲಾಖೆಯು ಉದ್ದೇಶಿಸಿದೆ.

ಹಾಗೆಯೇ, ಅಪ್ಲಿಕೇಶನ್ ಡೌನ್‌ಲೋಡ್ ಪ್ಲಾಟ್‌ಫಾರ್ಮ್ ಅಡಿಯಲ್ಲಿ ಬರುವ ವೀಡಿಯೊ, ಡಿಸ್‌ಪ್ಲೇ ಮತ್ತು ಸರ್ಚ್ ಸೇರಿದಂತೆ ವಿವಿಧ ವೇದಿಕೆಗಳಡಿ ಜಾಹೀರಾತು ನೀಡಿಕೆ, ಗೂಗಲ್ ಪ್ಲೇ ಸ್ಟೋರ್ ಅಥವಾ ಆಪಲ್ ಆಪ್ ಸ್ಟೋರ್‌ನಲ್ಲಿ ಕನಿಷ್ಠ 1 ಲಕ್ಷ ಡೌನ್‌ಲೋಡ್ ಹೊಂದಿರುವ ಯಾವುದೇ ಆಪ್ ಮತ್ತು ಸುದ್ದಿಗಳನ್ನು ಪ್ರಸಾರ ಮಾಡುವ ಯಾವುದೇ ಡಿಜಿಟಲ್ ಘಟಕ–ವೆಬ್ ಅಪ್ಲಿಕೇಶನ್ ಅಥವಾ ಮೊಬೈಲ್ ಅಪ್ಲಿಕೇಶನ್ ಸೇರಿದಂತೆ ವಿವಿಧ ಮೂಲಗಳಿಂದ ಸುದ್ದಿಗಳನ್ನು ಸಂಗ್ರಹಿಸಿ ಜನರಿಗೆ ನೀಡುವ ವೇದಿಕೆಗಳು. ಇನ್‌ಶಾರ್ಟ್ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಫಾಲೋವರ್‌ಗಳನ್ನು ಹೊಂದಿರುವ ಇನ್‌ಫ್ಲ್ಯುಯೆನ್ಸರ್‌ಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ನೋಂದಾಯಿಸಿಕೊಂಡು ಜಾಹೀರಾತು ಪಡೆಯಲು ಅರ್ಹತೆ ಹೊಂದುತ್ತವೆ.

ಡಿಜಿಟಲ್ ಜಾಹೀರಾತಿಗಾಗಿ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಸಹಯೋಗ ಹೊಂದಲು ಬಯಸುವ ಏಜೆನ್ಸಿಗಳು ಭಾರತ ಸರ್ಕಾರದ ರಿಜಿಸ್ಟ್ರಾರ್ ಆಫ್ ಕಂಪನೀಸ್‌ನಲ್ಲಿ ನೋಂದಣಿಯಾದ ಪ್ರೈವೇಟ್ ಲಿಮಿಟೆಡ್ ಕಂಪನಿ, ಪಬ್ಲಿಕ್ ಲಿಮಿಟೆಡ್ ಕಂಪನಿ, ಪಾಲುದಾರಿಕೆ, ಲಿಮಿಟೆಡ್ ಲಯಬಿಲಿಟಿ ಪಾಲುದಾರಿಕೆ ಹೊಂದಿರಬೇಕು. ಎಂಪ್ಯಾನೆಲಿಂಗ್ ಸಮಯದಲ್ಲಿ ಕನಿಷ್ಠ ಎರಡು ವರ್ಷವಾಗಿರಬೇಕು. ಜಿಎಸ್‌ಟಿ ನೋಂದಣಿ ಇರಬೇಕು. ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತಿರಬೇಕು ಅಥವಾ ಕರ್ನಾಟಕದಲ್ಲಿ ಪೂರ್ಣ ಪ್ರಮಾಣದ ಕಚೇರಿ ಇರಬೇಕು. ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಪ್ರಾವೀಣ್ಯತೆ ಇರಬೇಕು. ಡಿಜಿಟಲ್ ಜಾಹೀರಾತು ಮತ್ತು ಸಾಮಾಜಿಕ ಜಾಲತಾಣದ ಬಗ್ಗೆ ಆಳವಾದ ಜ್ಞಾನವಿರಬೇಕು. ಸರ್ಕಾರಗಳಿಗೆ ಪ್ಲಾಟ್‌ಫಾರ್ಮ್‌ಗಳಲ್ಲಿ ಡಿಜಿಟಲ್ ಜಾಹೀರಾತು ನೀಡಲು ಗೂಗಲ್ ಅಥವಾ ಮೆಟಾ ಜೊತೆ–ಗೆ ಮಾನ್ಯವಾದ ಒಪ್ಪಂದ/ ಒಡಂಬಡಿಕೆ ಹೊಂದಿರಬೇಕು. ತಮ್ಮ ಪ್ಲಾಟ್‌ಫಾರ್ಮ್‌ಗಳಲ್ಲಿ ಸರ್ಕಾರದ ಜಾಹೀರಾತು ನೀಡಲು ಗೂಗಲ್ ಅಥವಾ ಮೆಟಾದಿಂದ ಅನುಮತಿ ಪಡೆದುಕೊಂಡಿರಬೇಕು ಎಂದು ಷರತ್ತುಗಳನ್ನು ನಿಗದಿ ಪಡಿಸಿದೆ.

ಡಿಜಿಟಲ್ ಮಾಧ್ಯಮ ಘಟಕಕ್ಕೆ ಅರ್ಹತೆ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಡಿಜಿಟಲ್ ಜಾಹೀರಾತು ನೀಡಲು ಎಂಪ್ಯಾನೆಲ್‌ಮೆಂಟ್‌ಗಾಗಿ ಡಿಜಿಟಲ್ ಮಾಧ್ಯಮ ಘಟಕವು ಭಾರತದ ಸರ್ಕಾರದ ರಿಜಿಸ್ಟ್ರಾರ್ ಆಫ್ ಕಂಪನೀಸ್‌ನಲ್ಲಿ ನೋಂದಣಿಯಾದ ಕಾನೂನುಬದ್ಧ ಸಂಘಟಿತ ಘಟಕವಾಗಿರಬೇಕು. ಕನಿಷ್ಠ ಒಂದು ವರ್ಷ ಕಾಲ ಯಾವುದೇ ಸಮಯದ ಅಂತರವಿಲ್ಲದೆ ನಿರಂತರವಾಗಿ ಕಂಟೆಂಟ್ ಪ್ರಕಟಿಸಿರಬೇಕು. ಜಿಎಸ್‌ಟಿ ನೋಂದಣಿ ಇರಬೇಕು.

ರಾಜ್ಯ ಅಥವಾ ಕೇಂದ್ರ ಸರ್ಕಾರ ಅಥವಾ ಅದರ ಏಜೆನ್ಸಿಗಳ ಎಲ್ಲ ಶಾಸನಬದ್ಧ ಅವಶ್ಯಕತೆಗಳನ್ನು ಅನುಸರಿಸಲು ವಿಫಲವಾದರೆ ಎಂಪ್ಯಾನೆಲ್ಮೆಂಟ್ ರದ್ದುಗೊಳಿಸಲಾಗುತ್ತದೆ. ಭಾರತದ ಕಾನೂನನ್ನು ಉಲ್ಲಂಘಿಸುವ ಪದ, ದೃಶ್ಯಗಳು, ಆಡಿಯೋ ಅಥವಾ ಅಂತಹ ಯಾವುದೇ ವಿಷಯವನ್ನು ಪ್ರಕಟಿಸಿರಬಾರದು ಎಂಬ ಷರತ್ತುಗಳನ್ನು ವಿಧಿಸಲಾಗಿದೆ.

ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಡಿಜಿಟಲ್ ಮಾಧ್ಯಮ ಘಟಕಗಳು ಮತ್ತು ಡಿಜಿಟಲ್ ಜಾಹೀರಾತು ಏಜೆನ್ಸಿಗಳು sevasindhu.karnataka.gov.in ಗೆ ಭೇಟಿ ನೀಡಿ, ನಿಗದಿ ಪಡಿಸಿರುವ ದಾಖಲಾತಿಗಳೊಂದಿಗೆ ಶುಲ್ಕ ಪಾವತಿಸಿ, ಮೇ 15ರ ಒಳಗೆ ಅರ್ಜಿ ಸಲ್ಲಿಸಲು ಕೋರಿದೆ.

# ಏಕೈಕ ಮಹಿಳೆಯಿಂದ ರಕ್ತದಾನ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಏ 23 ನಗರದಲ್ಲಿ

ಬಸವ ಜಯಂತಿ ಹಾಗೂ ಮಹಾತ್ಮ ಬಸವೇಶ್ವರರ ಜಾತ್ರಾ ಅಮೃತ ಮಹೋತ್ಸವ ಪ್ರಯುಕ್ತ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಶ್ರೀ ಬಸವೇಶ್ವರ ಪದವಿ ಪೂರ್ವ ಹಾಗೂ ಅಕ್ಕಮಹಾದೇವಿ ಕಾಲೇಜಿನಲ್ಲಿ ಆಯೋಜಿಸಿದ್ದ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರದಲ್ಲಿ ಶ್ರೀ ಬಸವೇಶ್ವರ ಪದವಿ ಕಾಲೇಜು ಬಿಎಸ್ಸಿ ಆರನೇ ಸೆಮಿಸ್ಟರ್ ನಲ್ಲಿ ವ್ಯಾಸಂಗ ಮಾಡುತ್ತಿರುವ ಸ್ನೇಹಾ ಸಂತೋಷಸಿಂಗ್ ರಾಜಪೂತ್ ಇವರು ರಕ್ತ ದಾನ ಮಾಡಿದ ಏಕೈಕ ಮಹಿಳೆಯಾಗಿದ್ದು ಗಮನ ಸೆಳೆದ ಸಂಗತಿ.

ಅವರಿಗೆ ಆರೋಗ್ಯ ಇಲಾಖೆ ಹಾಗೂ ಆಯೋಜಕರಿಂದ ಪ್ರಮಾಣ ಪತ್ರ ನೀಡಲಾಗಿತ್ತು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ತ್ವರಿತ ಸ್ಪಂದನೆ ಅಗತ್ಯ:– ಶಾಸಕ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಬೇಸಿಗೆಯ ಧಗೆಯಿಂದಾಗಿ ತಾಪಮಾನದಲ್ಲಿ ಭಾರಿ ಏರಿಕೆಯಾಗಿದೆ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ತ್ವರಿತ ಸ್ಪಂದನೆ ಅಗತ್ಯವಿದೆ ಹೀಗಾಗಿ ಅಧಿಕಾರಿಗಳು ಯಾವ

ಗ್ರಾಮದಲ್ಲೂ ಸಹ ಕುಡಿಯುವ ನೀರಿನ ಕೊರತೆ ಉಲ್ಬಣಿಸದಂತೆ ಎಚ್ಚರ ವಹಿಸಬೇಕು ಸಮಸ್ಯೆ ಎದುರಿಸಲು ವ್ಯವಸ್ಥಿತ ಕಾರ್ಯತಂತ್ರ ರೂಪಿಸಿ ಮತ್ತು ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅಧಿಕಾರಿಗಳಿಗೆ ಸೂಚಿಸಿದರು. ಇಲಿಯ ತಾಪಂ ಕಚೇರಿ ಸಭಾಂಗಣದಲ್ಲಿ ಬೀದರ್ ದಕ್ಷಿಣ ಕ್ಷೇತ್ರದ ವ್ಯಾಪ್ತಿಗೆ ಬರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದರು. ಬೇಸಿಗೆಯಲ್ಲಿ ಜನರಷ್ಟೇ ಅಲ್ಲ, ಜಾನುವಾರುಗಳೂ ನೀರಿನ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗುತ್ತದೆ. ವನ್ಯಜೀವಿಗಳೂ ದಾಹ ತೀರಿಸಿಕೊಳ್ಳಲು ಪರಿತಪಿಸುವಂತಹ ಪರಿಸ್ಥಿತಿ ಹಲವೆಡೆ ಸೃಷ್ಟಿಯಾಗುವ ಸಾಧ್ಯತೆ ಹೆಚ್ಚಿರುತ್ತದೆ ಕುಡಿಯುವ ನೀರು ಪೂರೈಕೆಗೆ ಆದ್ಯತೆ ನೀಡಬೇಕು. ಗೋಶಾಲೆಗಳಲ್ಲಿ ಜಾನುವಾರುಗಳಿಗೆ ನೀರಿನ ಹಾಗೂ ಮೇವಿನ ಕೊರತೆ–ಯಾಗದಂತೆ ನೋಡಿಕೊಳ್ಳಬೇಕ ಗ್ರಾಮಪಂಚಾಯಿತಿ ವತಿಯಿಂದ ಜಾನುವಾರುಗಳಿಗೆ ನೀರಿನ ತೊಟ್ಟಿ ನಿರ್ಮಾಣ ಮಾಡಿ ನೀರು ಸಂಗ್ರಹಿಸಿ ದನಕರುಗಳಿಗೆ ನೀರು ಪೂರೈಸಬೇಕು. ವಾಡಿಕೆಯಂತೆ ಮಳೆಗಾಲ ಆರಂಭವಾಗಲು ಇನ್ನೂ ಸುಮಾರು ಎರಡು ತಿಂಗಳು ಬಾಕಿ ಇದ್ದು ಹೀಗಾಗಿ ಅಧಿಕಾರಿಗಳು ಕುಡಿಯುವ ನೀರಿನ ಕೊರತೆ ನೀಗಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಕುಡಿಯುವ ನೀರು ನೈರ್ಮಲ್ಯ ಇಲಾಖೆ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಇಂದು ವಾಂಜರಿಯಲ್ಲಿ ಜೈಭವಾನಿ ಮೂರ್ತಿ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪಟ್ಟಣದ ವಾಂಜರಿ ಜೈಭವಾನಿ ದೇವಸ್ಥಾನದ ಮೂರ್ತಿ ಸ್ಥಾಪನೆ ಹಾಗೂ ಮಹಿಳೆಯರಿಂದ ಕುಂಭ ಉತ್ಸವ ಕಾರ್ಯಕ್ರಮವನ್ನು ಪರಮ್ಮ ಪೂಜ್ಯ ಮಂತ್ರ ಮಹರ್ಷಿ ಡಾ. ಸದ್ಗುರೂಜಿ ಇವರ ಸಾನ್ನಿಧ್ಯದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಏ.23 ರಿಂದ ಆರಂಭಗೊಂಡು ಏ.25ರ ವರೆಗೆ ಜರುಗಲಿವೆ. ಏ.24 ರಂದು ಜೈ ಭವಾನಿ ಮೂತಿ ಪ್ರತಿಷ್ಠಾಪನೆ ಸಡಗರದಿಂದ ಜರುಗಲಿದೆ ಎಂದು ಪಂಚಕಮಿಟಿರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಬೇಕೆಂದು ಪಂಚಕಮಿಟಿರವರು ವಿನಂತಿಸಿದ್ದಾರೆ.

# ಕ. ಸ.ಪ ನೂತನ ಅಧ್ಯಕ್ಷರಾದ ರುದ್ರಮಣಿ ಮಠಪತಿ ಯವರಿಗೆ ಸನ್ಮಾನ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಏ 23 ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಅಧ್ಯಕ್ಷರಾದ ರುದ್ರಮಣಿ ಮಠಪತಿ ಯವರಿಗೆ ಹುಲಸೂರು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ರಾಜಕುಮಾರ ನಂದೊಡೇ ಮತ್ತು ಅವರ ಗೆಳೆಯರಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅನಿಲಕುಮಾರ ಸೂಗಿ, ಬಸವರಾಜ ಗುಂಗೆ, ಮನೋಹರ ಕಂಟೆ ಕೋರೆ. ಮಾಣಿಕಪ್ಪ ಸಂಗನಬಟ್ಟೆ. ಸಂತೋಷ ಮಲ್ಲಿಕಾರ್ಜುನ ಅಲಗೂ ಡ , ಶಿವಕುಮಾರ ಬಿರಾದಾರ. ಚಂದ್ರಕಾಂತ ಬಿರಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸ್ಪೀಕರ್ ಭೇಟಿ ಮಾಡಿದ ಶ್ರೀಲಂಕಾ, ನೇಪಾಳ ಪತ್ರಕರ್ತರ ನಿಯೋಗ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಆಹ್ವಾನದ ಮೇರೆಗೆ ಬಂದಿದ್ದ ಶ್ರೀಲಂಕಾ ಮತ್ತು ನೇಪಾಳ ಪತ್ರಕರ್ತರ ನಿಯೋಗ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಮತ್ತು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ ಚರ್ಚೆ ನಡೆಸಿತು. ರಾಜ್ಯದಲ್ಲಿ ವಿಧಾನಸಭೆ ಕಲಾಪಗಳು ಹೇಗೆ ನಡೆಯುತ್ತವೆ ಎನ್ನುವ ಮಾಹಿತಿಯನ್ನು ತಿಳಿದುಕೊಂಡರು ಮತ್ತು ಅಲ್ಲಿರುವ ವ್ಯವಸ್ಥೆಯ ಬಗ್ಗೆಯೂ ಅವರು ಮಾಹಿತಿ ನೀಡಿದರು.

ಏಶಿಯನ್ ಮೀಡಿಯಾ ಕಲ್ಚರಲ್ ಅಸೋಶಿಯೇಶನ್‌ನ ಅಧ್ಯಕ್ಷ ಪುಪಲ್ ಜನಕಜಯಸಿಂಗೆ, ಸುಭಾಷಿನಿ ಡಿಸಿಲ್ವಾ, ಶುಭ ರತ್ನಾಯಕೆ, ಬರ್ನಾಡ್, ನೇಪಾಳದ ಹಿರಿಯ ಪತ್ರಕರ್ತರಾದ ಸಂಜೋತಾ ಗೋಡಲ್, ಸರೋಜ ದಹಲ್, ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ವಿಧಾನಸಭೆ ಸ್ಪೀಕರ್ ಕಚೇರಿಯ ಸಂಯೋಜಕ ಜ್ಞಾನಶೇಖರ್ ಹಾಜರಿದ್ದರು.

# ಜಮ್ಮು ಕಾಶ್ಮೀರದ ಉಗ್ರರ ದಾಳಿಗೆ ಹುತಾತ್ಮರಾದವರಿಗೆ ಶ್ರದ್ಧಾಂಜಲಿ.



ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್, ಏ, 23, ಇಂತಹ ಹೇಯ ಕೃತ್ಯ ಎಸಗಿರುವ ಉಗ್ರರಿಗೆ ತಕ್ಕ ಪಾಠ ಕಲಿಸಬೇಕು – ಚಂದುಲಾಲ ಚೌಧರಿ ಆಗ್ರಹ

ಪಟ್ಟಣದ ಮಹಾತ್ಮ ಬಸವೇಶ್ವರ ವೃತ್ತದಲ್ಲಿ ಗುರುಮಠಕಲ್ ನಗರದಿಂದ ಪಕ್ಷಾತೀತವಾಗಿ ಹಾಗೂ ವಿವಿಧ ಹಿಂದೂ ಸಂಘಟನೆಗಳು ಹಾಗೂ ಸಾರ್ವಜನಿಕರ ವತಿಯಿಂದ ಶ್ರದ್ಧಾಂಜಲಿ ನೀಡಲಾಯಿತು. ಇಂತಹ ಘಟನೆಗಳು ಮರುಕಳಿಸದಂತೆ ಕೇಂದ್ರ ಸರಕಾರ ಹೆಚ್ಚು ಉಗ್ರನಿಘ ಪಡೆಗಳನ್ನು ನೇಮಿಸಿ ಮತ್ತೊಮ್ಮೆ ಪುಲ್ವಾಮ ರೀತಿಯಲ್ಲಿ ಉತ್ತರ ನೀಡಬೇಕು, ಇಂತಹ ಹೇಯ ಕೃತ್ಯ ಎಸಗಿರುವ ಉಗ್ರರಿಗೆ ತಕ್ಕ ಪಾಠ ಕಲಿಸಬೇಕು, ಈ ದಾಳಿಯಲ್ಲಿ ದೇಹ ಬಿಟ್ಟ ಅಮಾಯಕರ ಜೀವಗಳಿಗೆ ಬೆಲೆ ಸಿಗಲಿ ಅವರ ಆತ್ಮಕ್ಕೆ ಶಾಂತಿ ಸಿಗಲಿ, ಕಣ್ಣಾರೆ ಕಂಡು ಭಯಭೀತರಾದ ಆ ಜೀವಗಳು ಸುಧಾರಿಸಿಕೊಳ್ಳಲಿ

ಕೇಂದ್ರ ಸರ್ಕಾರ ಸಾವಿಗೆ ನ್ಯಾಯ ಕೊಡಲಿ ಎಂದು ಚಂದುಲಾಲ ಚೌಧರಿ ಹೇಳಿದರು. ತಾಲೂಕಿನ ಹಿರಿಯ ಮುಖಂಡರು ಯುವಕರು ಇನ್ನಿತರರು ಇದ್ದರು

# 21 ದಿನಗಳ ಸಾಧನಾ ಅನುಷ್ಠಾನ : ಪೂಜ್ಯ ಬಸವ ದೇವರಿಂದ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಏ 23 ಇಲ್ಲಿನ ಅನುಭವ ಮಂಟಪದ ಪರಿಸರದ ಶರಣ ಧಾಮದಲ್ಲಿ ಉಳವಿಯ ಬಸವ ತತ್ವ ಪ್ರಸಾರಕ ಚರ ಜಂಗಮರಾದ ಪೂಜ್ಯ ಶ್ರೀ ಬಸವ ದೇವರು 21 ದಿನಗಳ ಕಾಲ ಸಾಧನಾ ಮೌನ ಅನುಷ್ಠಾನ ಸಾಧಕ ಮೌನ ಅನುಷ್ಠಾನದ ಮಂಗಳ ಕಾರ್ಯಕ್ರಮವು ಮಂಗಳವಾರ ದಿವಸ ಗಾಯತ್ರಿ ಮಾತಾಜಿ ಆಗಮಿಸಿ ಪೂಜೆ ಸಲ್ಲಿಸಿ ಪಾದೋದಕ ಪ್ರಸಾದ ನೀಡುವ ಮೂಲಕ ಅನುಷ್ಠಾನ ಮಂಗಳವಾಯಿತು .ಪೂಜ್ಯ ಬಸವ ದೇವರು ತಮ್ಮ ಅನುಷ್ಠಾನದ ಬಗ್ಗೆ ಇದು ಬಸವಾದಿ ಶರಣರ ತತ್ವ ಅಧ್ಯಯನ ಸಾಧನೆಗೆ ಸಂಬಂಧಿಸಿದ ಅನುಷ್ಠಾನವಾಗಿತ್ತು ಅಲ್ಲದೆ ಆಧ್ಯಾತ್ಮಿಕ ತತ್ವ ಸಾಧನಾ ಮಾರ್ಗದಲ್ಲಿ ನಡೆಯ ಬಯಸುವ ಸಾಧಕರಿಗೆ ಈ ರೀತಿಯ ಸಾಧನಾ ಅನುಷ್ಠಾನಗಳು ಅತ್ಯಂತ ಪರಿಣಾಮಕಾರಿ ಆಗಿವೆ ಎಂದ ಅವರು ಪೂಜ್ಯ ಡಾ. ಬಸವಲಿಂಗಪಟ್ಟದೇವರ ಮಾರ್ಗದರ್ಶನದಲ್ಲಿ 21 ದಿನಗಳ ಅನುಷ್ಠಾನ ನೆರವೇರಿತು ಎಂದರು ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ಸ್ವಾಮಿಗಳು ಶರಣೆ ಸತ್ಯಕ್ಕ ಮಾತಾಜಿ ಶರಣೆ ಲಾವಣ್ಯವತಿ ಮಾತಾಜಿ ಪೂಜ್ಯ ಲೋಕೇಶ್ ಗುರೂಜಿ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಗುರುನಾಥ್ ಗಡ್ಡೆ. ಕಾರ್ಯದರ್ಶಿ ನಾಗಪ್ಪಾ ನಿಣ್ಣೆ. ಶ್ರೀಶೈಲ್ ಮನಗೂಳಿ. ಗಂಗಾಧರ ಸೇರಿದಂತೆ ಅನೇಕರು ಭಾಗವಹಿಸಿ ಪೂಜ್ಯರಿಗೆ ಸನ್ಮಾನಿಸಿ ಗೌರವಿಸಿದರು .

# ಸಿಡಿಲಬ್ಬರಕೆ 4ಕುರಿ, 2ಮೇಕೆ ಸಾವು.

ಕೂಡ್ಲಿಗಿ. ಏ. 21:– ದಿನದಿಂದ ದಿನಕ್ಕೆ ಅಕಾಲಿಕ ಮಳೆಗಾಳಿಯ ಆರ್ಭಟ ಜೋರಾಗುತ್ತಿದ್ದು ಕಳೆದ ರಾತ್ರಿ ಜೋರಾದ ಗಾಳಿ ನಡುವೆ ಗುಡುಗು ಮಿಂಚು ಸಹಿತ ಮಳೆಯಲ್ಲಿ ತಾಲೂಕಿನ ಈಚಲಬೊಮ್ಮನಹಳ್ಳಿ ಗ್ರಾಮದಲ್ಲಿ ಕುರಿ ಹಟ್ಟಿಯಲ್ಲಿದ್ದ 4ಕುರಿಗಳು ಹಾಗೂ 2ಮೇಕೆಗಳು ಸಿಡಿಲಿಗೆ ಬಲಿಯಾದ ಘಟನೆ ಜರುಗಿದೆ. ಈಚಲಬೊಮ್ಮನಹಳ್ಳಿಯ ಕುರುಬರ ಹಾಲಮ್ಮ ಅವರಿಗೆ ಸೇರಿದ 4ಕುರಿಗಳು ಹಾಗೂ 2ಮೇಕೆಗಳನ್ನು ತಮ್ಮ ಕುರಿ ಹಟ್ಟಿಯಲ್ಲಿದ್ದಾಗ ಕಳೆದ ರಾತ್ರಿ ಶುರುವಾದ ಗುಡುಗು ಮಿಂಚು ಸಹಿತ ಮಳೆ ಆರಂಭವಾಗಿದ್ದು ಈ ಆರ್ಭಟದಲ್ಲಿ ಬಡಿದ ಸಿಡಿಲಿಗೆ ಹಾಲಮ್ಮನ ಕುರಿಮೇಕೆಗಳು ಬಲಿಯಾಗಿವೆ ಎಂದು ತಿಳಿದು ಬಂದಿದೆ.

# ಜಿಲ್ಲೆಯಲ್ಲಿ ಜಮ್ಮು ಕಾಶ್ಮೀರ ಪ್ರವಾಸಕ್ಕೆ ತೆರಳಿದವರ ಮಾಹಿತಿಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 23, : ಯಾದಗಿರಿ ಜಿಲ್ಲೆಯಾದ್ಯಂತ ಜಮ್ಮು ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿದವರ ಮಾಹಿತಿ ಕಲೆಹಾಕಲು ಜಿಲ್ಲಾಡಳಿತ ಮುಂದಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ತಿಳಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ಮಂಗಳವಾರ ರಂದು ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದು, ದಾಳಿಯಲ್ಲಿ ಕೆಲವು ಪ್ರವಾಸಿಗರು ಮೃತರಾಗಿರುವ ಹಾಗೂ ಗಾಯಗೊಂಡಿರುತ್ತಾರೆ. ಯಾದಗಿರಿ ಜಿಲ್ಲೆಯಿಂದ ಜಮ್ಮು ಕಾಶ್ಮೀರ ಪ್ರವಾಸಕ್ಕೆ ತೆರಳಿ ಭಯೋತ್ಪಾದಕರ ದಾಳಿಯಲ್ಲಿ ಸಿಲುಕಿಕೊಂಡಿದಲ್ಲಿ ಅವರ ಮಾಹಿತಿಯನ್ನು ಸಂಬಂಧಿಸಿದವರು ಕೂಡಲೆ ಜಿಲ್ಲಾ ವಿಪತ್ತು ನಿಯಂತ್ರಣ ಕೊಠಡಿ ದೂ.ಸಂ.08473 253700 ಹಾಗೂ ಪೊಲೀಸ್ ಕಂಟ್ರೋಲ್ ಸಂ.9480803600, 08473 253736ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾನೂನು ಸುವ್ಯವಸ್ಥೆ ನೆಪದಲ್ಲಿ ಉಸ್ತುವಾರಿ ಸಚಿವರ ಕೈಗೊಂಬೆಯಾಗಿ ವರ್ತಿಸುತ್ತಿರುವ ಪೋಲಿಸರು: ಪ್ರಕಾಶ ಹಳ್ಳಿಖೇಡ್



ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.23: ಕಾನೂನು ಸುವ್ಯವಸ್ಥೆ ನೆಪದಲ್ಲಿ ಹೋರಾಟಗಾರರನ್ನು ಹತ್ತಿಕ್ಕುವ ಮೂಲಕ ಜಿಲ್ಲಾ ಪೋಲಿಸ್ ಅಧಿಕಾರಿಗಳು ಜಿಲ್ಲಾ ಉಸ್ತುವಾರಿ ಸಚಿವರ ಕೈಗೊಂಬೆಗಳಂತೆ ವರ್ತಿಸುತ್ತಿದ್ದಾರೆ ಎಂದು ದಲಿತ ರಕ್ಷಣಾ ಹೋರಾಟ ಸಮಿತಿ ಸಂಸ್ಥಾಪಕ ರಾಜ್ಯಾಧ್ಯಕ್ಷ ಪ್ರಕಾಶ ಹಳ್ಳಿಖೇಡ್ ಆರೋಪಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಈ ತಿಂಗಳ 16ರಂದು ಜಿಲ್ಲೆಗೆ ಮುಖ್ಯಮಂತ್ರಿಗಳ ಆಗಮನದ ಹಿನ್ನಲೆಯಲ್ಲಿ ಅಂದು ನಸುಕಿನ ಜಾವ 5:00 ಗಂಟೆಗೆ ಅವರ ಮನೆಗೆ ನೂತನ ನಗರ ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕ ವಿಜಯಕುಮಾರ ಬಾವಗೆ ಹಾಗೂ ನೌಬಾದ ಗ್ರಾಮೀಣ ಠಾಣೆಯ ತಂಡದೊಂದಿಗೆ ಸುಮಾರು 15ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗಳು ಹೋರಾಟಗಾರ ಸ್ವಾಮಿದಾಸ ಕೆಂಪೇನೋರ್ ರವರ ಮನೆಗೆ ತೆರಳಿ ಅವರನ್ನು ವಾಹನದಲ್ಲಿ ಕುಳ್ಳಿರಿಸಿ ನೇರವಾಗಿ ಕಮಲನಗರ ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ.

ಅದೆ ಸಮಯದಲ್ಲಿ ದಲಿತರ ಪರ ಯಾವತ್ತೂ ಹೋರಾಟ ಮಾಡುವ ಶಶಿಕಾಂತ ಪೊಲೀಸ್ ಪಾಟೀಲ್ ಚೌಳಿ ಇವರನ್ನು ಕೂಡ ಮನೆಯಿಂದ ಮುಂಜಾನೆ 6:00 ಗಂಟೆಗೆ ಕರೆದುಕೊಂಡು ಠಾಣಾಕುಶನೂರ ಪೊಲೀಸ್ ಠಾಣೆಗೆ ಕರೆದು–ಕೊಂಡು ಹೋಗಿ 17 ಗಂಟೆಗಳ ಕಾಲ ಕೂಡಿಸಿಕೊಂಡು ರಾತ್ರಿ 11:40 ಕ್ಕೆ ಬಿಡುಗಡೆ ಮಾಡಿ ಕಳುಹಿಸಿರುವುದು ಎಷ್ಟರ ಮಟ್ಟಿಗೆ ಸರಿ?. ಎಂದು ಪ್ರಶ್ನೆ ಮಾಡಿದರು.

ಸಮಾಜದಲ್ಲಿ ಆಗುವಂತಹ ಅನ್ಯಾಯ ಸರಿಪಡಿಸುವಂತೆ ಆಡಳಿತದ ವಿರುದ್ಧ, ಸರ್ಕಾರದ ವಿರುದ್ಧ ಹೋರಾಟ ಮಾಡುವುದೇ ತಪ್ಪೇ? ಎಂಬುವುದು ಶೋಚನೀಯ ಸಂಗತಿಯಾಗಿದೆ. ಇತ್ತಿಚ್ಚಿಗೆ ಬೀದರ ಜಿಲ್ಲೆಯಲ್ಲಿ ಎ.ಟಿ.ಎಂ. ದರೋಡೆ, ಕೊಲೆ, ನ್ಯಾಯಾವಾದಿಗಳ ಮನೆಯಲ್ಲಿ ಕಳ್ಳತನ, ಸಾರ್ವಜಿಕರ ವಾಹನಗಳ ಕಳುವು ಹೀಗೆ ಹತ್ತು ಹಲವು ದಿನನಿತ್ಯದ ಸಮಸ್ಯೆಗಳು ಎದ್ದು ನಿಲ್ಲುತ್ತಿವೆ. ಇದಕ್ಕೆ ಪೊಲೀಸರು ಮುಂಜಾಗ್ರತಾ ಕ್ರಮ ಏಕೆ ತೆಗೆದುಕೊಳ್ಳುತ್ತಿಲ್ಲ?. ಜಿಲ್ಲೆಯ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ಮಾಡುವವರನ್ನು ಹತ್ತಿಕ್ಕುವ ಪ್ರಯತ್ನದೊಂದಿಗೆ ಮತ್ತು ಅವರುಗಳ ಕುಟುಂಬದಲ್ಲಿ ಭಯದ ವಾತಾವರಣ ಸೃಷ್ಟಿಸುತ್ತಿರುವರು.

ಇದನ್ನೆಲ್ಲ ಮಾಡಿ ಸಚಿವರಿಂದ ಪೊಲೀಸ್ ಇಲಾಖೆಯು ಭೇಷ್ ಎನ್ನಿಸಿಕೊಳ್ಳುತ್ತಿದೆ. ಆದರೆ ಹೋರಾಟ, ಚಳುವಳಿ ನಿಂತ ನೀರಲ್ಲ, ಇದು ಸರ್ಕಾರಕ್ಕೆ ಮತ್ತು ಆಡಳಿತಕ್ಕೆ ಗೊತ್ತಿರಬೇಕು. ಈ ಮೊಂಡುತನ ಮತ್ತು ಹುಕುಂಶಾಹಿ ಆಡಳಿತದಿಂದ ಹೊರಗೆ ಬಂದು ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಇದ್ದಿದ್ದೇವೆಂದು ತಿಳಿದುಕೊಳ್ಳಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಾಂತ ಸಚಿವರ ಮತ್ತು ಜಿಲ್ಲಾ ಪೊಲೀಸ್ ಇಲಾಖೆಯ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸುವುದಾಗಿ ಪ್ರಕಾಶ ತಿಳಿಸಿದರು.

ಸಮಿತಿಯ ರಾಜ್ಯ ಯುವ ಘಟಕದ ರಾಜ್ಯಾಧ್ಯಕ್ಷ ನೀಲಕಂಠ ಭೆಂಡೆ,, ಕಾರ್ಮಿಕ ಘಟಕದ ಅಧ್ಯಕ್ಷ ಸ್ವಾಮೀದಾಸ್ ರಾಜಗಿರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀನಾಥ ದರ್ಗಾ ಜಿಲ್ಲಾ ಉಪಾಧ್ಯಕ್ಷ ಸಂತೋಷ ಹಳ್ಳಿಖೇಡ್, ಬಸವಕಲ್ಯಾಣ ತಾಲೂಕು ಅಧ್ಯಕ್ಷ ಲಖನ್ ಮುಜುನಾಯಕ, ಹುಮನಾಬಾದ ತಾಲೂಕು ಅಧ್ಯಕ್ಷ ರಾಜು ಮುಗುನೂರ್, ಕಾರ್ಯದರ್ಶಿ ಪ್ರಮೋದ ಮರಕುಂದಾ,

ಪತ್ರಿಕಾಗೋಷ್ಠಿಯಲ್ಲಿದ್ದರು.



ಬೀದರ: ಭಾಲ್ಕಿಯಲ್ಲಿ ಮಂಗಳವಾರ ನಡೆದ ವಚನ ಜಾತ್ರೆಯ ಸಮಾರೋಪ ಸಮಾರಂಭದಲ್ಲಿ ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಬೀದರನ ಸಪ್ತಸ್ವರ ಸಂಗೀತ ಕಲಾ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ನಾಗಮಾರಪಳ್ಳಿ ಅವರನ್ನು ಸನ್ಮಾನಿಸಿದರು.

## 27ರಂದು ಶಿವಾಜಿ ಮಹಾರಾಜರ ಮೂರ್ತಿ ಉದ್ಘಾಟನೆ



ಬೀದರ.ಏ. 23 : ಈ ತಿಂಗಳ 27ರಂದು ಸಾಯಂಕಾಲ 6 ಗಂಟೆಗ ತಾಲೂಕಿನ ಮಿರ್ಜಾಪುರ(ಕೆ) ಗ್ರಾಮದಲ್ಲಿ ಹಿಂದೂ ಸಾಮ್ರಾಟ ಶಿವಾಜಿ ಮಹಾರಾಜರ ಮೂರ್ತಿ ಉದ್ಘಾಟನಾ ಕಾರ್ಯಕ್ರಮ ಜರುಗಲಿದೆ ಎಂದು ಛತ್ರಪತಿ ಶಿವಾಜಿ ಮಹಾರಾಜ ಜನತಾ ಸಂಘದ ಅಧ್ಯಕ್ಷ ಸಂದೀಪ್ ಪಾಟೀಲ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಅಂದಿನ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಸುಲ್ತಾನಪುರ ಮಲ್ಲಯ್ಯನಗಿರಿ ಆಶ್ರಮದ ಪೂಜ್ಯ ಡಾ. ಬಸವಲಿಂಗ ಅವಧೂತರು, ಸ್ವಂತ ಹಾಗೂ ಕಲ್ಮೋಡದ ಪೀಠಾಧಿಪತಿ ಪೂಜ್ಯ ದತ್ತ ದಿಗಂಬರ ಶ್ರೀ ಶಂಕರಲಿಂಗ ಮಹಾರಾಜರು, ಔಥತಪುರದ ಶ್ರೀ ಯೋಗಿ ಮಚೇಂದ್ರನಾಥ ಮುತ್ಯ, ಹಳೆಂಬರದ ಪೂಜ್ಯ ಬಾಬುರಾವ್ ಮುತ್ಯ ರಾಜನಾಳದ ಕಾಶಿನಾಥ ಮಹಾರಾಜರು, ಬೀರಲಿಂಗೇಶ್ವರ ಪಟ್ಟದ ದೇವರಾದ ಬಾಲ ತಪಸ್ವಿ ಪೂಜ್ಯ ಗೋಪಾಲ ಮುತ್ಯ ಹಾಗೂ ಪಂಡರಾಪುರದ ಪೂಜ್ಯ ಅಂಬಾದಾಸ ಮಹಾರಾಜರು ಸಾನಿಧ್ಯ ವಹಿಸುವರು.

ಮಾಜಿ ಉಪ ಮುಖ್ಯಮಂತ್ರಿ ಕೆ ಎಸ್ ಈಶ್ವರಪ್ಪ ಹಾಗೂ ಮಾಜಿ ಕೇಂದ್ರ ಸಚಿವರು ಮತ್ತು ವಿಜಯಪುರ ನಗರ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಜಂಟಿಯಾಗಿ ಕಾರ್ಯಕ್ರಮ ಉದ್ಘಾಟಿಸುವರು. ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್, ಔರಾದ ಶಾಸಕ ಪ್ರಭು ಚೌಹಾಣ್, ಮಾಜಿ ವಿಧಾನ ಪರಿಷತ್ ಸಭಾಪತಿ ರಘುನಾಥರಾವ್ ಮಲ್ಕಾಪುರೆ, ಬಸವಕಲ್ಯಾಣ ಶಾಸಕ ಶರಣು ಸಲಗರ, ಹುಮ್ನಾಬಾದ್ ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ್, ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಮಾಜಿ ವಿಧಾನ ಪರಿಷತ್ ಸದಸ್ಯ ಮಾರುತಿರಾವ ಮೂಳೆ, ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ, ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್, ಮಾಜಿ ಶಾಸಕ ಪ್ರಕಾಶ ಖಂಡ್ರೆ, ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ದೀಪಕ ಗಾದಗಿ, ಬಿಜೆಪಿ ನಿಕಟಪೂರ್ವ ಮಂಡಲ ಅಧ್ಯಕ್ಷ ರಾಜೇಂದ್ರ ಪೂಜಾರಿ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಮಹೇಶ್ವರ ಸ್ವಾಮಿ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ್ ಚಿದ್ರಿ, ಬಿಜೆಪಿ ನಗರ ಮಂಡಲ ಖಜಾಂಚಿ ರಾಜಕುಮಾರ ಜಮಾದಾರ್, ಉಣ್ಣೆ ಮತ್ತು ಕುರಿ ಅಭಿವೃದ್ಧಿ ನಿಗಮ ಮಂಡಳಿಯ ಮಾಜಿ ಅಧ್ಯಕ್ಷ ಪಂಡಿತರಾವ್ ಚಿದ್ರಿ, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ವಿಜಯಕುಮಾರ್ ಪಾಟೀಲ್ ಗಾದಗಿ, ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಕುಶಾಲ ಪಾಟೀಲ್ ಗಾದಗಿ, ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ನಿರ್ದೇಶಕ ಡಾ. ರಜನೀಶ ವಾಲಿ, ಜಿಲ್ಲಾ ಪಂಚಾಯತ್ ಸದಸ್ಯ ಬಾಬುರಾವ್ ಮಲ್ಕಾಪುರೆ, ನ್ಯಾಷನಲ್ ಅಂಡ್ ಸೈನಿಕ್ ಪಬ್ಲಿಕ್ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಲತಾ ಸ್ವಾಮಿ, ಕೆಎಂಎಫ್‌ಸಿ ಕಲ್ಬುರ್ಗಿಯ ನಿರ್ದೇಶಕ ಮಲ್ಲಿಕಾರ್ಜುನ್ ಬಿರಾದಾರ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬೀರಪ್ಪ ಔರಾದೆ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಯುವ ಗರ್ಜನೆ ಅಧ್ಯಕ್ಷ ಲೋಕೇಶ ಮರ್ಜಾಪುರ್, ಚಿಲ್ಲರ್ಗಿ ಗ್ರಾಮ ಪಂಚಾಯತ್ ಅಧ್ಯಕ್ಷ ಜಯರಾಜ, ಯುವ ಮುಖಂಡ ಜಗನ್ನಾಥ ಜಮಾದಾರ್, ಪತ್ರಕರ್ತ ಸುನಿಲ್ ಬಾವಿಕಟ್ಟಿ, ಎಪಿಎಂಸಿ ಮಾಜಿ ನಿರ್ದೇಶಕ ಮಾರುತಿ ಕೋಳಿ ಚಾಂಬೋಳ್, ಗಾದಗಿ ಗ್ರಾಮ ಪಂಚಾಯತ್ ಅಧ್ಯಕ್ಷ ಪ್ರಕಾಶ, ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆ ಸಂಸ್ಥಾಪಕ ಸ್ವಾಮಿದಾಸ ಕೆಂಪೇನೂರ, ತಾಲೂಕು ಪಂಚಾಯತ್ ಮಾಜಿ ಅಧ್ಯಕ್ಷ ಅಶೋಕ ಪಾಟೀಲ್ ಅಲಿಯಾಬಾದ್, ರಾಷ್ಟ್ರರಕ್ಷಣಾ ಪಡೆ ಜಿಲ್ಲಾಧ್ಯಕ್ಷ ಅಮಿತ್ ಚಿಂಚೋಳಿ, ರಾಮ ಸೇನಾ ಜಿಲ್ಲಾಧ್ಯಕ್ಷ ವೀರು ಠಾಕೂರ್, ಹಿಂದೂ ಜಾಗರಣ ವೇದಿಕೆ ಸಂಚಾಲಕ ಜಗಮೋಹನ್ ರಾಜಪುತ, ಬಿಜೆಪಿ ಎಸ್ಸಿ ಮೋರ್ಚಾ ಮಂಡಲ ಪ್ರಧಾನ ಕಾರ್ಯದರ್ಶಿ ವೆಂಕಟೇಶ ಶಾಲಿ ಚಿದ್ರಿ, ಹಿಂಧು ಸಂಘಟನೆ ಜಿಲ್ಲಾಧ್ಯಕ್ಷ ನಾಗರಾಜ ಹಾಗೂ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಶಿವಾಜಿ ಮಹಾರಾಜ ಜನತಾ ಸಂಘದ ಅಧ್ಯಕ್ಷನಾದ ನಾನು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವೇನು. ದಿಗಂಬರ್ ಮಾನಕಾರಿ ಕಾರ್ಯಕ್ರಮದಲ್ಲಿ ಗೌರವ ಉಪಸ್ಥಿತರಿರುವರು ಎಂದು ಸಂದೀಪ್ ಪಾಟೀಲ್ ಕಾರ್ಯಕ್ರಮದ ವಿವರಣೆ ನೀಡಿದರು.

ಸಂಘದ ಪ್ರಮುಖರಾದ ದತ್ತು ಮೂಲಗೆ, ಧನರಾಜ ಪಾಂಡ್ರೆ, ವಿಠಲ ಸೆಣಗೆ, ಶಿವಕುಮಾರ ರಾಯಣ್ಣ, ಸುಭಾಷ ಮಲಾರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಹಾರಬಿಟ್ಟು ಪುಸ್ತಕಗಳನ್ನೇ ಕಾಣಿಕೆಯಾಗಿ ನೀಡಿ: ಪ್ರೊ.ಉಮಾಕಾಂತ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ವ್ಯಕ್ತಿಯ ಜೀವನದ ಜನನದಿಂದ ಮರಣದ ಕೊನೇ ಸಂದರ್ಭದ ಎಲ್ಲಾ ಕಾರ್ಯಕ್ರಮಗಳಲ್ಲಿ ಪುಸ್ತಕಗಳನ್ನೇ ಕಾಣಿಕೆಯಾಗಿ ನೀಡಿ ಪುಸ್ತಕ ಸಂಸ್ಕೃತಿ ಹೆಚ್ಚಿಸಬೇಕೆಂದು ನವದೆಹಲಿಯ ವೆಂಕಟೇಶ್ವರ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ಉಮಾಕಾಂತ ಪಾಟೀಲ ತಿಳಿಸಿದರು. ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಓಂ ಸಿದ್ಧಿವಿನಾಯಕ ಪದವಿ ಕಾಲೇಜಿನ ಸಭಾಂಗಣದಲ್ಲಿ ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘ, ಕನ್ನಡ ಪುಸ್ತಕ ಪ್ರಾಧಿಕಾರದ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆ ಹಾಗೂ ಓಂ ಸಿದ್ಧಿವಿನಾಯಕ ಪದವಿ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಜರುಗಿದ ವಿಶ್ವ ಪುಸ್ತಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಯಾರು ಪುಸ್ತಕಗಳನ್ನು ತಲೆಬಾಗಿ ಓದುವರೋ ಅವರು ಜೀವನದಲ್ಲಿ ತಲೆಯೆತ್ತಿ ಓಡಾಡಬಲ್ಲರು. ಪುಸ್ತಕಗಳನ್ನು ಸ್ನೇಹಿತರಂತೆ ಪ್ರೀತಿಸಬೇಕು. ಅವು ಓದುವುದರಿಂದ ಧೈರ್ಯದಿಂದ ಬದುಕು ಸಾಹಿಸಬಹುದು. ಸಾಧು–ಸಂತರ, ಮಹಾತ್ಮ ಮಹಾನುಭಾವರ, ದೇಶಪ್ರೇಮಿಗಳ ಪುಸ್ತಕ ಓದಿ ಅವರ ಆದರ್ಶ ಮೈಗೂಡಿಸಿಕೊಳ್ಳಬೇಕು. ಪುಸ್ತಕಗಳನ್ನು ಹೆಚ್ಚು ಓದಿದವರ ದೇಶ ವಿಶ್ವದಲ್ಲಿ ಪ್ರಚಾರದಲ್ಲಿರುತ್ತದೆ ಎಂದರು.

ಆಶಯ ನುಡಿಗಳನ್ನಾಡಿದ ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ಮಾತನಾಡಿ 1995ರ ಏ. 23ರಂದು ಯುನೆಸ್ಕೋ ಶೆಕ್ಸ್ಪಿಯರ್ ಸ್ಮರಣಾರ್ಥವಾಗಿ ವಿಶ್ವ ಪುಸ್ತಕ ದಿನಾಚರಣೆ ಆಚರಿಸಲು ಘೋಷಣೆ ಮಾಡಿತು. ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣ ಬಳಕೆ ಬಿಟ್ಟು ಪುಸ್ತಕಗಳನ್ನು ಓದಬೇಕು. ಇದರಿಂದ ಸಾಗರದಷ್ಟು ಜ್ಞಾನ ಸಿಗುತ್ತದೆ. ಪುಸ್ತಕದ ಕಡೆಗೆ ವಿದ್ಯಾರ್ಥಿಗಳು ಬರದೇ ಇದ್ದಾಗ, ಪುಸ್ತಕಗಳನ್ನೇ ವಿದ್ಯಾರ್ಥಿಗಳ ಹತ್ತಿರ ಕೊಂಡೊಯ್ಯುವ ಪ್ರಯತ್ನ ನಾವು ಮಾಡುತ್ತಿದ್ದೇವೆ ಎಂದರು. ಇಂದು 3 ಸಾವಿರಕ್ಕೂ ಅಧಿಕ ಭಾಷೆಗಳಲ್ಲಿ ಪುಸ್ತಕ ಪ್ರಕಟವಾಗುತ್ತಿವೆ. ಮನೆಗೆ ದೀಪ ಎಷ್ಟು ಮುಖ್ಯವೋ ವ್ಯಕ್ತಿಗೆ ಪುಸ್ತಕವೂ ಅಷ್ಟೇ ಮುಖ್ಯ. ಹಲವು ಪುಸ್ತಕಗಳಿರುವ ಮನೆ ವಿ.ವಿ.ಗೆ ಸಮಾನ. ಪುಸ್ತಕಗಳಿಲ್ಲದ ಮನೆ ಆತ್ಮವಿಲ್ಲದ ದೇಹದಂತೆ ಎಂದು ಮಾರ್ಮಿಕವಾಗಿ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಪ್ರೊ. ಸಿದ್ರಾಮ ಬಿಚಕುಂದೆ ಮಾತನಾಡಿ ನಿಮ್ಮಲ್ಲಿ 2 ರೂಪಾಯಿ ಇದ್ದರೆ ಒಂದು ರೂಪಾಯಿ ಅನ್ನ ಬಟ್ಟೆಗಾಗಿ ಖರ್ಚು ಮಾಡಿ. ಇನ್ನುಳಿದ ಒಂದು ರೂಪಾಯಿಯಲ್ಲಿ ಪುಸ್ತಕ ಖರೀದಿಸಿ ಎಂದು ಹೇಳಿದ ಡಾ. ಅಂಬೇಡ್ಕರರ ಮಾತುಗಳನ್ನು ಸ್ಮರಿಸಿ ಪುಸ್ತಕ ಓದುವಂತೆ ಮಕ್ಕಳಿಗೆ ಸಲಹೆ ನೀಡಿದರು. ವೇದಿಕೆ ಮೇಲೆ ಪ್ರಾಧ್ಯಾಪಕ ವಿಜಯಕುಮಾರ ಚಿಟ್ಟೆ, ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಕಾರ್ಯದರ್ಶಿ ಡಾ. ರಾಜಕುಮಾರ ಹೆಬ್ಬಾಳೆ ಉಪಸ್ಥಿತರಿದ್ದರು.

ಜನಪದ ಗಾಯಕ ಎಸ್.ಬಿ. ಕುಚಬಾಳ ಗಾಯನ ಮಾಡಿದರು. ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘದ ಕಾರ್ಯದರ್ಶಿ ನಿಜಲಿಂಗಪ್ಪ ತಗಾರೆ ಸ್ವಾಗತಿಸಿದರು. ಸಂಚಾಲಕಿ ಡಾ. ಸುನಿತಾ ಕೂಡ್ಲಿಕರ್ ನಿರೂಪಿಸಿದರು. ಪ್ರಾಧ್ಯಾಪಕಿ ಅಂಬಿಕಾ ಬಿರಾದಾರ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ಶಿವಶರಣಪ್ಪ ಗಣೇಶಪುರ, ಮಹಾರುದ್ರ ಡಾಕುಳಗೆ, ಶ್ರೀಕಾಂತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಉತ್ತಮ ಆರೋಗ್ಯವೇ ದೇಶದ ಅಭಿವೃದ್ಧಿಗೆ ಪೂರಕ:ಬಿರಾದಾರ




ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ.23: ಮನುಷ್ಯನ ಜೀವನದಲ್ಲಿ ದೊಡ್ಡ ಆಸ್ತಿಯೆಂದರೆ ಆರೋಗ್ಯವಾಗಿದೆ. ಹೀಗಾಗಿ ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿಯನ್ನು ಹೊಂದಬೇಕಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರ ಹೇಳಿದರು.

ಅವರು ಇಂದು ಬೀದರ ವಿಶ್ವವಿದ್ಯಾಲಯದಲ್ಲಿ ಆಕ್ಸಿಲೈಫ್ ಹಾಸ್ಪಿಟಲ್ ಬೀದರ ಹಾಗೂ ಬೀದರ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ ಆರೋಗ್ಯದ ಬಗ್ಗೆ ನಿರ್ಲಕ್ಷ ಸಲ್ಲದು. ಚಿಕ್ಕ ಚಿಕ್ಕ ಕಾಯಿಲೆಯೆಂದು ನಿರ್ಲಕ್ಷಿಸಿದರೆ ಗಂಡಾಂತರ ಖಂಡಿತ. ಹಾಗಾಗಿ ಆರೋಗ್ಯದ ಕಡೆಗೆ ಹೆಚ್ಚಿನ ನಿಗಾ ಮಹಿಸಬೇಕು. ಉತ್ತಮ ಆರೋಗ್ಯವು ದೇಶದ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದರು.

ಆರೋಗ್ಯ ತಪಾಸಣೆಗೆ ಆಗಮಿಸಿದ ಆಕ್ಸಿಲೈಫ್ ಹಾಸ್ಪಿಟಲ್‌ನ ವೈದ್ಯರಾದ ಡಾ. ಸಪೂರಾರವರು ಮಾತನಾಡುತ್ತಾ ವ್ಯಕ್ತಿಗಳು ಸಮತೋಲಿತ ಆಹಾರ ಸೇವಿಸಬೇಕು. ಹೆಚ್ಚಿಗೆ ನೀರನ್ನು ಸೇವಿಸಬೇಕು. ನಿರಂತರ ಆರೋಗ್ಯ ತಪಾಸಣೆಗೆ ಒಳಗಾಗಬೇಕು. ಅನೇಕ ವೈರಸ್‌ಗಳಿಂದಾಗಿ ಸಾಕಷ್ಟು ರೋಗಗಳು ಬರುತ್ತಿವೆ. ಅದಕ್ಕಾಗಿ ಹೆಚ್ಚಿನ ಜಾಗೃತಿ ಹಾಗೂ ಎಚ್ಚರ ವಹಿಸಬೇಕಾಗಿದೆ ಎಂದರು.


ಆಕ್ಸಿಲೈಫ್ ಹಾಸ್ಪಿಟಲ್‌ನ ಮಾರ್ಕೆಟಿಂಗ್ ಮ್ಯಾನೇಜರ್ ನಾಗರಾಜ ಸ್ವಾಮಿ ಮಾತನಾಡಿ, ನಮ್ಮ ದಿನಚರಿಯು ನಮ್ಮ ಆರೋಗ್ಯವನ್ನು ನಿರ್ಧರಿಸುತ್ತದೆ. ಹಾಗಾಗಿ ಉತ್ತಮ ಆಹಾರ ಸೇವನೆ ಮುಖ್ಯವಾಗಿದೆ. ಮುಂಜಾನೆ ಶಾಂತಭಾವದಿಂದ ವಾಕಿಂಗ್ ಮಾಡಬೇಕು. ಸರಿಯಾದ ಸಮಯಕ್ಕೆ ಉಪಹಾರ ಮತ್ತು ಊಟ ಸೇವಿಸಬೇಕೆಂದರು.

ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸು–ರೇಖಾ ಕೆ.ಎ.ಎಸ್. ಪ್ರಸ್ತಾವಿಕ ಮಾತನಾಡುತ್ತಾ ಇಂದಿನ ಒತ್ತಡದ ಜೀವನಶೈಲಿಯಲ್ಲಿ ಆರೋಗ್ಯದ ಬಗ್ಗೆ ಹೆಚ್ಚಿನ ಗಮನವಹಿಸಬೇಕಾಗಿದೆ. ಕಾಯಿಲೆ ಬಂದ ನಂತರ ಎಷ್ಟು ಹಣ ವ್ಯಯಿಸಿದರೂ ವ್ಯರ್ಥ. ಹಾಗಾಗಿ ಕಾಯಿಲೆ ಬರದಂತೆ ಆರೋಗ್ಯ ಕಾಪಾಡಿಕೊಳ್ಳಬೇಕು. ಇಂದಿನ ಕಲುಷಿತ ವಾತಾವರಣದಲ್ಲಿ ಆರೋಗ್ಯದ ಬಗ್ಗೆ ಹೆಚ್ಚಿನ ಜಾಗ್ರತೆ ವಹಿಸಬೇಕಾಗಿದೆ. ಬಿಸಿಲಿನ ತಾಪ ಹೆಚ್ಚಾಗಿರುವುದರಿಂದ ತಣ್ಣಗಿನ ಬಟ್ಟೆ, ತಂಪು ನೀರು, ಮಜ್ಜಿಗೆಯಂತಹ ಪಾನೀಯಗಳನ್ನು ಸೇವಿಸಲು ಸಲಹೆ ನೀಡಿದರು.

ಉಚಿತ ತಪಾಸಣೆಯಲ್ಲಿ ಎರಡು ನೂರಕ್ಕಿಂತ ಅಧಿಕ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ತಪಾಸಣೆಗೊಳಗಾಗಿ ಆರೋಗ್ಯದ ಕುರಿತಾದ ಮಾಹಿತಿಯನ್ನು ವೈದ್ಯರಿಂದ ಪಡೆದರು.

ಈ ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಪರಮೇಶ್ವರನಾಯ್ಕ.ಟಿ, ಆಕ್ಸಿಲೈಫ್ ಹಾಸ್ಪಿಟಲ್‌ನ ಸಿಬ್ಬಂದಿಗಳಾದ ಸುಜಾತಾ, ರೋಹಿತ್, ವಿಶ್ವ ಹಾಗೂ ಬಸವರಾಜ ಉಪಸ್ಥಿತರಿದ್ದರು, ಕಾರ್ಯಕ್ರಮವನ್ನು ಡಾ. ರಾಮಚಂದ್ರ ಗಣಾಪೂರ ನಿರೂಪಿಸಿದರು. ಡಾ. ಗುಂಡಪ್ಪ ಸಿಂಗೆಯವರು ವಂದಿಸಿದರು.


## ಮೃತನ ಕುಟುಂಬಕ್ಕೆ ಶಾಸಕ ಸಿದ್ದಲಿಂಗಪ್ಪ ಪಾಟೀಲ ನೆರವು



ಬೀದರ. ಏ. 23 : ಹುಮನಾಬಾದ ತಾಲ್ಲೂಕಿನ ಸಿಂಧನಕೇರಾ ಗ್ರಾಮದಲ್ಲಿ ಈಚೆಗೆ ಮೃತಪಟ್ಟ ಗ್ರಾಮ ಪಂಚಾಯಿತಿ ಕಂಪ್ಯೂಟರ್ ಆಪರೇಟರ್ ಸುಭಾಷ್ ಅವರ ಮನೆಗೆ ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ ಭೇಟಿ ನೀಡಿ ?50 ಸಾವಿರ ಧನಸಹಾಯ ವಿತರಣೆ ಮಾಡಿದರು. ಬಳಿಕ ಮಾತನಾಡಿದ ಅವರು, 'ಸುಭಾಷ್ ಕುಟುಂಬದ ಒಬ್ಬರಿಗೆ ಪಂಚಾಯಿತಿಯಲ್ಲಿ ಕೆಲಸ ಕೊಡಿಸಲಾಗುವುದು.

ಈ ಸಂಘಟನೆ ಬಗ್ಗೆ ಸರ್ಕಾರದ ಗಮನಕ್ಕೆ ತಂದು ಆರ್ಥಿಕ ಸಹಾಯ ಮಾಡುವಂತೆ ಮನವಿ ಮಾಡಲಾಗುವುದು' ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಅನಿಲ ಪಸರ್ಗಿ, ಶಿವಾನಂದ ಮೂಲಗೆ, ಮಂಜುನಾಥ ಪಾಟೀಲ, ಶ್ರೀಶೈಲೇಶ, ವೈಜಿನಾಥ ಸ್ವಾಮಿ, ಸುನೀಲ ಪತ್ರಿ, ಸಂಜು ವಾಡೇಕರ್, ಅಂಜು ರೆಡ್ಡಿ, ಪ್ರೇಮ ಬುಡಕೆ ಸೇರಿದಂತೆ ಇತರರು ಇದ್ದರು. ಪಿಡಿಒ ಅಮಾನತು: ಕರ್ತವ್ಯದಲ್ಲಿ ನಿರ್ಲಕ್ಷ್ಯ ಹಾಗೂ ಕಚೇರಿ ಕೆಲಸಕ್ಕೆ ಅನಿಧಿಕೃತ ಗೈರು ಹಾಜರಿ ಆರೋಪದ ಮೇರೆಗೆ ಸಿಂಧನಕೇರಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಸುಗಂಧಾ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ ಆದೇಶ ಹೊರಡಿಸಿದ್ದಾರೆ. ಕಿರುಕುಳದಿಂದ ಗ್ರಾ.ಪಂ ಕಂಪ್ಯೂಟರ್ ಆಪರೇಟರ್ ಸುಭಾಷ ನಿಧನ ಹೊಂದಿದ್ದು, ಪಿಡಿಒ ವಿರುದ್ಧ ಕ್ರಮ ಕೈಗೊಳ್ಳುವಂತೆ ಚಿಟಗುಪ್ಪ ಠಾಣೆಯಲ್ಲಿ ಇತ್ತೀಚೆಗೆ ಪ್ರಕರಣ ದಾಖಲಾಗಿತ್ತು. ಮೇಲಧಿಕಾರಿಗಳ ಅನುಮತಿ ಇಲ್ಲದೆ ಕರ್ತವ್ಯಕ್ಕೆ ಗೈರು ಹಾಜರಾದ ಕಾರಣಕ್ಕೆ ಈ ಕ್ರಮ ಜರುಗಿಸಲಾಗಿದೆ.

## ಬಸವ ಜಯಂತಿ: ವಿವಿಧ ಸಮಿತಿ ರಚನೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23: ನಗರದಲ್ಲಿ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ತಿಳಿಸಿದ್ದಾರೆ.

ಸಮಿತಿಯ ಗೌರವ ಸಲಹೆಗಾರರಾಗಿ ಶಿವಶರಣಪ್ಪ ವಾಲಿ, ಬಿ.ಜಿ ಶೆಟಕಾರ್, ಚಂದ್ರಶೇಖರ ಪಾಟೀಲ ಗಾದಗಿ, ಗುರುನಾಥ ಕೊಳ್ಳೂರ, ಶಂಕರರಾವ್ ಹೊನ್ನಾ, ವೈಜಿನಾಥ ಕಮಠಾಣೆ, ಡಾ. ಶೈಲೇಂದ್ರ ಬೆಲ್ದಾಳೆ, ಬಾಬು ವಾಲಿ, ಶರಣಪ್ಪ ಮಿಠಾ–ರೆ, ಬಸವರಾಜ ಪಾಟೀಲ ಹಾರೂರಗೇರಿ, ರಾಜೇಂದ್ರ ಗಂದಗೆ, ಗೌರವಾಧ್ಯಕ್ಷರಾಗಿ ಸುರೇಶ ಚನಶೆಟ್ಟಿ, ಹಿರಿಯ ಉಪಾಧ್ಯಕ್ಷರಾಗಿ ಪ್ರಭುರಾವ್ ವಸ್ಮತೆ, ಸೋಮಶೇಖರ ಪಾಟೀಲ ಗಾದಗಿ, ರಮೇಶ ಪಾಟೀಲ ಸೋಲಪೂರ, ಬಸವರಾಜ ಧನ್ನೂರ, ವಿಜಯಕುಮಾರ ಅಣ್ಣೆಪ್ಪ ಪಾಟೀಲ ಗಾದಗಿ, ಸೂರ್ಯಕಾಂತ ಶೆಟಕಾರ್, ದೀಪಕ ವಾಲಿ, ಆನಂದ ದೇವಪ್ಪ, ವಿಶ್ವನಾಥ ಕಾಜಿ, ರಮೇಶ ಮಠಪತಿ, ಶಾಮರಾವ್ ಸುಲಗುಂಟೆ, ಚಂದ್ರಶೇಖರ ಹೆಬ್ಬಾಳೆ, ಹಾವಶೆಟ್ಟಿ ಪಾಟೀಲ, ಮಾರುತಿ ಬೌದ್ಧೆ, ಅನಿಲ ಬೆಲ್ದಾರ್, ವಿಜಯಕುಮಾರ ಸೋನಾರೆ, ಕಾರ್ಯದರ್ಶಿಗಳಾಗಿ ಜಗದೀಶ ಖೋಬಾ, ಸೋಮಶೇಖರ ಪಾಟೀಲ, ಕೃಪಾ ಸಿಂಧು ಪಾಟೀಲ, ರಾಜೇಂದ್ರ ಜೊನ್ನಿಕೇರಿ, ಶಿವಶಂಕರ ಟೋಕರೆ, ಭರತ ಶೆಟಕಾರ್ ಹಾಗೂ ಶಿವಕುಮಾರ ಕಟ್ಟೆ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಮೆರವಣಿಗೆ ಸಮಿತಿ ಅಧ್ಯಕ್ಷರಾಗಿ ಧನರಾಜ ಹಂಗರಗಿ, ಕಾರ್ಯದರ್ಶಿಯಾಗಿ ಬಾಬುರಾವ್ ದಾನಿ, ಸಂಚಾಲಕರಾಗಿ ಶಶಿಧರ ಹೊಸಳ್ಳಿ, ಕಾರ್ಯದರ್ಶಿಯಾಗಿ ಹಣಮಂತ ಬುಳ್ಳಾ, ಕಾರು ಮತ್ತು ಬೈಕ್ ರ್ಯಾಲಿ ಸಮಿತಿಯ ಅಧ್ಯಕ್ಷರಾಗಿ ಅರುಣ ಹೊತಪೇಟ್, ಕಾರ್ಯದರ್ಶಿಯಾಗಿ ಸುನೀಲ್ ದಳವೆ, ಸಂಚಾಲಕರಾಗಿ ಭೀಮಣ್ಣ ಸೋರಳ್ಳಿ, ಸದಸ್ಯರಾಗಿ ಕಪಿಲ್ ಹೂಗಾರ, ವೇದಿಕೆ ಸಮಿತಿ ಅಧ್ಯಕ್ಷರಾಗಿ ಸುರೇಶ ಸ್ವಾಮಿ, ಕಾರ್ಯದರ್ಶಿಯಾಗಿ ರಾಚಪ್ಪ ಪಾಟೀಲ, ಸಂಚಾಲಕರಾಗಿ ಚೆನ್ನಬಸವ ಹೇಡೆ, ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷರಾಗಿ ಸಂಗ್ರಾಮ ಎಂಗಳೆ, ಕಾರ್ಯದರ್ಶಿಯಾಗಿ ಅಶೋಕ ಶೀಲವಂತ, ಸಂಚಾಲಕರಾಗಿ ನೆಹರು ಸ್ವಾಮಿ, ಅಲಂಕಾರ ಸಮಿತಿಯ ಅಧ್ಯಕ್ಷರಾಗಿ ಓಂಕಾರ ಪಸಾರಗೆ, ಕಾರ್ಯದರ್ಶಿಯಾಗಿ ಸಿದ್ಧಾರೂಢ ಭಾಲ್ಕೆ, ಸಂಚಾಲಕರಾಗಿ ಗಣೇಶ ಬಿರಾದಾರ, ಪಚಾರ ಸಮಿತಿಯ ಅಧ್ಯಕ್ಷರಾದ ಡಿ.ಕೆ. ಗಣಪತಿ, ಕಾರ್ಯದರ್ಶಿಯಾಗಿ ವಿರೂಪಾಕ್ಷ ಗಾದಗಿ ಸಂಚಾಲಕರಾಗಿ ಶಶಿಕುಮಾರ ಪಾಟೀಲ ಸಂಗಮ, ಪ್ರಸಾದ ಸಮಿತಿಯ ಅಧ್ಯಕ್ಷರಾಗಿ ವಿಶ್ವನಾಥ ಕಾಜಿ, ಕಾರ್ಯದರ್ಶಿಯಾಗಿ ಶಿವರಾಜ ಮದಕಟ್ಟಿ, ಸಂಚಾಲಕರಾಗಿ ಅಶೋಕ ದಿಡಗೆ, ಹಣಕಾಸು ಸಮಿತಿಯ ಅಧ್ಯಕ್ಷರಾಗಿ ಡಾ. ರಜನೀಶ ವಾಲಿ, ಕಾರ್ಯದರ್ಶಿಯಾಗಿ ವಿವೇಕ ಧನ್ನೂರ, ಸಂಚಾಲಕರಾಗಿ ವಿಜಯಕುಮಾರ ಪಾಟೀಲ ಯರನಳ್ಳಿ, ಡಾ. ಮಲ್ಲಿಕಾರ್ಜುನ ಬುಕ್ಕಾ, ಬಸವರಾಜ ಭತಮುರ್ಗೆ, ಮಹಿಳಾ ಸಮಿತಿಯ ಅಧ್ಯಕ್ಷರಾಗಿ ಡಾ. ವಿಜಯಶ್ರೀ ಬಶೆಟ್ಟಿ, ಕಾರ್ಯದರ್ಶಿಯಾಗಿ ವಿಜಯಲಕ್ಷ್ಮಿ ಕೌಟಗೆ ಹಾಗೂ ಸಂಚಾಲಕರಾಗಿ ಕಸ್ತೂರಿ ಪಟಪಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

## ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯತಿ ಕ್ಷೇತ್ರಗಳಲ್ಲಿ ಉಪ-ಚುನಾವಣೆ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏಪ್ರಿಲ್ 23: ರಾಜ್ಯ ಚುನಾವಣಾ ಆಯೋಗವು ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯತಿ ಕ್ಷೇತ್ರಗಳಲ್ಲಿ ಉಪ-ಚುನಾವಣೆಯನ್ನು ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿರುತ್ತದೆ, ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನಲ್ಲಿ 4-ಸೂಗೂರು, 5-ಬೇವಿನಾಳ ಗ್ರಾಮ ಪಂಚಾಯತಿಯ ಎಸ್. ಹೆಚ್ ಸದಸ್ಯರ ಸ್ಥಾನಕ್ಕೆ ಉಪ ಚುನಾವಣೆ ವೇಳಾಪಟ್ಟಿ ಪ್ರಕಟಿಸಿದೆ ಎಂದು ಸುರಪುರ ತಹಸೀಲ್ದಾರ ಅವರು ತಿಳಿಸಿದ್ದಾರೆ.

ರಾಜ್ಯ ಚುನಾವಣಾ ಆಯೋಗವು ವಿವಿಧ ಕಾರಣಗಳಿಂದ ತೆರವಾಗಿರುವ ಗ್ರಾಮ ಪಂಚಾಯತಿಯ ಸದಸ್ಯರ ಸ್ಥಾನಗಳಿಗೆ ಉಪ ಚುನಾವಣೆ ನಡೆಸಲು ತೀರ್ಮಾನಿಸಿದ್ದು, ವೇಳಾಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ.

ಸುರಪುರ ತಾಲ್ಲೂಕಿನ 4-ಸೂಗೂರು ಗ್ರಾಮ ಪಂಚಾಯತಿಯ, 5-ಬೇವಿನಾಳ ಎಸ್.ಹೆಚ್ ಸದಸ್ಯರಾಗಿದ್ದ ಶ್ರೀ ಸಂಗಪ್ಪ ತಂದೆ ಬಸಪ್ಪ ಸಾ.ಬೇವಿನಾಳ ಎಸ್.ಹೆಚ್ ಅವರು ಮರಣ ಹೊಂದಿದ ಪ್ರಯುಕ್ತ ಈ ಸ್ಥಾನವು ತೆರವಾಗಿದ್ದು, ಈ ಸ್ಥಾನಕ್ಕೆ ಉಪ ಚುನಾವಣೆಯ ವೇಳಾಪಟ್ಟಿ ಪ್ರಕಟಿಸಿದೆ.

ಚುನಾವಣಾ ವೇಳಾಪಟ್ಟಿ 2025ರ ಏಪ್ರಿಲ್ 22ರ ಮಂಗಳವಾರ ರಂದು ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಲಾಗಿದೆ. 2025ರ ಏಪ್ರಿಲ್ 28ರ ಸೋಮವಾರ ರಂದು ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನ. 2025ರ ಏಪ್ರಿಲ್ 29ರ ಮಂಗಳವಾರ ರಂದು ನಾಮಪತ್ರಗಳನ್ನು ಪರಿಶೀಲನೆ ನಡೆಯಲಿದೆ. 2025ರ ಮೇ 2ರ ಶುಕ್ರವಾರ ರಂದು ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿದೆ. 2025ರ ಮೇ 11ರ ಭಾನುವಾರ ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆಯ ವರೆಗೆ ಮತದಾನದ ಅವಶ್ಯವಿದ್ದರೆ, ಮತದಾನವನ್ನು ನಡೆಯಲಿದೆ. 2025ರ ಮೇ 13ರ ಮಂಗಳವಾರ ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆಯವರೆಗೆ ಮರು ಮತದಾನದ ಅವಶ್ಯವಿದ್ದರೆ, ಮತದಾನವನ್ನು ನಡೆಯಲಿದೆ. 2025ರ ಮೇ 14ರ ಬುಧವಾರ ರಂದು ಬೆಳಿಗ್ಗೆ 8 ಗಂಟೆಯಿಂದ ಮತಗಳ ಎಣಿಕೆ ತಾಲ್ಲೂಕು ಕೇಂದ್ರಗಳಲ್ಲಿ ನಡೆಯಲಿದೆ. 2025ರ ಮೇ 14ರ ಬುಧವಾರ ರಂದು ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಲಿದೆ.

ಚುನಾವಣಾ ಆಯೋಗದ ನಿರ್ದೇಶನದಂತೆ 2025ರ ಏಪ್ರಿಲ್ 9 ರಂದು ಕರಡು ಮತದಾರರ ಪಟ್ಟಿಯನ್ನು ಹಾಗೂ 2025ರ ಏಪ್ರಿಲ್ 17 ರಂದು ಅಂತಿಮ ಮತದಾರರ ಪಟ್ಟಿಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ನೋಟಿಸ್ ಬೋರ್ಡಿಗೆ ಪ್ರಕಟಿಸಿದೆ. ಯಾದಗಿರಿ ಜಿಲ್ಲಾಧಿಕಾರಿಗಳು ಆದೇಶದ ಅನ್ವಯ ಸುರಪುರ ತಾಲ್ಲೂಕು ಪಂಚಾಯತಿ ಅಕ್ಷರದಾಸೋಹ ಸಹಾಯಕ ನಿರ್ದೇಶಕರು ಶ್ರೀ ಪಂಡಿತ್ ನಿಂಬುರೆ ಮೊ.ನಂ.9901230054, ಚುನಾವಣಾಧಿಕಾರಿ ಹಾಗೂ ಸೂಗೂರು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಹಣಮಂತ್ರಾಯ ಮೊ.ನಂ.8197742071ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅರ್ಹರು ಪಂಚಗ್ಯಾರಂಟಿ ಯೋಜನೆಗಳ ಲಾಭ ಪಡೆಯಲಿ ಪಂಚಗ್ಯಾರಂಟಿ

## ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶರಣಿಕ್ ಕುಮಾರ್ ದೋಕಾ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:23-ರಾಜ್ಯ ಸರ್ಕಾರವು ರಾಜ್ಯದ ಜನರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಸದೃಢಗೊಳಿಸಲು ಜಾರಿಗೆತಂದಿರುವ ಪಂಚಗ್ಯಾರಂಟಿ ಯೋಜನೆಗಳ ಲಾಭ ಅರ್ಹ ಫಲಾನುಭವಿಗಳಿಗೆ ದೊರೆಯುವಂತೆ ನೋಡಿಕೊಳ್ಳಲು ಪಂಚಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶರಣಿಕ್ ಕುಮಾರ್ ದೋಕಾ ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರಾಜ್ಯ ಸರ್ಕಾರದ ಮಹತ್ವದ ಈ ಯೋಜನೆಯಡಿ ಅರ್ಹ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗದಂತೆ ನಿಗಾವಹಿಸಿ, ಶೇ. ನೂರರಷ್ಟು ಪ್ರಗತಿ ಸಾಧಿಸುವಂತೆ ಅವರು ಸೂಚನೆ ನೀಡಿದರು. ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಸುಶೀಲ. ಬಿ.ಅವರು ಪಂಚಗ್ಯಾರಂಟಿ ಯೋಜನೆಗಳಡಿ ತಾಲೂಕ ಮಟ್ಟದ ಸಭೆಗಳಿಗೆ ಸಂಬಂಧಿಸಿದಂತೆ ತಾಲೂಕ ಮಟ್ಟದ ಸಮಿತಿಗಳನ್ನು ಪುನರ್ ರಚಿಸಿದ ನಂತರ ಸಭೆಗಳಿಗೆ ಅವಕಾಶ ದೊರೆಯಲಿದೆ. ಪಂಚ ಗ್ಯಾರಂಟಿ ಯೋಜನೆಗಳಡಿ ಸೂಕ್ತ ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೂ ಸೂಚಿಸಿದರು. ಇತ್ತೀಚೆಗೆ ಜಾಲಿಬೆಂಚಿ ಗ್ರಾಮದಲ್ಲಿನ ವಿದ್ಯುತ್ ಅವಘಡ ಅತ್ಯಂತ ಭಯಾನಕವಾಗಿದೆ. ಜೆಸ್ಕಾಂ ಅಧಿಕಾರಿಗಳು ಹಳೆಯ ಸಲಕರಣೆಗಳ ಸರ್ವೆ ನಡೆಸಿ ವರದಿ ಸಲ್ಲಿಸಬೇಕು. ಕ್ಷೇತ್ರಮಟ್ಟದಲ್ಲಿ ಅಧಿಕಾರಿಗಳು ಹೋಗಿ ನೈಜ ಖರ್ಚುವೆಚ್ಚದ ವರದಿ ಸಲ್ಲಿಸುವಂತೆ ಸೂಚನೆ ನೀಡಿ, ಪ್ರತಿ ವಾರ ಅಲ್ಲಿ ಸಾರ್ವಜನಿಕ ರೊಂದಿಗೆ ಚರ್ಚಿಸಿ ಸಮಸ್ಯೆಗಳ ಮೇಲೆ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳೂ ನಿರಂತರ ಸಭೆ ನಡೆಸಿ ಅವಶ್ಯಕ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಜಿಲ್ಲಾ ಸಮಿತಿ ಉಪಾಧ್ಯಕ್ಷರಾದ ಹಣಮಂತ ಕಾಣಳ್ಳಿ, ರಮೇಶ್ ದೊರಿ, ಬಸವರಾಜ ಬಿಳಾರ್, ಹಳ್ಳಪ್ಪ ಹವಾಲ್ದಾರ್ ನಾಗನೂರ, ಸ್ಯಾಮ್ಸನ್ ಮಾಳಿಕೇರಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

## ಸರ್ಕಾರಿ ವೈದ್ಯ ಮಹೇಶ ಮಡಿವಾಳರ ಯುಪಿಎಸ್ಸಿ ಪರೀಕ್ಷೆಯಲ್ಲಿ ಯಶಸ್ವಿ.



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಸಮೀಪದ ಮಡಿಕೇಶ್ವರ ಗ್ರಾಮದಲ್ಲಿ ಸರ್ಕಾರಿ ಆಸ್ಪತ್ರೆಯ ವೈದ್ಯರಾಗಿ ಸೇವೆ ಸಲ್ಲಿಸುತ್ತಿರುವ ವಿಜಯಪುರ ಜಿಲ್ಲೆ, ಸಿಂದಗಿ ತಾಲೂಕಿನ ಕನ್ನೊಳ್ಳಿ ಗ್ರಾಮದವರಾದ ಮಹೇಶ ಮಡಿವಾಳರ ಇವರು 2024-25 ನೇ ಸಾಲಿನ ಯುಪಿಎಸ್ಸಿ ಪರೀಕ್ಷೆಯಲ್ಲಿ 482 ರಾಂಕ್ ಪಡೆದು ಅಭೂತೂಪರ್ವಾಗಿ ಯಶಸ್ಸನ್ನು ಸಾಧಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಅವರು ಈ ಪರೀಕ್ಷೆಯಲ್ಲಿ ಯಶಸ್ವಿಯಾಗಬೇಕೆಂಬುದು ನನ್ನ ಬಹುದಿನದ ಕನಸಾಗಿತ್ತು, ನಿರಂತರ ಪರಿಶ್ರಮದ ಫಲವಾಗಿ ಇಂದು ನನಗೆ ಆ ಯಶಸ್ಸು ಸಿಕ್ಕಿದೆ ಈ ಸಂದರ್ಭದಲ್ಲಿ ನನಗೆ ಅತೀವ ಸಂತೋಷವಾಗಿದೆ ಎಂದರು. ಪೀರಾಪೂರ ಸರ್ಕಾರಿ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಆರ್.ಬಿ. ದಮ್ಮೂರಮಠ ಮಾತನಾಡಿ ಮಹೇಶ ಮಡಿವಾಳರ ಅವರು ತಮ್ಮ ವೃತ್ತಿ ಜೀವನದ ಆಚೆ ಕಠಿಣ ಪರಿಶ್ರಮ ಹಾಗೂ ನಿರಂತರ ಅಧ್ಯಯನದಿಂದ ದೇಶದ ಅತಿ ಮುಖ್ಯ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿರುವುದು ನಮ್ಮೆಲ್ಲರಿಗೂ ಸಂತೋಷ ತಂದಿದೆ. ಅವರಿಗೆ ನಾವು ಅಭಿನಂದಿಸುತ್ತೇವೆ ಎಂದರು. ಈ ಸಮಯದಲ್ಲಿ ಅವರ ಆಪ್ತ ಬಳಗದ ವರಾದ ಮುತ್ತು ದೇಸಾಯಿ, ಸಂಗಮೇಶ ದೇಸಾಯಿ, ಟಿ.ಎಚ್. ಸುರಪೂರ, ಟಿ.ಸಿ. ಸಜ್ಜನ್, ವಿ.ಎನ್. ಯಾದಗಿರಿ, ಜಿ.ಪಿ. ಧನಪಾಲ ಹಾಗೂ ಮಲ್ಲು ಮಡಿವಾಳರ ಇದ್ದರು.

## ಮಾರ್ಕೆಟ ರಸ್ತೆ ತೆರವುಗೊಳಿಸಿದ ನಗರಸಭೆ ಅಧಿಕಾರಿಗಳು.



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ತರಕಾರಿ ಮಾರುಕಟ್ಟೆಯ ರಸ್ತೆಯನ್ನೆ ಅಕ್ರಮಿಸಿಕೊಂಡು ತಳ್ಳು ಬಂಡಿಗಳನ್ನು ಹಾಗೂ ತರಕಾರಿ ಕುಟೀರಗಳನ್ನು ಹಾಕಿಕೊಂಡು ನಡು ರಸ್ತೆಯಲೆ ವ್ಯಾಪಾರ ಮಾಡುತ್ತಿದ್ದರಿಂದ ದೂಳುಮುಚ್ಚಿದ ತರಕಾರಿ ಮಾರಾಟ ಮತ್ತು. ಒಬ್ಬರು ಏರಡು ಬಂಡಿಗಳಿನ್ನಿಟ್ಟು ರಸ್ತೆಗೆ ವ್ಯಾಪಾರ ಮಾಡುತ್ತಿದ್ದರು, ಜನರ ಓಡಾಟಕ್ಕೂ ತಿವ್ರ ತೊಂದರೆ-ಯಾಗಿತ್ತು, ತರಕಾರಿ ಮಾರುಕಟ್ಟೆ ದಾಟಬೇಕಾದರೆ ಹರಸಾಹಸ ಪಡಬೇಕಾದ ಪರಸ್ಥಿತಿ ಉಂಟಾಗಿತ್ತು, ದುರ್ವಾಸನೆ ಚರಂಡಿ ಗಳಲ್ಲಿ ಹಂದಿಗಳು ಒಂದಡೆಯಾದರೆ ಗೂಳಿಗಳು ಬೀಡಾಡಿ ದನಗಳು ಎಗ್ಗಿಲ್ಲದೆ ತರಕಾರಿ ಖರಿದೀಸುವವರ ಮೇಲೆ ನುಗ್ಗುತ್ತವೆ, ತರಕಾರಿ ಮಾರುಕಟ್ಟೆಯ ಒಳ ಮುಖ್ಯರಸ್ತೆಯಲ್ಲೆ ತರಕಾರಿ ಹಣ್ಣುಹಂಪಲುಗಳ ತಳ್ಳು ಬಂಡಿಗಳು, ಹಾಗೂ ಕಾಯಿಪಲ್ಯ ವ್ಯವಹಾರ ಮಾಡುವವರ ಹಾವಳಿಯಿಂದ ಹೆಚ್ಚಾಗಿದ್ದರಿಂದ ನಗರಸಭೆ ಪೌರಾಯುಕ್ತರಾದ ರಮೇಶ ಬಡಿಗೇರ, ಹಾಗೂ ಪರಿಸರ ಇಂಜನಿಯರ್ ಹರೀಶ ಸಜ್ಜನ್ ಹಿರಿಯ ಆರೋಗ್ಯ ಸಾಹಾಯಕರಾದ ಆನಂದ ಪಾಟೀಲ್ ಆಕಾಶ ಪಾಟೀಲ್ ನೇತೃತ್ವದಲ್ಲಿ ನಿನ್ನೆ ತೆರವು ಕಾರ್ಯಚರಣೆ ಭರದಿಂದ ಸಾಗಿತ್ತು, ಈ ಕುರಿತು ಕ.ರಾ.ದ.ಸಂ.ಸ, ಯಾದಗಿರಿ ಜಿಲ್ಲಾ ಸಂಚಾಲಕರಾದ ಶಿವಪುತ್ರ ಜವಳಿಯವರು ಪತ್ರಿಕೆ ಪ್ರಕಟಣೆಯ ಮುಖಾಂತರ ಆರೋಪಿಸಿದ್ದರ ಹಿನ್ನಲೆಯಲ್ಲಿ ಎಚ್ಚೆತ್ತುಕೊಂಡ ನಗರಸಭೆ ಆಡಳಿತ ತರತಕಾರಿ ಒಳ ರಸ್ತೆ ಸ್ವಚ್ಚತೆ ಮತ್ತು ತೆರವುಗರ ಜೆಸಿಬಿ ಸದ್ದು ನಡೆಯಿತು, ರಸ್ತೆ ಅಕ್ರಮಿಸಿಕೊಂಡವರ ಪರವಾನಿಗೆಯನ್ನು ರದ್ದುಗೊಳಿಸಿ ಅವರು ವಿರುದ್ಧ ಕಾನೂನು ಕ್ರಮಕ್ಕೆ ಮುಂದಾಗಬೇಕು ಎಂದು ಅವರು ಒತ್ತಾಯ ಮಾಡಿದ್ದಾರೆ,

## ದುಡಿದು ತಿನ್ನುವ ಛಲ ಇದ್ದರೆ ನರೇಗಾದಲ್ಲಿ ವಯಸ್ಸು ಲೆಕ್ಕಕೆ ಬರವುದಿಲ್ಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ : ನನ್ನ ವಯಸ್ಸು ಆಗಿದೆ ಎನ್ನುವುದು ಮನಸಿಗೆ ಮಾತ್ರ ಆದಂರೆ ದುಡಿದು ತಿನ್ನುವ ಛಲ ಇದ್ದರೆ ನರೇಗಾ ಯೋಜನೆಯಡಿಲ್ಲಿ ವಯಸ್ಸು ಲೆಕ್ಕಕೆ ಬರವುದಿಲ್ಲ ಎಂಬುವುದ್ದಕೆ, ನಿವುಗಳೆ ಸಾಕ್ಷೀ ಎಂದು ತಾಲ್ಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ನಾಯ್ಕರ್ ತಿಳಿಸಿದ್ದರು.

ಬುದುವಾರ ತಾಲ್ಲೂಕಿನ ಧೂಮ್ಮನಸೂರು ಗ್ರಾಮದಲ್ಲಿ ನರೇಗಾ ಯೋಜನೆಯಡಿಯಲ್ಲಿ ನಡೆಯಿತ್ತಿರುವ ಕೆರೆ ಹೊಳೆತುವ ಕಾಮಗಾರಿ ಸ್ಥಳದಲ್ಲಿ ಸ್ತ್ರೀ ಚೇತನ ಅಭಿಯಾನದಲ್ಲಿ ಮಾತನಾಡಿದವರು, ಹಿರಿಯ ಮಹಿಳೆಯರು 65 ವರ್ಷ ಮೇಲ್ಪಟ್ಟುವರು ಕೂಡ ಗುದ್ದಲಿ ಹಿಡಿದು ಮಣ್ಣು ಅಗೆವುದು ಇಂದಿನ ಯವಕರನ್ನು ನಾಚಿಸವಂತಿದೆ ಎಂದು ಹೇಳಿದರು.

ತಾಲ್ಲೂಕಿನ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿಯಲ್ಲಿ ಮಹಿಳೆಯರ ಪಾಲ್ಗೋಳ್ಳುವಿಕೆ ಹೆಚ್ಚಿಸಲುವಾಗಿ ಈ ವರ್ಷ ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಯೋಜನೆಯ ಬ್ಬಗ್ಗೆ ಜಾಗೃತಿ ಮೂಡಿಸಬೇಕು ಮತ್ತು ತಾಲ್ಲೂಕಿ ಯಾವದೇ ಗ್ರಾಮ ಪಂಚಾಯಿತಿಯಲ್ಲಿ ಸ್ವಯಂ ಇಚ್ಛೆಯಿಂದ ನರೇಗಾ ಯೋಜನೆಯಡಿಲ್ಲಿ ಮಹಿಳಾ ಅಥವಾ ಪುರುಷ ಹಿರಿಯರಿಗೆ ಕೆಲಸ ನೀಡಲು ನಿರಾಕರಿಸಿದ್ದಾರೆ ನಮ್ಮ ಗಮ್ಮನಕ್ಕೆ ತನ್ನಿ ಎಂದು ತಿಳಿಸಿದ್ದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ವೀರಪ್ಪಾ ಭೋತಳೆ ಮಾತಾನಾಡಿ, ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯನ್ನು ಪರಿಣಾಮಕಾರಿ ಅನುಷ್ಠಾನ ಮಾಡಿ ನೂರರು ಕುಟುಂಬಗಳಿಗೆ ಉದ್ಯೋಗ ಸಿಗುವುದರ ಜೊತೆಯಲ್ಲಿ ವೈಯಕ್ತಿಕ ಕಾಮಗಾರಿ ಮಾಡಿಕೊಳ್ಳಲು ಅವಕಾಶವಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಗ್ರಾಮ ಪಂಚಾಯತ ಪಿಡಿಓ ಮಲ್ಲಿಕಾರ್ಜುನ್ ಸಗಾರ್, ಐಇಸಿ ಸಂಯೋಜಕ ಉಮೇಶ ಮಲಗಿ, ಗ್ರಾಮ ಕಾಯಕ ಮಿತ್ರಾ ರೇಣುಕಾ ಹಾಗೂ ಇನ್ನಿತರರು ಭಾಗಿಯಾಗಿದ್ದರು.

### (ಡಾ॥ ರಾಜ್‌ಕುಮಾರ್ ಅವರ 97ನೇ ವರ್ಷದ ಹುಟ್ಟುಹಬ್ಬದ ಕುರಿತಾದ ಲೇಖನ)

## "ಎಂದೆಂದೂ ನಿನ್ನನು ಮರೆತು ಬದುಕಿರಲಾರೆ"

ಡಾ॥ ರಾಜ್‌ಕುಮಾರ್‌ವರನಟರಾಗಿ, ನಟಸಾರ್ವಭೌಮರಾಗಿ ತಮ್ಮ ದೈತ್ಯ ಪ್ರತಿಭೆಯಿಂದ ಜನಮಾನಸದಲ್ಲಿ ಎಂದೆಂದಿಗೂ ಮರೆಯಾಗದ ಮಹಾ ಕಲಾವಿದ, ನಮ್ಮ ನಾಡಿನ ಹೆಮ್ಮೆಯ ಸಂಕೇತ. ಒಂದು ದೊಡ್ಡ ಭೂಭಾಗದಲ್ಲಿನ ಜನ ಸಮೂಹದ ಭಾಷೆ, ಸಂಸ್ಕೃತಿ, ಜನ ಜೀವನ, ಜೀವನ ಶೈಲಿಯ ಮೇಲೆ ಪ್ರಭಾವ ಬೀರುತ್ತಾ ಭಾರತೀಯ ಸಂಸ್ಕೃತಿಯ ಮೂಲ ಅಂಶಗಳನ್ನು ಚಲನ ಚಿತ್ರ ಮಾಧ್ಯಮದ ಮೂಲಕ ಪ್ರಸಾರಗೊಳಿಸಿ ಒಂದು ಅತ್ಯುತ್ತಮ ಬದುಕನ್ನು ರೂಪಿಸಿಕೊಳ್ಳಲು ಡಾ॥ ರಾಜ್‌ಕುಮಾರ್ ಎಂದೆಂದಿಗೂ ನಾಯಕರಾಗಿಯೆ ಉಳಿದಿರುವುದು ವಿಶೇಷ. ಯೋಗಾಸನ, ಯೋಗ ಶಾಸ್ತ್ರದ ಕ್ರಮಬದ್ಧತೆಯನ್ನು ಅಳವಡಿಸಿಕೊಂಡು ಉತ್ತಮ ಆರೋಗ್ಯದ ಸಂದೇಶವನ್ನು ನೀಡಿದವರೆ ಡಾ॥ ರಾಜ್‌ಕುಮಾರ್. ಭಾರತೀಯ ಧಾರ್ಮಿಕ ಪರಂಪರೆ, ಶ್ರಧ್ಧಾ ಪೂರ್ವಕ ಆಚರಣೆಗಳನ್ನು ರಾಜಾಸತ್ಯಹರಿಚಂದ್ರ, ಬೇಡರಕಣ್ಣಪ, ಭಕ್ತಕನಕದಾಸ, ಶ್ರೀರಾಘವೇಂದ್ರ ಮಹಾತ್ಮೆ, ಭಕ್ತಕುಂಬಾರ. ಚಲನ ಚಿತ್ರಗಳ ಮೂಲಕ ಜನಮನವನ್ನು ಗೆದ್ದವರಾದರು ಡಾ॥ ರಾಜ್‌ಕುಮಾರ್. ಕರ್ನಾಟಕದ ಐತಿಹಾಸಿಕ ಪರಂಪರೆಯನ್ನು ಮಯೂರ, ಶ್ರೀಕೃಷ್ಣದೇವರಾಯ, ಹುಲಿಯಹಾಲಿನಮೇಲೆಮೇವು, ಬಹದ್ದೂರಗಂಡು, ಚಿತ್ರಗಳ ಮೂಲಕ ಡಾ॥ ರಾಜ್‌ಕುಮಾರ್ ಕನ್ನಡ ಪ್ರದೇಶದ ರಾಜಕೀಯ ಶ್ರೇಷ್ಠತೆಸಾರುವ ಮತ್ತು ರಾಜ್ಯ, ಆಡಳಿತ, ಶಾಂತಿಸ್ಥಾಪನೆ, ಜನ ಕಲ್ಯಾಣದ ಪ್ರಗತಿದಾಯಕವಾದ ನಮ್ಮ ಮಹಾರಾಜರ ದೂರದೃಷ್ಠಿಯನ್ನು ಇಡೀ ಕರ್ನಾಟಕಕ್ಕೆ ನೆನಪಿಸಿಕೊಟ್ಟರು. ಇತಿಹಾಸದ ಪರಿಕಲ್ಪನೆ ಇಲ್ಲದೆ ನಾಡನ್ನು ಕಟ್ಟಲಾಗದು ಎಂಬ ಅಂಶವನ್ನು ಡಾ॥ ರಾಜ್‌ಕುಮಾರ್ ತೋರಿಸಿಕೊಟ್ಟರು. ಪೌರಾಣಿಕ ಪಾತ್ರಗಳ ಮೂಲಕ ಡಾ॥ ರಾಜ್‌ಕುಮಾರ್ ನಿರ್ವಹಿಸಿದ ಪಾತ್ರ ಅವರನ್ನು ಚಿತ್ರರಂಗದ ದಿಗ್ಗಜ ಸ್ಥಾನಕ್ಕೆರಲು ಸಹಾಯವಾಯಿತು. ವಿಶೇಷವಾಗಿ ಬಬ್ರುವಾಹನ ಚಿತ್ರದ ಮೂಲಕ ಭಾರತೀಯ ಮಾಹಾಕಾವ್ಯವನ್ನು ಜನರ ಹೃದಯಗಳಿಗೆ ಮನಮುಟ್ಟುವಂತೆ ತಲುಪಿಸುವ ಮೂಲಕ ಡಾ॥ ರಾಜ್‌ಕುಮಾರ್ ಕನ್ನಡಿಗರ ಮನೆ ಮಾತಾದರು ಕಲೆಯ ಮೂಲಕ ಪ್ರತಿಭಾ ಸಂಪನತೆಯನ್ನು ಪರಿಪೂರ್ಣತೆಯನ್ನು ಡಾ॥ ರಾಜ್‌ಕುಮಾರ್ ಸಂಪಾದಿಸಿದರು.

ನಾಡು, ನುಡಿ, ಪರಂಪರೆಗಳ ರಕ್ಷಣೆಯ ಹಿತದೃಷ್ಟಿಕೋನ, ಸಾಮಾಜಿಕ ಏಕತೆ, ಮಾನವ ಸಂಭಂದಗಳನ್ನು ಗಟ್ಟಿಗೊಳಿಸುವುದು ಡಾ॥ ರಾಜ್‌ಕುಮಾರ್ ಅವರ ಚಲನಚಿತ್ರಗಳ ಮೂಲ ಮುಖ್ಯವಾದ ಕಥಾಹಂದವೇ ಆಗಿರುತ್ತಿದ್ದವು. ಸಂಪತ್ತಿಗೆಸವಾಲ್, ಬಡವರಭಂದು, ಜೀವನ ಚೈತ್ರ, ಭಾಗ್ಯವತಂರು, ಕಾಮನಬಿಲ್ಲು, ಹಾಲುಜೇನು, ಚಿತ್ರಗಳ ಮೂಲಕ ಡಾ॥ ರಾಜ್‌ಕುಮಾರ್ ಆರೋಗ್ಯವಂತ ಸಮಾಜದ ಸ್ಥಾಪನೆಯ ಅವಶ್ಯಕತೆಯನ್ನು ಪ್ರತಿಪಾದಿಸುವ. "ಸಮಾಜ ಸುಧಾರಕ" ಪಾತ್ರಧಾರಿಯಾಗಿ ಡಾ॥ ರಾಜ್‌ಕುಮಾರ್ ಮಿಂಚಿದರು. ಕೌಟುಂಬಿಕ ಸಂಸ್ಕಾರಗಳಂತೆ ಸಾಮಾಜಿಕ ಸಂಸ್ಕಾರಗಳೂ ಸಹ ನಮ್ಮ ವ್ಯಕ್ತಿತ್ವವನ್ನು ರೂಪಿಸುತ್ತವೆ ಎಂಬ ಮಾತಿನಂತೆ ನಮ್ಮ ಸುತ್ತಲಿನ ಪರಿಸರ, ವನ್ಯಜೀವಿ ಸಂರಕ್ಷಣೆ, ಜಲ, ಜೀವವೈವಿಧ್ಯತೆಗಳನ್ನು ಕಾಪಾಡುವುದು, ಮುಂದಿನ ಪೀಳಿಗೆಗೆ ರಕ್ಷಿಸಿಕೊಡುವುದು ನಮ್ಮ ಆಧುನಿಕ ಕಾಲದ ಪ್ರತಿಪ್ರಜ್ಞಾವಂತ ನಾಗರಿಕನ ಕರ್ತವ್ಯವೂ ಹೌದು ಎಂಬ ಸಂದೇಶವನ್ನು ಗಂಧದಗುಡಿ ಚಿತ್ರದ ಮೂಲಕ ಕಟ್ಟಿಕೊಟ್ಟ ಡಾ॥ ರಾಜ್‌ಕುಮಾರ್ "ಬದುಕು ಬದುಕಲು ಬಿಡು" ಎಂಬ ಸಾಮರಸ್ಯದ ಕಥೆಯನ್ನು ಕನ್ನಡ ಚಲನಚಿತ್ರರಂಗದ ದಂತಕಥೆಯನ್ನಾಗಿಸಿದರು.



ನೇಗಿಲ ಮೇಲೆ ನಿಂತಿದೆ ಧರ್ಮ ಎಂಬ ಕುವೆಂಪು ಅವರ ಅಮೃತನುಡಿಗಳನ್ನು ಡಾ॥ ರಾಜ್‌ಕುಮಾರ್ ಬಂಗಾರದಮನುಷ್ಯ ಚಿತ್ರದ ಮೂಲಕ ಬೆಳ್ಳಿಪರದೆಯ ಮೇಲೆ ಇತಿಹಾಸವನ್ನು ಬರೆದುಬಿಟ್ಟರು. ಕೃಷಿ ನಮ್ಮ ನೆಲದಮೂಲವೃತಿ ಭೂಮಿಯನ್ನು ತಾಯಿ ಎಂದು ಪ್ರೀತಿಸುವ ನಮ್ಮ ಶ್ರೀಮಂತಿಕೆ ನಮ್ಮ ಹೃದಯವಂತಿಕೆಯೂ ಹೌದು. ನಿರುದ್ಯೋಗ, ಬಡತನ, ಹಸಿವು, ಆಹಾರಸಮಸ್ಯೆ ಉದ್ಯೋಗಕ್ಕಾಗಿ ಅಲೆದಾಟವನ್ನು ತಪ್ಪಿಸುವ ಮಾರ್ಗೋಪಾಯವಾಗಿ ಒಕ್ಕಲುತನ ವರದಾನವಾಗಬಲ್ಲದು ಜೊತೆಗೆ ನೀರಾವರಿ, ಪಶುಸಂಗೋಪನೆ, ಹೈನುಗಾರಿಕೆಗಳಿಂದಲೂ ಆರ್ಥಿಕ ಸ್ವಾವಲಂಬನೆಯಿಂದ ರಾಷ್ಟ್ರದನಿರ್ಮಾಣದಲ್ಲಿ ರೈತರ, ಕಾರ್ಮಿಕರ ಪಾತ್ರವನ್ನು ನಿಖರವಾಗಿ ಗುರುತಿಸಿಕೊಟ್ಟವರಾದ ಡಾ॥ ರಾಜ್‌ಕುಮಾರ್ ಬಸವಾದಿಶರಣರ ಬೋಧನೆಯ ಕಾಯಕ ಪ್ರಜ್ಞೆಯ ಮಹತ್ವವನ್ನು ಯುವಜನಾಂಗಕ್ಕೆ ತಿಳಿಸಿಕೊಟ್ಟು ಆ ಮೂಲಕ "ಕೋಟಿ ವಿದ್ಯೆಗಳಿಗಿಂತ ಮೇಟಿವಿದ್ಯೆಯೇ ಮೇಲು "ಎಂಬ ಸರ್ವಜ್ಞರ ಮಾತುಗಳನ್ನು ಕೃತಿಯ ರೂಪಕ್ಕೆ ತಂದು ನಿಲ್ಲಿಸುವ ಪ್ರಯತ್ನ ಎಂಬಂತೆ ಎಪ್ಪತ್ತರ ದಶಕದ ವಿದ್ಯಾವಂತರೆಲ್ಲರೂ ಕೃಷಿ ಚಟುವಟಿಕೆಗಳಲ್ಲಿ ತೊಡಗಲು, ಗ್ರಾಮೀನ ಬದುಕನ್ನು ಸವಿಯಲು, ಜನಪದ ಸಂಸ್ಕೃತಿಯ ಕಡೆ ಮುಖಮಾಡಲು ಡಾ॥ ರಾಜ್‌ಕುಮಾರ್ ಪ್ರೇರಣೆಯಾದರು. ಆಪ್‌ರೇಷನ್‌ಡೈಮೆಂಡ್‌ರಾಕೇಟ್, ಗುರಿ ಚಲನಚಿತ್ರಗಳಲಿ ಡಾ॥ ರಾಜ್‌ಕುಮಾರ್ ಜೇಮ್ಸಬಾಂಡ್ ಮಾದರಿಯ ಸಹಾಸಿಪಾತ್ರಧಾರಿಯಾಗಿಯೂ ಯಶಸ್ವಿಯಾದರು.


"ಕಲಿಯುವುದನ್ನು ನಿರಾಕರಿಸುವುದು ಎಂದರೆ ಬದುಕುವುದನ್ನು ನಿರಾಕರಿಸಿದಂತೆ" ಎಂಬಂತೆ ಪ್ರಯೋಗ ಶೀಲತೆ, ಸೃಜನಶೀಲತೆಗೆ ಡಾ॥ ರಾಜ್‌ಕುಮಾರ್ ನೀಡುತ್ತಿದ್ದ ಪ್ರಾಮುಖ್ಯತೆಯನ್ನು ತಿಳಿಯಲೆಬೇಕಾಗುತ್ತದೆ. ನಟನೆಯೊಂದಿಗೆ ಗಾಯನ ಕ್ಷೇತ್ರಕ್ಕೂ ತಮ್ಮ ಪ್ರತಿಭೆಯನ್ನು ವಿಸ್ತರಿಸಿಕೊಂಡು ಡಾ॥ ಪುಟ್ಟರಾಜ್ ಗವಾಯಿಗಳಿಂದ ಸಂಗೀತ ಕಲಿತುಕೊಂಡು "ನಾದಮಯ ಈ ಲೋಕವೆಲ್ಲಾ" ಹಾಡಿಗೆ ರಾಷ್ಟ ಪ್ರಶಸ್ತಿಯನ್ನು ಡಾ॥ ರಾಜ್‌ಕುಮಾರ್ ಪಡೆದು-ಕೊಂಡರು. ದೇವತಾಮನುಷ್ಯ ಚಿತ್ರದ ಮೂಲಕ ತಂದೆಯ ಪಾತ್ರಕ್ಕೂ ಮುಂದಾದರು ಡಾ॥ ರಾಜ್‌ಕುಮಾರ್ ನಿರ್ವಹಿಸದ ಪಾತ್ರಗಳಿಲ್ಲಾ ಎಂಬುವುದನ್ನು ಚಿತ್ರರಂಗದ ಪಂಡಿತರು ಒಪ್ಪಿಕೊಂಡರು. ಡಾ॥ ರಾಜ್‌ಕುಮಾರ್ ಭಾವಗೀತೆಗಳಿಗೂ, ಭಕ್ತಿಗೀತೆಗಳಿಗೂ, ಧ್ವನಿನೀಡುತ್ತಾ ಸಂಗೀತದ ಮೂಲಕವಾಗಿ ಜನರ ಭಾವಗಳಲಿ ಐಕ್ಯತೆಯನ್ನು ತಂದವರಾಗಿ ಡಾ॥ ರಾಜ್‌ಕುಮಾರ್ ಕರ್ನಾಟಕದಲೆಲ್ಲಾ ಮೇರೆದಾಡಿದರು. ತಮ್ಮ ಧ್ವನಿಯಿಂದಲೆ, ನಟನೆಯಿಂದಲೆ ಖ್ಯಾತ ಸಾಹಿತಿಗಳನ್ನು ನಿರ್ದೇಶಕರನ್ನು ನಾಡಿಗೆ ಪರಿಚಯಿಸಿದರು. ಕನ್ನಡ ಚಿತ್ರರಂಗ ಸುವರ್ಣಯುಗ ಕಾಣುವುದು ಡಾ॥ ರಾಜ್‌ಕುಮಾರ್ ಎಂಬ ಅದಮ್ಯ ಚೇತನದಿಂದಾಗಿಯೇ

ಕನ್ನಡಭಾಷೆ ಅಸ್ತಿತ್ವ ಪಡೆಯಲು ಅದು ಜನರ ಭಾಷೆಯಾಗಬೇಕು, ಆಡಳಿತಭಾಷೆಯಾಗಬೇಕು ಎಂಬ ಹಿನ್ನೆಲೆಯಲ್ಲಿನ ಗೋಕಾಕ್‌ವರದಿ ಜಾರಿಚಳುವಳಿಗಾಗಿಯೂ, ಕನ್ನಡ ತನಕ್ಕಾಗಿಯೂ ಹೋರಾಟಕ್ಕಿಳಿಯುತ್ತಿದ್ದ ಡಾ॥ ರಾಜ್‌ಕುಮಾರ್ ಚಿತ್ರರಂಗದ ಕಲಾವಿದರ ಸಾವಿನ ಸಂಧರ್ಭದಲಿ ಅವರ ಕುಟುಂಬದವರೊಂದಿಗೆ ಇರುತ್ತಿದ್ದರು, ಹೀಗೆ ಸಿನಿಮಾ ಮಂದಿರದ ಹೊರಜಗತ್ತಿನಲ್ಲೂ ನಾಯಕರಾಗಿ ಡಾ॥ ರಾಜ್‌ಕುಮಾರ್ ಬೆಳೆದು ಭಾರತೀಯ ಚಿತ್ರರಂಗದ ಅತ್ಯುನ್ನತ ಪ್ರಶಸ್ತಿಯಾದ "ದಾಧಾ ಸಾಹೇಬ್ ಫಾಲ್ಕೆಯ" ಗೌರವನ್ನು ಹೆಚ್ಚಿಸಿದರು ಇಂತಹ ಮಹನೀಯನ ಬದುಕು ನಮಗೆ ಆದರ್ಶಪ್ರಾಯವಾಗಲಿ

-ರಚನೆ

**ಗುರುಪ್ರಸಾದ ವೈದ್ಯ**
ಉಪನ್ಯಾಸಕರು
ಯಾದಗಿರಿ
9880717814

## ಗ್ರಾಮದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಕಾಲಕಾಲಕ್ಕೆ ನಡೆಯಬೇಕೆಂದು :ಶರಣಗೌಡ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ತಾಲೂಕಿನ ಕರಡಕಲ್ ಗ್ರಾಮದಲ್ಲಿ ಶ್ರೀಬೀರೇಶ್ವರ ದೇವಸ್ಥಾನದ 11ನೇ ವಾರ್ಷಿಕೋತ್ಸವ ಹಾಗೂ ಗಜಾನನ ದೇವಸ್ಥಾನದಲ್ಲಿ ರಾಯಚೂರ ಹಾಗೂ ಕೊಪ್ಪಳ ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ರವರು ಜ್ಯೋತಿ ಬೆಳಗಿಸುವುದರ ಮೂಲಕ ಚಾಲನೆ ನೀಡಿದರು ನಂತರ ಮಾತನಾಡಿದ ಇವರು ಗ್ರಾಮದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಕಾಲಕಾಲಕ್ಕೆ ನಡೆಯಬೇಕೆಂದು ಮತ್ತು ಮಕ್ಕಳಿಗೆ ಮೊಬೈಲ್ ಗಳನ್ನು ನೀಡಬಾರದು ಎಂದು ಶಿಕ್ಷಣದ ಜೊತೆಗೆ ಧಾರ್ಮಿಕ ಸಂಸ್ಕಾರವನ್ನು ನೀಡಬೇಕು ಪಾಲಕರಿಗೆ ಕಿವಿಮಾತು ಹೇಳಿದರು ತದನಂತರ ಮಾಜಿ ಸಂಸದರಾದ ವಿರೂಪಾಕ್ಷಪ್ಪ ತಮ್ಮ ಉದ್ಘಾಟನೆ ಭಾಷಣದಲ್ಲಿ ಮಕ್ಕಳಿಗೆ ಆಸ್ತಿ ಮಾಡಬಾರದು ಮಕ್ಕಳನ್ನು ಸಮಾಜದಲ್ಲಿ ಆಸ್ತಿಯನ್ನಾಗಿ ಮಾಡಬೇಕೆಂದು ಹೇಳಿದರು ಮಹಿಳೆಯರಿಗೆ 50ರಷ್ಟು ಮೀಸಲಾತಿಯನ್ನು ರಾಜಕೀಯದಲ್ಲಿ ಒದಗಿಸಿ ಕೊಟ್ಟಿದ್ದಾರೆ ಅದನ್ನು ಮಹಿಳೆಯರು ಸದುಪಯೋಗವನ್ನು ಪಡಿಸಿಕೊಂಡು ಸಮಾಜದಲ್ಲಿ ಮುಂದೆ ಬರಬೇಕೆಂದು ತಿಳಿಸಿದರು.

ಲಿಂಗಸುಗೂರು ನಗರ ಯೋಜನಾಪ್ರಾಧಿಕಾರದ ಅಧ್ಯಕ್ಷರಾದ ಭೂಪನಗೌಡ ಕರಡಕಲ್ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಪಾಮಯ್ಯ ಮುರಾರಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಸವರಾಜಗೌಡ ಗಣೇಕಲ್ ಪ್ರಮೋದ ಕುಲಕರ್ಣಿ ಸೋಮನಗೌಡ ಲಿಂಗಸೂರ್ ತಾಲೂಕ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಗೋವಿಂದ ನಾಯಕ ಮುದಗಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶಿವಶಂಕರಗೌಡ ಯೂಥ್ ಕಾಂಗ್ರೆಸ್ ಅಧ್ಯಕ್ಷರಾದ ಸಂತೋಷ್ ಸೊಪ್ಪಿಮಠ ಶಿಕ್ಷಕರಾದ ಮಂಜುನಾಥ ಹಾಲುಮತ ಸಮಾಜದ ಮುಂತಾದವರು ಗ್ರಾಮದ ಗುರು ಹಿರಿಯರು ಭಾಗವಹಿಸಿದ್ದರು

ಪೂರ್ವಭಾವಿ ಸಭೆಯಲ್ಲಿ ನಿರ್ಧಾರ

## ಜಿಲ್ಲಾಡಳಿತದಿಂದ ಮಹನೀಯರ ಜಯಂತಿ ಅರ್ಥಪೂರ್ಣ, ಅದ್ದೂರಿ ಆಚರಣೆ: ಎಡಿಸಿ ಮಹಮ್ಮದ್ ಝುಬೇರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.23-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಶಂಕರಾಚಾರ್ಯ ಜಯಂತಿ, ಭಗೀರಥ ಜಯಂತಿ ಮತ್ತು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಅದ್ದೂ-ರಿಯಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಹೇಳಿದರು.

ನಗರದಜಿಲ್ಲಾಧಿಕಾರಿಗಳಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣ ಮತ್ತು ಅಪರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಶಂಕರಾಚಾರ್ಯ ಜಯಂತಿ, ಭಗೀರಥ ಜಯಂತಿ ಮತ್ತು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಗಳ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೇ02ರಂದುಶಂಕರಾಚಾರ್ಯ ಜಯಂತಿ, ಮೇ 05 ರಂದು ಭಗೀರಥ ಜಯಂತಿ ಮತ್ತು ಮೇ 10 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜಿಸಲು ಬೇಕಾದ ಎಲ್ಲಾ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅವರು ನಿರ್ದೇಶನ ನೀಡಿದರು.

ಮೇ 02 ರಂದು ಆದ್ಯ ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮವನ್ನು ನಗರದ ಸಂಗನಕಲ್ಲು ರಸ್ತೆಯ ಶೃಂಗೇರಿ ಶಂಕರಚಾರ್ಯ ಮಠದ ಭಾರತಿ ತೀರ್ಥ ಸಭಾಭವನದಲ್ಲಿ ಆಯೋಜಿಸಲಾಗುವುದು. ಜಯಂತಿಯ ಅಂಗವಾಗಿ ಮೆರವಣಿಗೆಯು ನಡೆಯಲಿದೆ ಎಂದು ತಿಳಿಸಿದರು.

ಮೇ 05 ರಂದು ಭಗೀರಥ ಜಯಂತಿ ಕಾರ್ಯಕ್ರಮವನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ. ಇದಕ್ಕೂಮುನ್ನ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಿಂದ ಭವ್ಯ ಮೆರವಣಿಗೆ ನಡೆಯಲಿದೆ.

ಮೇ 10 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ನಗರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು. ಜಯಂತಿ ಅಂಗವಾಗಿ ಮೆರವಣಿಗೆಯು ಒಳಗೊಂಡಿರಲಿದೆ ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು. ಜಯಂತಿ ಆಚರಣೆ ಸಂದರ್ಭದಲ್ಲಿ ಶಿಷ್ಟಾಚಾರ ಪಾಲನೆ, ಆಹ್ವಾನ ಪತ್ರಿಕೆ, ವಿಶೇಷ ಉಪನ್ಯಾಸ, ವಚನ ಗಾಯನ ಸೇರಿದಂತೆ ಎಲ್ಲವೂ ಸರಿಯಾಗಿ ನಿರ್ವಹಿಸಬೇಕು. ಅದೇ ರೀತಿ ವೇದಿಕೆ, ಕುಡಿಯುವ ನೀರು, ಸ್ವಚ್ಛತೆ ಮತ್ತು ಮೆರವಣಿಗೆ ಸಂದರ್ಭದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆಯು ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಮಹಾನ್‌ವ್ಯಕ್ತಿಗಳವಿಚಾರಧಾರೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ನುರಿತ ಉಪನ್ಯಾಸಕರಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗುವುದು ಎಂದರು.

ಜಯಂತಿ ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನು ನಿಯೋಜಿಸಲಾಗುವುದು. ಜಯಂತಿ ಕಾರ್ಯಕ್ರಮಗಳಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಿದರು.

ಸಭೆಯಲ್ಲಿ ವಿವಿಧ ಸಮುದಾಯದ ಮುಖಂಡರು, ಜನ ಪ್ರತಿನಿಧಿಗಳು ಜಯಂತಿಗಳ ಆಚರಣೆಯ ಕುರಿತು ತಮ್ಮ ಸಲಹೆ-ಸೂಚನೆ ನೀಡಿದರು.

ಈ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮುದಾಯದ ಮುಖಂಡರು, ಜನ ಪ್ರತಿನಿಧಿಗಳು ಹಾಗೂಮತ್ತಿತರರುಉಪಸ್ಥಿತರಿದ್ದರು.

## ಏ.24 ರಂದು ಡಾ. ರಾಜ್‌ಕುಮಾರ್ ಜನ್ಮದಿನಾಚರಣೆಯ ಅಂಗವಾಗಿ ಕನ್ನಡ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.23-ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಾ.ರಾಜ್‌ಕುಮಾರ್‌ಜನ್ಮದಿನಾಚರಣೆಯ ಅಂಗವಾಗಿ ಏ.24 ರಂದು ಸಂಜೆ 5.30 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿಕನ್ನಡಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ.

ವಸತಿ,ವಕ್ಫ್‌ಮತ್ತುಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ,



ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ವಿವಿಧ ಕನ್ನಡ ಪರಸಂಘಟನೆಗಳಪದಾಧಿಕಾರಿಗಳು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿಭಾಗವಹಿಸುವರು. ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷರು ಸಿರಿಗೇರಿ ಪನ್ನರಾಜ್ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಬಳ್ಳಾರಿಯ ಮಸ್ತಾನ್ ಸೌಂಡ್ಸ್‌ನ ಪ್ರತಿಭಾ ಆರ್ಕೆಷ್ಟ್ರಾ ವತಿಯಿಂದ ಕನ್ನಡ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ನಡೆಸುವರು.

ಪುತ್ಥಳಿಗೆ ಮಾಲಾರ್ಪಣೆ:

ಡಾ.ರಾಜ್‌ಕುಮಾರ್‌ಜನ್ಮದಿನಾಚರಣೆಯ ಅಂಗವಾಗಿ ಅಂದು ಬೆಳಿಗ್ಗೆ 09.30 ಗಂಟೆಗೆ ಡಾ.ರಾಜ್‌ಕುಮಾರ್ ರಸ್ತೆಯ ಡಾ.ರಾಜ್‌ಕುಮಾರ್ ಉದ್ಯಾನವನದಲ್ಲಿನ ಡಾ.ರಾಜ್ ಕುಮಾರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಬಿ.ವಿ.ತುಕಾರಾಂ ರಾವ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಹೆಮ್ಮೆಯ ಯುವರೈತನ ಯಶೋಗಾಥೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.23-ದೇಶಕ್ಕೆ ಅನ್ನ ಕೊಡೋ ರೈತನಾಗುವ ಛಲವನ್ನು ತೊಟ್ಟ ವಿಜಯಕುಮಾರ ಇವರು ಮೂಲತಃ ಬಳ್ಳಾರಿ ತಾಲ್ಲೂಕಿನ ಎತ್ತಿನಬೂದಿಹಾಳ್ ಗ್ರಾಮದವರು. ಇವರು ಬಿ.ಇ.ಮೇಕಾನಿಕಲ್ ವಿದ್ಯಾಭ್ಯಾಸವನ್ನು ಮುಗಿಸಿ, ಇವರಿಗೆ ಕೃಷಿಯ ಮೇಲಿನ ಒಲವಿನಿಂದ ಕೃಷಿಯಲ್ಲಿ ಏನಾದರೊಂದು ಸಾಧನೆ ಮಾಡುವ ನಿಟ್ಟಿನಲ್ಲಿ ಕೃಷಿ ಕ್ಷೇತ್ರಕ್ಕೆ ಕಾಲಿಟ್ಟರು.

ಸಮಗ್ರ ಕೃಷಿಯ ಪಂಡಿತರಾದ ಇವರು ತಮ್ಮ 16 ಎಕರೆ ಜಮೀನಿನಲ್ಲಿ ಹತ್ತಾರು ಬೆಳೆಯನ್ನು ಅಳವಡಿಸಿಕೊಂಡು ಸುಸ್ಥಿರ ಮತ್ತು ನಿರಂತರ ಆದಾಯಗಳಿಸುವುದರ, ಜೊತೆಗೆಒಂದೇಬೆಳೆಗೆಸೀಮಿತವಾಗದೆ ವೈವಿಧ್ಯ ಬೆಳೆ ಬೆಳೆದು ರಾಜ್ಯಕ್ಕೆ ಆದರ್ಶ ರೈತರಾಗಿ ಮತ್ತೊಬ್ಬ ರೈತರಿಗೆ ಮಾದರಿ ಆಗಿದ್ದಾರೆ.

ಮಿಶ್ರ ಬೆಳೆ ಪದ್ಧತಿಯಿಂದ ಒಂದಲ್ಲ ಒಂದು ಬೆಳೆ ನಮ್ಮನ್ನು ಕೈಹಿಡಿಯುತ್ತದೆ ಎಂದು ನಂಬಿದ ಇವರು, ಮಿಶ್ರಬೇಸಾಯ ಮಾಡಿ ಯಶಸ್ಸು ಕಂಡುಕೊಂಡಿದ್ದಾರೆ. ತರಕಾರಿ, ಹಣ್ಣು, ಹಸು, ಕೋಳಿ, ಜೇನು ಸಾಗಾಣಿಕೆ ಎಲ್ಲವನ್ನೂ ಸಮಗ್ರವಾಗಿ ನೋಡಿಕೊಳ್ಳುವುದು ನಿಜಕ್ಕೂ ಮೆಚ್ಚುವಂತದ್ದು.

ಇವರ 16 ಎಕರೆ ಜಮೀನಿನಲ್ಲಿ ವಿಭಿನ್ನ ಸಮಗ್ರ ಕೃಷಿಯನ್ನು ನೋಡಬಹುದಾಗಿದೆ. ಅದರಲ್ಲಿ ಅತಿಹೆಚ್ಚುಪೋಷಕಾಂಶ,ಖನಿಜಾಂಶ, ಕಬ್ಬಿಣಾಂಶ ಹೊಂದಿದ ಚಿಕ್ಕೂ ಹಾಗೂ ಕಡಿಮೆ ಸಮಯದಲ್ಲಿ ಹೆಚ್ಚು ಆದಾಯ ಗಳಿಸುವ ಕೋಳಿ ಸಾಗಾಣಿಕೆ, ಅತ್ಯಮೂಲ್ಯ ಪೌಷ್ಟಿಕಾಂಶದ ಆಹಾರವಾದ ಸೌಂದರ್ಯವರ್ಧಕ ಜೇನು ಸಾಗಾಣಿಕೆ, ನೀರಿನ ಅಂತರ್ಜಲ ಹೆಚ್ಚಿಸಿ, ಕೃಷಿಗೆ ಅನುಕೂಲವಾಗುವ ಕೃಷಿ ಹೊಂಡ, ಮೆಕ್ಕೆಜೋಳ ಮತ್ತು ತೊಗರಿಯ ಮಿಶ್ರ ಬೆಳೆ ಮಣ್ಣಿನ ಪುಷ್ಟಿಕರಣ ಅವರ ಸುಸ್ಥಿರ ಆರ್ಥಿಕ ಲಾಭಕ್ಕೆ ಕಾರಣವಾಗಿದೆ.

ಅಷ್ಟೇ ಅಲ್ಲದೇ ಮಾರುಕಟ್ಟೆಯಲ್ಲಿ ಬೇಡಿಕೆಹೊಂದಿರುವಬದನೆಕಾಯಿ, ಮೆಣಸಿನಕಾಯಿ, ಟೊಮೆಟೊ, ಹುರುಳಿ, ಬೆಂಡೆಕಾಯಿ ಮುಂತಾದ ದಿನಬಳಕೆಯ ತರಕಾರಿಗಳನ್ನು ಸಾವಯವ ಪದ್ಧತಿಯಲ್ಲಿ ಬೆಳೆದು ತಮ್ಮ ಮತ್ತು ಇತರೆ ಜನರಿಗೆ ರಾಸಾಯನಿಕ ಮುಕ್ತ ತರಕಾರಿಯನ್ನು ನೀಡುವಲ್ಲಿ ಯಶಸ್ವಿಯಾಗಿದ್ದಾರೆ.

ಕೃಷಿಯಲ್ಲಿ ಸಾಧನೆ ಮಾಡಲು, ಅತಿ ಹೆಚ್ಚು ಲಾಭ ಗಳಿಸಲು ಹಲವಾರು ಎಕರೆ ಭೂಮಿ ಇರಬೇಕು ಎಂದೇನಿಲ್ಲ. ಕೆಲವೇ ಕಡಿಮೆ ಜಮೀನು ಇದ್ದರೂ, ಕೊಂಚ ಜಾಣ್ಮೆ ಉಪಯೋಗಿಸಿ ಅದಕ್ಕೆ ತಕ್ಕಂತೆ ಶ್ರಮ ಹಾಕಿದರೆ ವರ್ಷಕ್ಕೆ ಲಕ್ಷ, ಲಕ್ಷ ಆದಾಯ ಗಳಿಸಬಹುದು ಎಂಬುದಕ್ಕೆ ಪ್ರತ್ಯಕ್ಷ ಸಾಕ್ಷಿಯಾಗಿದ್ದಾರೆ.

ಹಲವಾರು ವಿಶಿಷ್ಟ ಪ್ರಯೋಗದೊಂದಿಗೆ ಎಲ್ಲ ಕೃಷಿಕರಿಗೂ ಮಾದರಿಯಾಗಿ ನಿಂತಿರುವುದು ಬಳ್ಳಾರಿ ತಾಲ್ಲೂಕಿನ ಎತ್ತಿನ ಬೂದಿಹಾಳ್ ಗ್ರಾಮದ ಯುವ ರೈತ ವಿಜಯ್ ಕುಮಾರ್ ಅವರ ಯಶಸ್ಸು ಇತರ ರೈತರಿಗೆ ಪ್ರೇರಣೆಯಾಗಿದೆ.

## ಏ.27 ರಂದು ಅಲ್ಪಸಂಖ್ಯಾತರ ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.23-ಪ್ರಸ್ತಕ ಸಾಲಿನ ಅಲ್ಪಸಂಖ್ಯಾತರ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ 6ನೇ ತರಗತಿ ದಾಖಲಾತಿಗೆ ಪ್ರವೇಶ ಪರೀಕ್ಷೆ ಏ.27 ರಂದು ನಡೆಯಲಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.

ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಪ್ರವೇಶ ಪರೀ-ಕ್ಷೆಯ ಪತ್ರವನ್ನು ಇಲಾಖೆಯ ವೈಬ್‌ಸೈಟ್ https://dom.karnataka.gov.in/ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಪರೀಕ್ಷೆ ಕೇಂದ್ರದ ಹೆಸರು ಮತ್ತು ವಿವರ:

ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ (ಸಿ.ಬಿ.ಎಸ್.ಇ) ಕೊಳಗಲ್ಲು,ಬಳ್ಳಾರಿ-9844040035, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ಕಾಲೇಜು ಕೊಳಗಲ್ಲು-7349008289, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಬಳ್ಳಾರಿ ಟೌನ್-9844040035, ಸರ್ಕಾರಿ ಪ್ರೌಢ ಶಾಲೆ, ಓಪಿಜೆ ಹತ್ತಿರ ತೋರಣಗಲ್ಲು-9480933730, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಂಪ್ಲಿ, ಬಳ್ಳಾರಿ-7353346069 ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕುರುಗೋಡು, ಬಳ್ಳಾರಿ-7353346069.

ಹೆಚ್ಚಿನ ಮಾಹಿತಿಗಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಮೌಲಾನ ಅಜಾದ ಭವನದ ಜಿಲ್ಲಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392-200125/224, ಸಹಾಯವಾಣಿ ಕೇಂದ್ರ 24*7-8277799990ಗೆಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿನಿಂದ ಎರಡನೇ ಹಂತದ ದ್ವಿತೀಯ ಪಿಯುಸಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕೊಪ್ಪಳಜಿಲ್ಲೆಯಾದ್ಯಂತ ಏ. 24 ರಿಂದ ಮೇ 8 ರವರೆಗೆ ನಡೆಯುವ ಎರಡನೇ ಹಂತದ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆನಿಮಿತ್ತಪರೀಕ್ಷಾಕೇಂದ್ರಗಳ ಸುತ್ತಲು 200 ಮೀಟರ್ ಆವರಣವನ್ನು ನಿರ್ಬಂಧಿತ ಪ್ರದೇಶ ಎಂದು ಘೋಷಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ನಲಿನ್ ಅತುಲ್ ಅವರು ಆದೇಶ ಹೊರಡಿಸಿದ್ದಾರೆ. ಎರಡನೇ ಹಂತದ ದ್ವಿತೀಯ ಪಿಯುಸಿ ಪರೀಕ್ಷೆಯು ಏ. 24 ರಿಂದ ಮೇ 8 ರ ವರೆಗೆ ಬೆಳಿಗ್ಗೆ 10 ಗಂಟೆ ಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಕೊಪ್ಪಳ ಜಿಲ್ಲೆಯ ಒಟ್ಟು 8 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಪರೀಕ್ಷೆಗಳನ್ನು ಸುಗಮ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದಪರೀಕ್ಷಾಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ



2023ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ತಾಲ್ಲೂಕವಾರು ಪರೀಕ್ಷೆ ಕೇಂದ್ರಗಳ ವಿವರ: ಕೊಪ್ಪಳ ತಾಲೂಕಿನ ಸರ್ಕಾರಿ ಬಾಲಕರ ಪಿಯು ಕಾಲೇಜ್ ಮತ್ತು ಸರ್ಕಾರಿ ಬಾಲಕಿಯರ ಪಿಯು ಕಾಲೇಜ್ ಕೊಪ್ಪಳ ಪರೀಕ್ಷಾ ಕೇಂದ್ರಗಳು, ಗಂಗಾವತಿ ತಾಲ್ಲೂಕಿನ ಸರ್ಕಾರಿ ಬಾಲಕರ ಪಿಯು ಕಾಲೇಜ್ ಮತ್ತು ಸರ್ಕಾರಿ (ಎಸ್.ಎಮ್.ಎನ್.ಎಮ್) ಬಾಲಕಿಯರ ಪಿಯು ಕಾಲೇಜ್ ಗಂಗಾವತಿ ಪರೀಕ್ಷಾ ಕೇಂದ್ರಗಳು, ಕುಷ್ಟಗಿ ತಾಲ್ಲೂಕಿನ ಸರ್ಕಾರಿ ಬಾಲಕರ ಪಿಯು ಕಾಲೇಜ್ ಮತ್ತು ಸರ್ಕಾರಿ ಬಾಲಕಿಯರ ಪಿಯು ಕಾಲೇಜ್ ಕುಷ್ಟಗಿ, ಯಲಬುರ್ಗಾ ತಾಲ್ಲೂಕಿನ ಸರ್ಕಾರಿ ಪಿಯು ಕಾಲೇಜ್ ಹಾಗೂ ಕಾರಟಗಿ ತಾಲ್ಲೂಕಿನ ಸರ್ಕಾರಿ ಪಿಯು ಕಾಲೇಜ್ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿವೆ.

ನಿಷೇಧಾಜ್ಞೆ ಜಾರಿಯನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ. ಮೊಬೈಲ್, ಪೇಜರ್, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತದಳದವರನ್ನುಹೊರತುಪಡಿಸಿ ಇನ್ನುಳಿದವರಿಗೆಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಕೊಪ್ಪಳ ಜಿಲ್ಲಾ ಅಧಿಕಾರಿ ನಲಿನ ಅತುಲ್ ಆದೇಶದಲ್ಲಿ ತಿಳಿಸಿದ್ದಾರೆ.

## ಕಾಶ್ಮೀರ ಘಟನೆ ಉಗ್ರರಿಗೆ ಕಠಿಣ ಶಿಕ್ಷಗೆ ನಗರ ಮಂಡಲ ಎಸ್ ಸಿ ಮೋರ್ಚಾ ಅಧ್ಯಕ್ಷರಾದ ಲಕ್ಷ್ಮೀಕಾಂತ ಬಿರಾಳ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ ಕಾಶ್ಮೀರದಲ್ಲಿ ನಡೆದ ಉಗ್ರರ ದಾಳಿಯಿಂದಾಗಿ ಸುಮಾರು 20 ಕ್ಕೂ ಹೆಚ್ಚು ಅಮಾಯಕರು ಬಲಿಯಾಗಿದ್ದು ಇದು ಅತ್ಯಂತ ಖಂಡನಿಯ ಎಂದು ಬಿಜೆಪಿ ಯುವ ಮುಖಂಡ ಲಕ್ಷ್ಮಿಕಾಂತ್ ಬಿರಾಳ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಇದೊಂದು ಪೈಶಾಚಿಕ ಕೃತ್ಯವಾಗಿದ್ದು ದಾಳಿಕೊರ ಉಗ್ರರಿಗೆ ಕಠಿಣ ಶಿಕ್ಷೆ ಆಗಲೇಬೇಕು ಈ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ರವರು ದಿಟ್ಟ ಕ್ರಮ ತೆಗೆದುಕೊಳ್ಳಬೇಕು



ಪ್ರವಾಸ ಹಾಗೂ ವಿವಿಧ ಕೆಲಸ ಕಾರ್ಯಗಳ ನಿಮಿತ್ಯ ಕಾಶ್ಮೀರಕ್ಕೆ ತೆರಳಿರುವ ಅಮಾಯಕರನ್ನು ಬಲಿ ತೆಗೆದುಕೊಂಡಿದ್ದು ಘೋರ ಅಪರಾಧ ಅವರು ಮಾಡಿದ ತಪ್ಪಾದರೂ ಏನು ಜೀವಗಳಿಗೆ ಬೆಲೆ ಇಲ್ಲವೇ ಉಗ್ರರ ನಡೆ ಇಡಿ ಮನುಕುಲವೇ ತಲೆ ತಗ್ಗಿಸುವಂಥಾಗಿದೆ ವಿನಾಕಾರಣ ಸಾವನ್ನಪ್ಪಿದ ಹಿಂದುಗಳ ಆತ್ಮಕ್ಕೆ ಶಾಂತಿ ಸಿಗಲಿ ಆ ದೇವರು ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ ಎಂದರು ಈ ಕೂಡಲೆ ಕೇಂದ್ರ ಸರಕಾರ ಇಂತಹ ಪಾಪಿ ಉಗ್ರರಿಗೆ ಕಠಿಣ ಶಿಕ್ಷೆ ನೀಡುವುದರ ಜೊತೆಗೆ ಇನ್ನು ಮುಂದೆ ಇಂತಹ ಘಟನೆಗಳು ನಡೆಯದಂತೆ ಮುಂಜಾಗ್ರತೆ ಕ್ರಮ ಕೈಗೊಳ್ಳುವಂತೆ ಕೇಂದ್ರ ಸರಕಾರಕ್ಕೆ ಬಿಜೆಪಿಯ ಕ್ರಮ ಕೈಗೊಳ್ಳುವಂತೆ ಲಕ್ಷ್ಮಿಕಾಂತ್ ಬಿಜೆಪಿ ನಗರ ಬಿಜೆಪಿ ಯುವ ಮುಖಂಡ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

## ಖಾನಾಪುರ ಎಸ್,ಸಿ, ಓಣಿ ರಸ್ತೆಯಲ್ಲೆ ಚರಂಡಿ ನೀರು ದುರ್ವಾಸನೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ.ಗ್ರಾಮ ಪಂಚಾಯತ ಕೇಂದ್ರಸ್ಥಾನಹೊಂದಿದಶಹಾಪುರ ತಾಲುಕಿನ ಖಾನಾಪುರ ಗ್ರಾಮದ ಎಸ್,ಸಿ, ಓಣಿ ರಸ್ತೆ ದುರ್ವಾಸನೆ ತುಂಬಿದ ಕೆರೆಯಂತಾಗಿವೆ, ಐದಾರು ದಶಕಗಳಿಂದಲೂ ಈ ರಸ್ತೆ ಚರಂಡಿ ನಿರ್ಮಾಣ ಭಾಗ್ಯ ಕಾಣದೆ ಇಲ್ಲಿನ ದಲಿತರು ಕಾಲ ಕಳೆಯುತ್ತಿದ್ದಾರೆ,ಚರಂಡಿಗಳಿಲ್ಲ ರಸ್ತೆಗೆ ಮರಮ ಹಾಕಿ ದುರಸ್ತಿ ಮಾಡುತ್ತಿಲ್ಲವೆಂದು ಯುವ ಮುಖಂಡರಾದ ನಿಂಗಪ್ಪ ಹೊಸಮನಿ,ಮರಿಯಪ್ಪಹೊಸಮನಿ ಆರೋಪ ವ್ಯಕ್ತಪಡಿಸಿದ್ದಾರೆ, ಸರ್ಕಾರ 15 ನೆಯ ಹಣಕಾಸು ಯೋಜನೆಯಲ್ಲಿ ಕೊಟ್ಯಾಂತರ ಅನುಧಾನ ಬಂದರೂ ಬುಟ್ಟಿ ಮರಮ ರಸ್ತೆ ಹಾಕಿಲ್ಲ,ಗ್ರಾ,ಪಂ, ಅನುಧಾನದ ಶೇ,22.5 ಅನುಧಾನ ವೆಚ್ಚ ಮಾಡಬೇಕು ಎಂದು ಸರ್ಕಾರದ ನೀಯಮಗಳಿದ್ದರೂ, ಇಂದಿನವರೆಗೂ ಹರಿಜನ ಕೇರಿಗೆ ಕಿಂಚಿತು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದೆ ಖೊಟ್ಟಿ ದಾಖಲೆಗಳಲ್ಲಿ ಸೃಷ್ಟಿಕೊಂಡು ಯೊಜನೆ ಅನುಷ್ಠಾನದ ವರದಿ ಮಾಡಿ ಪೂರ್ಣಗೊಳಿಸುತ್ತಾರೆ, ಕೆಕೆಆರ್,ಡಿ,ಬಿ, ಅನುಧಾನದಲ್ಲಿ




ನಯಾ ಪೈಸಾ ಹರಿಜನ ಓಣಿಗೆ ಕೇಲಸ ಹಾಕದೆ ಶಾಸಕರು ಹರಿಜನ ಓಣಿ ನಿರ್ಲಕ್ಷ ಮಾಡಿದ್ದಾರೆ ಅವರು ಹೇಳಿದ್ದಾರೆ, ಮಳೆ ಬಂದರೆ ಸಾಕು ಗ್ರಾಮದ ಎಲ್ಲಾ ಮೂಲೆಗಳಲ್ಲಿನ ನೀರು ಈ ರಸ್ತೆಗೆ ಬಂದು ಹರಿದು ಹೊಗುತ್ತದೆ, ನೀರು ಹರಿದರೂ ಇಲ್ಲಿನ ದಲಿತರು ಚರಂಡಿ ನೀರು ದಾಟಿಕೊಂಡೆ ತಿಂಗಾಳನುಗಟ್ಟಲೆ ಓಡಾಡಬೇಕಾಗಿದೆ, ಕಾರಣ ಕ್ಷೇತ್ರದ ಶಾಸಕರು ಈ ಕುರಿತು ಗಮನ ಹರಸಿ ಶಿಘ್ರದಲ್ಲಿ ಚರಂಡಿ ಸಿಸಿ ರಸ್ತೆ ಮಾಡಿದಿದ್ದಲ್ಲಿ ಮುಂದಿನ ವ್ಯವಸ್ಥೆಗೆ ಆಡಳಿತ ಯಂತ್ರವೇ ಕಾರಣವಾಗಿರುತ್ತದೆ.ಎಂದುನಿಂಗಪ್ಪ ಮತ್ತು ಮರೆಯಪ್ಪನವರು ಪತ್ರಿಕೆ ಪ್ರಕಟಣೆಯ ಮುಖಾಂತರ ಮನವರಿಕೆ ಮಾಡಿದ್ದಾರೆ,

## ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.23-ನಗರದ ಗಡಗಿ ಚೆನ್ನಪ್ಪ ವೃತ್ತದ ರಾಯಲ್ ಹೋಟೆಲ್ ಮುಂಭಾಗದ ಅಂದಾಜು 30-35 ವರ್ಷದ ಅನಾಮದೇಯ ವ್ಯಕ್ತಿಯು ಯಾವುದೋ ಖಾಯಿಲೆಯಿಂದ ಬಳಲುತ್ತಿದ್ದು, ಅನಾರೋಗ್ಯದಿಂದ ಏ.19ರಂದುಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕುಎಂದುಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.5 ಅಡಿ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟುಹೊಂದಿದ್ದು, ಮೃತನ ತಲೆಯ ಮೇಲೆ ಕಪ್ಪು ಕೂದಲು ಮತ್ತು ಮುಖದಲ್ಲಿ ಕಪ್ಪು ಮೀಸೆ, ಉದ್ದನೆಯ ಗಡ್ಡ ಇರುತ್ತದೆ. ಬಿಳಿ-ಕಪ್ಪು ಹಾಗೂ ತಿಳಿ ಹಳದಿ ಬಣ್ಣದ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆ ದೂ.08392-272022, ಪಿಎಸ್‌ಐ ಮೊ.9480803081 ಅಥವಾ ಕಂಟ್ರೋಲ್ ರೂಂ ದೂ.08392-258100,258102 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.23-ನಗರದ ಗಡಗಿ ಚೆನ್ನಪ್ಪ ವೃತ್ತದ ರಾಯಲ್ ಹೋಟೆಲ್ ಮುಂಭಾಗದ ಅಂದಾಜು 30-35 ವರ್ಷದ ಅನಾಮದೇಯ ವ್ಯಕ್ತಿಯು ಯಾವುದೋ ಖಾಯಿಲೆಯಿಂದ ಬಳಲುತ್ತಿದ್ದು, ಅನಾರೋಗ್ಯದಿಂದ ಏ.19ರಂದುಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.5 ಅಡಿ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟುಹೊಂದಿದ್ದು, ಮೃತನ ತಲೆಯ ಮೇಲೆ ಕಪ್ಪು ಕೂದಲು ಮತ್ತು ಮುಖದಲ್ಲಿ ಕಪ್ಪು ಮೀಸೆ, ಉದ್ದನೆಯ ಗಡ್ಡ ಇರುತ್ತದೆ. ಬಿಳಿ-ಕಪ್ಪು ಹಾಗೂ ತಿಳಿ ಹಳದಿ ಬಣ್ಣದ ಶರ್ಟ್ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆ ದೂ.08392-272022, ಪಿಎಸ್‌ಐ ಮೊ.9480803081 ಅಥವಾ ಕಂಟ್ರೋಲ್ ರೂಂ ದೂ.08392-258100,258102 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಪದರು ಬರೆಯದ ಜ್ಞಾನಿಗಳು- ಡಾ.ವೀರೇಶ ಬಡಿಗೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.23-ಬ್ರಿಟಿಷರು ಪುಸ್ತಕಜ್ಞಾನಿಗಳಾದರೆ ಭಾರತೀಯರು ಮಸ್ತಕ ಜ್ಞಾನಿಗಳು. ಸಂವಿಧಾನ ಹಾಗೂ ನೈತಿಕ ಶಿಕ್ಷಣದ ಮೂಲ ತತ್ವಗಳನ್ನು ಜನಪದ ನಮಗೆ ಕಲಿಸುತ್ತದೆ. ಜನಪದರು ಬರೆಯದ ಜ್ಞಾನಿಗಳು ಎಂದು ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಹಸ್ತಪ್ರತಿ ವಿಭಾಗದ ಮುಖ್ಯಸ್ಥರಾದ ಡಾ.ವೀರೇಶ ಬಡಿಗೇರ ಹೇಳಿದರು.

ಕರ್ನಾಟಕ ಬಯಲಾಟ ಅಕಾಡೆಮಿ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಸಹಯೋಗದಲ್ಲಿ ಬುಧವಾರ ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದ ಬಯಲಾಟ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬ್ರಿಟಿಷರದ್ದು ಪುಸ್ತಕ ಜ್ಞಾನ, ಭಾರತೀಯರದ್ದು ಮಸ್ತಕ ಜ್ಞಾನ. ಒಬ್ಬ ಬ್ರಿಟಿಷ ಇಂಗ್ಲೀಷ ಕವಿ ಸತ್ತರೆ ಒಂದು ಪುಸ್ತಕ ಉಳಿಯುತ್ತದೆ. ನಮ್ಮ ಭಾರತೀಯ ಕಲಾವಿದ ತೀರಿಕೊಂಡರೆ ಆ ಕಲಾ ಪರಂಪರೆ ನಾಶವಾಗುತ್ತದೆ ಎಂದ ಡಾ.ಬಡಿಗೇರ, ಅನುಭವದ ವಿದ್ಯೆ ತಿಳಿಯುವುದರಿಂದ ಬರುವಂತಹದ್ದು. ಮಾಡುವುದರಿಂದ ನೋಡುವುದರಿಂದ ಬರುವಂತ ಕಲೆ ಎಂದರು.

ಜನಪದ ಕಲಾವಿದರು ಅನಕ್ಷರಸ್ಥರು ಎಂದು ಭಾವಿಸಬಾರದು. ಅವರು ಹಾಡಿರುವ, ಬರೆದಿರುವ ತ್ರಿಪದಿ, ಒಡಪುಗಳು, ಕಾವ್ಯಗಳನ್ನು ಹಾಗೂ ಜನಪದರು ಆಡಿದ ಮಾತುಗಳನ್ನು ತರಗತಿಯಲ್ಲಿ ಬಿಡಸಲು ಆಗದೆ ಇರುವಷ್ಟು ಮಟ್ಟಿಗೆ ಅವು ಇರುವುದರಿಂದ ನಮ್ಮ ಕಲಾವಿದರು ಅನಕ್ಷರಸ್ಥರಲ್ಲಾ ಅವರು ಬರೆಯದ ಜ್ಞಾನಿಗಳು ಎಂದು ಬಡಿಗೇರ ಹೇಳಿದರು.

10 ವರ್ಷ ಕಳೆದರೆ ಬಯಲಾಟ ಪಾರಿಜಾತ ಕಲಾವಿದರು ಸಿಗುವುದಿಲ್ಲ. ಈಗಿನ ತಲೆಮಾರು ಹೋದರೆ ಆ ಕಲೆಯು ಹೋಗುವ ಸಾಧ್ಯತೆ ಇದೆ. ಪಾರಿಜಾತ ಈ ಭಾಗದ ಬಹಳ ಅಪರೂಪ ಪ್ರಸಿದ್ಧವಾಗಿರತಕ್ಕಂತ ಮತ್ತು ಜನಪ್ರಿಯವಾಗಿರುವ ಒಂದು ಆಟ. ಈ ಜನಪದ ಕಲೆಗಳು ನಮಗೆ ವಿನಯ, ಮಾನವೀಯತೆ, ನಿರ್ಮಲ ಪ್ರೇಮ, ನಿರ್ಮಲ ಭಕ್ತಿ, ಕೂಡಿ ಆಟವಾಡುವುದು, ಊಟ ಮಾಡುವುದು ಹೀಗೆ ಎಲ್ಲವನ್ನೂ ಕಲಿಸುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಬಯಲಾಟ ಅಕಾಡೆಮಿ ಅಧ್ಯಕ್ಷ ಪ್ರೊ.ಕೆ.ಆರ್. ದುರ್ಗಾದಾಸ ಮಾತನಾಡಿ, ನಮ್ಮಲ್ಲಿರುವ ಅಹಂಕಾರವನ್ನು ಕಳೆದುಕೊಂಡು ಎಲ್ಲರ ಜೊತೆಗೆ ಕೂಡಿ ಜನಸಾಮಾನ್ಯರಂತೆ ಬದುಕುವುದೇ ಜನಪದದ ಆಶಯವಾಗಿದೆ. ಜನರಿಗೆ ಲೋಕದ ನೀತಿಗಳನ್ನು ತಿಳಿಸುತ್ತಾ ಬಂದಿದ್ದು ಜನಪದ ಕಲೆಗಳ ಒಂದು ಬಹುದೊಡ್ಡ ಶಕ್ತಿ ಎಂದರು.

ಅಕಾಡೆಮಿ ಸದಸ್ಯರಾದ ಅನಸೂಯಾ ವಡ್ಡರ, ಕಾಲೇಜಿನ ಪ್ರಾಚಾರ್ಯ ಗೀತಾಂಜಲಿ ಶ್ರೀನಿವಾಸ ರಾವ್, ಸಂಸ್ಕೃತಿ ವಿಭಾಗದ ಮುಖ್ಯಸ್ಥ ಡಾ. ಮೌನೇಶ ಕಮ್ಮಾರ, ಪ್ರವೀಣ ಬಿ, ಜಾಜಿಮಲ್ಲಿಗೆ ಕವಿ ಸತ್ಯಾನಂದ ಪಾತ್ರೋಟ, ಸುನೀಲ ನಡಕಟ್ಟಿ, ಡಾ.ಎಮ್.ಎಚ್.ತಹಸಿಲ್ದಾರ. ಡಾ. ಕವಿತಾ ಮುತ್ತಪ್ಪ, ಸಂಗಮೇಶ ಬ್ಯಾಳಿ, ಚಂದ್ರಶೇಖರ ಕಾಳನ್ನವರ, ಪಿ.ಕೆ ಕಾರಬಾರಿ, ಎಮ್.ವಾಯ.ಬಡಿಗೇರ, ಡಾ.ಪಕೀರಪ್ಪ ಮತ್ತಿತರರು ಇದ್ದರು.

ಕಾರ್ಯಕ್ರಮದಲ್ಲಿ ಜನಪದ ಕಲಾವಿದರನ್ನು ಸನ್ಮಾನಿಸಿ ಗೌರವಿಸಲಾಯಿತು, ನಂತರ ಜೀಮೂತವಾಹನ ಬಯಲಾಟ ಪ್ರದರ್ಶನ ಹಾಗೂ ಶ್ರೀಕೃಷ್ಣ ಪಾರಿಜಾತ ಪ್ರದರ್ಶನ ಜರುಗಿದವು. ಕಾರ್ಯಕ್ರಮಕ್ಕೂ ಮುಂಚೆ ವಿದ್ಯಾರ್ಥಿನಿತರಿಂದ ಸಾಂಸ್ಕೃತಿಕ ಕುಂಭ ಮೇರವಣಿಗೆ ಜರುಗಿತು.

# ಉಗ್ರರ ಕೃತ್ಯ ಖಂಡಿಸಿ ಬಿಜೆಪಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.23-ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಉಗ್ರರ ಕೃತ್ಯವನ್ನು ಖಂಡಿಸಿ ನಗರದಲ್ಲಿ ಬುಧವಾರ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ನೇತೃತ್ವದಲ್ಲಿ ನೂರಾರು ಜನ ಕಾರ್ಯಕರ್ತರು ಬೆಳಿಗ್ಗೆ ಪೂಜಾರ ಅವರ ಕಚೇರಿಯಿಂದ ಪ್ರತಿಭಟನಾ ಮೆರವಣಿಗೆ ನಡೆಸಿ ಬಸವೇಶ್ವರ ವೃತ್ತಕ್ಕೆ ಬಂದು ಉಗ್ರರ ಕೃತ್ಯವನ್ನು ಖಂಡಿಸಿ, ಇದು ಹೇಡಿಗಳು ಹಿಂದಿನಿಂದ ಮಾಡಿದ ದಾಳಿ ಎಂದು ಟೀಕಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಿ.ಎಚ್.ಪೂಜಾರ, ಪಾಕಿಸ್ತಾನಿ ಕುಹಕಿಗಳು ನೇರವಾಗಿ ದಾಳಿ ಮಾಡುವ ಧೈರ್ಯವಿಲ್ಲದೇ ಹೇಡಿಗಳಾಗಿ ಹಿಂದಿನಿಂದ ಕೃತ್ಯ ಎಸಗಿದ್ದಾರೆ. ಇದು ಹಿಂದುಗಳನ್ನು ಗುರಿಯಾಗಿಟ್ಟುಕೊಂಡು ಮಾಡಿದ ಹೇಯ ಕೃತ್ಯ ಎಂದರು.

ಪಾಕಿಸ್ತಾನದ ವಿರುದ್ಧ ಘೋಷಣೆ ಕೂಗಿದ ಕಾರ್ಯಕರ್ತರು ಕೇಂದ್ರ ಸರಕಾರ ಉಗ್ರರರನ್ನು ಸದೆಬಡಿಯಲು ಸರ್ಜಿಕಲ್ ಸ್ಟ್ರೈಕ ಮಾಡುವಂತೆ ಆಗ್ರಹಿಸಿದರು. ಸಂಗನಗೌಡ ಗೌಡರ, ಡಾ.ಶೇಖರ ಮಾನೆ, ವಿರುಪಾಕ್ಷ ಅಮೃತಕರ, ಮಲ್ಲಿಕಾರ್ಜುನ ಸುರಪುರ, ಅಪ್ಪಣ್ಣ ಪೂಜಾರ, ಶೈಲು ಅಂಗಡಿ, ರಾಜು ಗೌಳಿ, ರಾಘವೇಂದ್ರ ನಾಗೂರ, ಕಳಕಪ್ಪ ಬಾದವಾಡಗಿ, ಗೋಪಾಲ ಕಟ್ಟಿಮನಿ, ಶಾಂತಾಬಾಯಿ ಗೋಣಿ, ವಿಜಯಲಕ್ಷ್ಮೀ ಅಂಗಡಿ ಮತ್ತಿತರರು ಪಾಲ್ಗೊಂಡಿದ್ದರು.

# ಕೊಪ್ಪಳ ತಾಲೂಕಿನ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳು ಸಮರ್ಪಕವಾಗಿ ಅನುಷ್ಠಾನಿಸಲು ಕೊಪ್ಪಳ ತಾಲೂಕ ಮಟ್ಟದ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆ ಬಾಲಚಂದ್ರನ್ ಎಸ್ ರವರ ಅಧ್ಯಕ್ಷತೆಯಲ್ಲಿ ಕೊಪ್ಪಳ ತಾಲೂಕ ಪಂಚಾಯತಿ ಸಭಾಂಗಣದಲ್ಲಿ ಜರುಗಿತು. ಗೃಹಲಕ್ಷ್ಮೀ ಯೋಜನೆಯ ಕುರಿತು ಸಭೆಯಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಮಾತನಾಡಿ ಜನೇವರಿ-2025ರ ಗೃಹಲಕ್ಷ್ಮೀ ಹಣ ಬಿಡುಗಡೆಯಾಗಿದ್ದು ಶೀಘ್ರದಲ್ಲಿ ಜಮೆಯಾಗಲಿದ್ದು, ಫೆಬ್ರುವರಿ&ಮಾರ್ಚ-2025ರ ಹಣ ಬಿಡುಗಡೆಯಾಗಿರುವದಿಲ್ಲ. ಬಿಡುಗಡೆಯಾದ ತಕ್ಷಣವೇ ಪಾವತಿಗೆ ಕ್ರಮವಹಿಸಲಾಗುವದು ಎಂದು ಮಾಹಿತಿ ನೀಡಿದರು. ಎಲ್ಲಾ ನ್ಯಾಯ ಬೆಲೆ ಅಂಗಡಿಗಳಲ್ಲಿ ಆಹಾರ ಸಂಗ್ರಹಣೆ, ವಿತರಣೆ ಮತ್ತು ಆಹಾರ ಧಾನ್ಯ ಉಳಿದಿರುವ ಮಾಹಿತಿಯುಳ್ಳ ನಾಮಫಲಕಗಳನ್ನು ಅಳವಡಿಸಿರುವದಿಲ್ಲವೆಂದು ಸದಸ್ಯರು ಸಭೆಯಲ್ಲಿ ತಿಳಿಸಿದಾಗ ಅಧ್ಯಕ್ಷರು ಕೂಡಲೇ ಅಳವಡಿಸಲು ಕ್ರಮವಹಿಸಬೇಕೆಂದು ಅಧ್ಯಕ್ಷರು ಅಧಿಕಾರಿಗಳಿಗೆ ಸೂಚಿಸಿದರು. ಇತ್ತೀಚೆಗೆ ಜರುಗಿದ ನ್ಯಾಯಬೆಲೆ ಅಂಗಡಿಗಳ ಸನದುದಾರರ ಸಭೆಗೆ ಹಾಜರಾಗದ ಸನದುದಾರರಿಗೆ ಆಹಾರ ಇಲಾಖೆಯಿಂದ ನೋಟಿಸ್ ನೀಡುವಂತೆ ಸಭೆಯಲ್ಲಿ ಸದಸ್ಯರು ತಿಳಿಸಿದರು. ಮುಂದಿನ ಸಭೆಯನ್ನು ಮುನಿರಾಬಾದ ಡ್ಯಾಂ ಗ್ರಾಮ ಪಂಚಾಯತಿಯಲ್ಲಿ ಆಯೋಜಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಪಂಚ ಗ್ಯಾರಂಟಿ ಯೋಜನೆಗಳ ಪ್ರತಿ ಫಲಾನುಭವಿಗೆ ತಲುಪುವಂತೆ ಹಾಜರಿದ್ದ ಎಲ್ಲಾ ಸದಸ್ಯರು, ಅನುಷ್ಠಾನ ಅಧಿಕಾರಿಗಳಿಗೆ ಸಭೆಯ ಅಧ್ಯಕ್ಷರು ಸೂಚಿಸಿದರು. ಸಭೆಯಲ್ಲಿ ತಾಲೂಕ ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ವಿಠ್ಠಲ್ ಚೌಗಲಾ, ಸಮಿತಿಯ ಸದಸ್ಯರಾದ ದೇವರಾಜ ನಡುವಿನಮನಿ, ರಮೇಶ ಹ್ಯಾಟಿ, ಜ್ಯೋತಿ ಗೊಂಡಬಾಳ, ಸವಿತಾ ಗೊರಂಟ್ಲಿ, ಅನ್ನದಾನಸ್ವಾಮಿ, ಮೆಹಬೂಬ ಪಾಷಾ ಪರಶುರಾಮ ಕೊರವರ, ಧರ್ಮರಾಜರಾವ್ ದ್ಯಾಮಪ್ಪ ಡೊಳ್ಳಿನ, ಅನ್ವರ ಹುಸೇನ ಗಡಾದ, ಹಾಗು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಅಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಏ.26 ಬೇವೂರಿನಲ್ಲಿ ಸಾಮೂಹಿಕ ವಿವಾಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.23-ಆಲ್ ಇಂಡಿಯಾ ದಲಿತ ಯುಥ್ ಆರ್ಗ್‌ನೈಜೇಶನ್ ಬಾಗಲಕೋಟೆ ಜಿಲ್ಲಾ ಘಟಕದ ಅಧ್ಯಕ್ಷ ಗ್ಯಾನಪ್ಪ ಚಲವಾದಿ ಏ.26 ರಂದು ಹಮ್ಮಿಕೊಂಡಿರುವ ತಮ್ಮ ಪುತ್ರಿಯ ಮದುವೆ ಸಮಾರಂಭದಲ್ಲಿ ಅನೇಕ ಜೋಡಿಗಳ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಸಹ ಆಯೋಜಿಸಿದ್ದಾರೆ.

ಶನಿವಾರ ಮುಂಜಾನೆ 11 ಗಂಟೆಗೆ ಸಮೀಪದ ಬೇವೂರಿನ ಆದರ್ಶ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಮದುವೆ ಸಮಾರಂಭ ನಡೆಯಲಿದ್ದು, ಕೊಪ್ಪಳ ಗವಿಮಠದ ಶ್ರೀಗಳು, ಇಳಕಲ್ಲಿನ ಗುರುಮಹಾಂತ ಶ್ರೀಗಳು, ಕಮತಗಿಯ ಹೊಳೆ ಹುಚ್ಚೇಶ್ವರ ಶ್ರೀಗಳು, ಬಿಲ್ ಕೆರೂರಿನ ಸಿದ್ಧಲಿಂಗ ಶಿವಾಚಾರ್ಯರು, ಬೇವೂರಿನ ಗ್ಯಾನಪ್ಪಜ್ಜನವರು ಹಾಗೂ ಆಯುಷ್ಮಾನ ದಮ್ಮಪಾಲ ಬಂತೇಜಿ ಸಾನಿಧ್ಯ ವಹಿಸುವರು.

ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅಧ್ಯಕ್ಷತೆ ವಹಿಸಲಿದ್ದು, ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಮತ್ತು ಸಾಮಾಜಿಕ ಹೋರಾಟಗಾರ ಚೇತನ ಅಹಿಂಸಾ ಕಾರ್ಯಕ್ರಮ ಉದ್ಘಾಟಿಸುವರು. ಅಬಕಾರಿ ಸಚಿವ ಆರ್.ಬಿ.ತಿಮ್ಮಾಪೂರ, ಶಾಸಕ ಎಚ್.ವಾಯ್.ಮೇಟಿ, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯಕುಮಾರ ಸರನಾಯಕ, ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ ಜಿಲ್ಲಾ ಎಸ್ಪಿ ಅಮರನಾಥ ರೆಡ್ಡಿ, ಹೆಚ್ಚುವರಿ ಎಸ್ಪಿ ಶಂಕರ ಮಾರಿಹಾಳ ಸೇರಿ ರಾಜಕೀಯ ಮುಖಂಡರು, ಗಣ್ಯರು, ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಗ್ಯಾನಪ್ಪ ಚಲವಾದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ಎಂ.ಸಾವಕಾರಗೆ ಜೀಶಂಪ ಪ್ರಶಸ್ತಿ ಪ್ರದಾನ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.23-ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಅವರಿಗೆ ಜಾನಪದ ವಿದ್ವಾಂಸ ಡಾ.ಜೀ.ಶಂ.ಪರಮಶಿವಯ್ಯ ರಾಜ್ಯ ಪ್ರಶಸ್ತಿಯನ್ನು ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ ಪ್ರದಾನ ಮಾಡಿದರು.

ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ನಗರದ ದಾಸಮಠ ಹುಲ್ಲಮಕ್ಕಿಯಲ್ಲಿ ಜರುಗಿದ ಕನ್ನಡ ಜಾನಪದ ಪರಿಷತ್ ದಶಮಾನೋತ್ಸವ ಸಮಾರಂಭದಲ್ಲಿ ಸಾವಕಾರ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹುಲ್ಮಕ್ಕಿ ದಾಸಮಠದ ಗುಣನಾಥ ಸ್ವಾಮೀಜಿ, ಕನ್ನಡ ಜಾನಪದ ಪರಿಷತ್ ರಾಜ್ಯ ಅಧ್ಯಕ್ಷ ಡಾ.ಎಸ್.ಬಾಲಾಜಿ, ಚಿಕ್ಕಮಗಳೂರು ಕಸಾಪ ಜಿಲ್ಲಾಧ್ಯಕ್ಷ ಸೂರಿ ಶ್ರೀನಿವಾಸ, ಓಣಿತೋಟ ರತ್ನಾಕರ, ಕೆ.ಸಿ.ಕಾಂತಪ್ಪ, ನವೀನಕುಮಾರ, ವಿಶಾಲಾಕ್ಷಮ್ಮ, ಕೆ.ಆರ್.ಚಂದ್ರಶೇಖರ, ಕುಂಚೂರು ಶ್ರೀನಿವಾಸನ್, ಆರ್.ಬಿ.ನಬಿವಾಲೆ, ಸುರೇಶ ವಸ್ತ್ರದ ಸೇರಿದಂತೆ ಇತರರು ಇದ್ದರು.

# ನಗರಕ್ಕೆ ಆಗಮಿಸಿದ ಅನುಭವ ಮಂಟಪ- ಬಸವಾದಿ ಶರಣರ ವೈಭವ ರಥಯಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.22: ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಬದುಕು, ಸಂದೇಶ, ಚಿಂತನೆಗಳನ್ನು ಪ್ರಚುರ ಪಡಿಸುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಅನುಭವ ಮಂಟಪ-ಬಸವಾದಿ ಶರಣರ ವೈಭವ ರಥಯಾತ್ರೆಗೆ ಇಂದು ನಗರದ ವೀರಶೈವ ಲಿಂಗಾಯತ ಸಮುದಾಯದ ಮುಖಂಡರು ಮುನಿಷಿಪಲ್ ಹೈಸ್ಕೂಲ್ ಮೈದಾನದ ಆವರಣದಲ್ಲಿ ರಥಯಾತ್ರೆಯನ್ನು ಸ್ವಾಗತಿಸಿದರು. ಏ.29 ಮತ್ತು 30ರಂದು ಬಾಗಲಕೋಟೆ ಜಿಲ್ಲೆಯ ಕೂಡಲ ಸಂಗಮದಲ್ಲಿ ಎರಡು ದಿನಗಳ ಕಾಲ ಆಯೋಜಿಸಿರುವ "ಅನುಭವ ಮಂಟಪ-ಬಸವಾದಿ ಶರಣ ವೈಭವ" ಕಾರ್ಯಕ್ರಮದ ಅಂಗವಾಗಿ ಈ ರಥಯಾತ್ರೆ ಹಮ್ಮಿಕೊಂಡಿದೆ.

ನಗರಕ್ಕೆ ಆಗಮಿಸಿದ ಯಾತ್ರೆಗೆ ಪೂಜೆ ಸಲ್ಲಿಸಿ ಪುಷ್ಪನಮನ ಗೈದು, ಗೌರವ ಸಮರ್ಪಿಸಲಾಯಿತು. ನಗರದ ಪ್ರಮುಖ ಬೀದಿಗಳಲ್ಲಿ ಸಾಗಿದ ರಥಯಾತ್ರೆಯು ನಂತರ ಸಿರುಗುಪ್ಪ ಮೂಲಕ ರಾಯಚೂರು ಜಿಲ್ಲೆಗೆ ತೆರಳಿತು.

ರಥದಲ್ಲಿ ಬಸವಣ್ಣ ಅವರೊಂದಿಗೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಭಗವಾನ್ ಗೌತಮ ಬುದ್ಧ, ಶಿವಶರಣೆ ಅಕ್ಕಮಹಾದೇವಿ, ಸಂತ ಶಿಶುನಾಳ ಶರೀಫ, ಗುರುನಾನಕ್, ಭಗವಾನ್ ಮಹಾವೀರ, ನಾರಾಯಣ ಗುರು, ಯೇಸು ಕ್ರಿಸ್ತರ ಪ್ರತಿಮೆಗಳನ್ನು ಅಳವಡಿಸಲಾಗಿದೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಬಸವ ದಳ ಕಾರ್ಯದರ್ಶಿ ರವಿಶಂಕರ್, ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾ ಅಧ್ಯಕ್ಷ ಬಿಚ್ಚುಗಲ್ಲು ಪಂಚಾಕ್ಷರಪ್ಪ, ವೀರಶೈವಲಿಂಗಾಯತ ಸಮುದಾಯದ ಮುಖಂಡರುಗಳಾದ ಪನ್ನರಾಜ್ ಸಿರಿಗೇರಿ, ಟಿ.ಹೆಚ್.ಎಂ.ಬಸವರಾಜ್, ಸಂಗನಕಲ್ಲು ಹಿಂಮತರಾಜ್, ಎಸ್. ಮಲ್ಲನಗೌಡ, ಬಿಸಲಳ್ಳಿ ಬಸವರಾಜ್ ಹಾಗೂ ಇತರರು ಇದ್ದರು.

ಜಾಹೀರಾತಿಗಾಗಿ ಇಂದೆ
ಸಂಪರ್ಕಿಸಿ:9449732000

# ಕ್ರಮಕೈಗೊಳ್ಳದ ತಹಶೀಲ್ದಾರರಿಗೆ ನೋಟಿಸ್ ರೈತರ ಕಬ್ಬಿನ ಬಾಕಿ ಬಿಲ್ ಪಾವತಿಗೆ ಗಡುವು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.23- ಪ್ರಸಕ್ತ 2024-25ನೇ ಹಂಗಾಮಿನಲ್ಲಿ ಕಬ್ಬು ಪೂರೈಸಿದ ರೈತರಿಗೆ ನೀಡಬೇಕಾದ ಬಾಕಿ ಹಣವನ್ನು ಸಂಪೂರ್ಣವಾಗಿ ಪಾವತಿಸಲು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರು ಸಕ್ಕರೆ ಕಾರ್ಖಾನೆಗಳಿಗೆ ಎರಡು ದಿನಗಳ ಗಡುವು ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಸಕ್ಕರೆ ಕಾರ್ಖಾನೆ ಮಾಲಿಕರ, ವ್ಯವಸ್ಥಾಪಕ ನಿರ್ದೇಶಕರುಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರೈತರಿಗೆ ನೀಡಬೇಕಾದ ಬಾಕಿ ಬಿಲ್ಲಿನ ಕುರಿತು ಜಿಲ್ಲಾಡಳಿತ ಹಾಗೂ ಸಕ್ಕರೆ ಆಯುಕ್ತರಿಗೆ ಸರಿಯಾಗಿ ಮಾಹಿತಿ ನೀಡುತ್ತಿಲ್ಲ. ಅಲ್ಲದೇ ರೈತರಿಗೆ ಬಿಲ್ ಪಾವತಿ ಮಾಡಿರುವ ಬಗ್ಗೆಯೂ ಸರಿಯಾದ ಮಾಹಿತಿ ನೀಡುತ್ತಿಲ್ಲ. ಇನ್ನು ಎರಡು ದಿನಗಳಲ್ಲಿ ರೈತರಿಗೆ ನೀಡಬೇಕಾಗ ಬಾಕಿ ಹಣ ಸಂಪೂರ್ಣ ಪಾವತಿಯಾಗಬೇಕು. ಈ ಬಗ್ಗೆ ತಹಶೀಲ್ದಾರರು ಪಾವತಿಯಾದ ಬಗ್ಗೆ ಜಿಲ್ಲಾಡಳಿತಕ್ಕೆ ಮಾಹಿತಿ ನೀಡುವಂತೆ ಸೂಚನೆ ನೀಡಿದರು.

ಜಿಲ್ಲೆಯ 12 ಸಕ್ಕರೆ ಕಾರ್ಖಾನೆಗಳು ಕಬ್ಬಿನ ಬಿಲ್ಲು ಬಾಕಿ ಉಳಿಸಿಕೊಂಡಿದ್ದು, ಇದರಲ್ಲಿ 5 ಕಾರ್ಖಾನೆ ಮಾಲಿಕರು ಬಿಲ್ ಪಾವತಿಗೆ ಕಾಲಾವಕಾಶ ಕೋರಿ ಉಚ್ಚ ನ್ಯಾಯಾಲಯಕ್ಕೆ ರಿಟ್ ಅರ್ಜಿ ದಾಖಲಿಸಿದ್ದಾರೆ. ಪ್ರತಿ ಬಾರಿಯೂ ಕಬ್ಬು ಪೂರೈಸಿದ ರೈತರಿಗೆ ಬಿಲ್ ಪಾವತಿಸುವಲ್ಲಿ ಯಾಕೆ ವಿಳಂಬ ಮಾಡುತ್ತಿದ್ದೀರಿ ಎಂದು ಕಾರ್ಖಾನೆಗಳ ಪ್ರತಿನಿಧಿಗಳನ್ನು ಪ್ರಶ್ನಿಸಿದ ಜಿಲ್ಲಾಧಿಕಾರಿಗಳು, ನಿಮ್ಮ ಸಮಸ್ಯೆಗಿಂತ ರೈತರ ಸಮಸ್ಯೆ ಬಹಳಷ್ಟು ಇವೆ. ನಿಗದಿತ ಅವಧಿಯಲ್ಲಿ ಬಿಲ್ ಪಾವತಿ ಮಾಡದಿದ್ದರೇ ಹೇಗೆ ಎಂದರು. ಯಾವುದೇ ರೀತಿಯಲ್ಲಿ ಕಾಲಾವಕಾಶ ಕೊಡುವುದಿಲ್ಲ. ಎರಡು ದಿನಗಳಲ್ಲಿ ರೈತರ ಬಾಕಿ ಹಣ ಸಂಪೂರ್ಣ ಪಾವತಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕಾರ್ಖಾನೆಗಳಿಗೆ ಕಬ್ಬು ಪೂರೈಸಿದ ರೈತರಿಗೆ ಬಾಕಿ ಹಣ ಪಾವತಿ ಕುರಿತಂತೆ ಸಕ್ಕರೆ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳು ಭೂಕಂದಾಯ ವಸೂಲಾತಿಗಾಗಿ ತಹಶೀಲ್ದಾರರಿಗೆ ಆದೇಶ ಜಾರಿ ಮಾಡಿದ್ದರೂ ಸಹ ವಸೂಲಾತಿ ಪ್ರಕ್ರಿಯೆ ಸಂಪೂರ್ಣವಾಗಿ ನಡೆಸದ ಹಾಗೂ ಈ ಬಗ್ಗೆ ಸರಿಯಾಗಿ ಮಾಹಿತಿ ನೀಡದ ಹಿನ್ನಲೆಯಲ್ಲಿ ತಹಶೀಲ್ದಾರರಿಗೆ ನೋಟಿಸ್ ಜಾರಿ ಮಾಡಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಇನ್ನು ಎರಡು ದಿನಗಳಲ್ಲಿ ರೈತರ ಕಬ್ಬಿನ ಬಾಕಿ ಹಣ ಸಂಪೂರ್ಣವಾಗಿ ಪಾವತಿಗೆ ಕ್ರಮವಹಿಸಬೇಕು. ಕ್ರಮವಹಿಸದಿದ್ದರೆ ತಹಶೀಲ್ದಾರರ ಮೇಲೆ ಸೂಕ್ತ ಕ್ರಮಕೈಗೊಳ್ಳಲಾಗುವುದೆಂದು ಜಾನಕಿ ಕೆ.ಎಂ. ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕಾರ್ಖಾನೆಗಳು ಸರಿಯಾಗಿ ಕರ ಪಾವತಿಸುತ್ತಿಲ್ಲ. ಕಾರ್ಖಾನೆ ಮೆಜರಮೆಂಟ್ ಮಾಡಲು ಗ್ರಾಮ ಪಂಚಾಯತಿ ತಂಡ ಬಂದಾಗ ಸರಿಯಾದ ಸಹಕಾರ ನೀಡುತ್ತಿಲ್ಲ. ಕಾನೂನು ರೀತಿಯಲ್ಲಿ ಕರ ಪಾವತಿಯಾಗಬೇಕು. ವಾರದಲ್ಲಿ ಮೆಜರಮೆಂಟ್ ಮಾಡಲು ತಂಡ ಕಾರ್ಖಾನೆಗಳಿಗೆ ಬರಲಿದ್ದು, ಸಂಪೂರ್ಣ ಸಹಕಾರ ನೀಡಬೇಕು. ಇಲ್ಲವಾದಲ್ಲಿ ಸ್ವತಃ ತಾವೇ ಭೇಟಿ ನೀಡುವುದಾಗಿ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಆಯಾ ತಾಲೂಕಿನ ತಹಶೀಲ್ದಾರರು, ಆಹಾರ ಇಲಾಖೆಯ ಲೆಕ್ಕ ಅಧೀಕ್ಷಕ ಆರ್. ಎಸ್.ಚೌದರಿ ಸೇರಿದಂತೆ ವಿವಿಧ ಸಕ್ಕರೆ ಕಾರ್ಖಾನೆಗಳ ಮಾಲಿಕರು ಹಾಗೂ ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.

# ಏ 26ರಂದು ಡಾ ಬಾಬಾಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರ 134 ನೇ ಜಯಂತೋತ್ಸವ ಹಾಗೂ ಅಭಿನಂದನಾ ಸಮಾರಂಭ: ಬಸವರಾಜ ಮಾಳಿಗೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 :- ಈ ತಿಂಗಳ 26ರಂದು ನಗರದ ಪೂಜ್ಯ ಡಾ ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಮಧ್ಯಾಹ್ನ 12 ಗಂಟೆಗೆ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ವತಿಯಿಂದ ಭಾರತ ರತ್ನ ಬಾಬಾ ಸಾಹೇಬ್ ಭೀಮರಾವ ಅಂಬೇಡ್ಕರ್ ಅವರ 134 ನೇ ಜಯಂತೋತ್ಸವ ಮತ್ತು ಅಭಿನಂದನಾ ಸಮಾರಂಭ ಜರುಗಲಿದೆ ಎಂದು ಒಕ್ಕೂಟದ ಗೌರವಾಧ್ಯಕ್ಷ ಬಸವರಾಜ ಮಾಳಗೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಅಂದು ನಡೆಯಲಿರುವ ಸಮಾರಂಭವನ್ನು ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ್ ಖಂಡ್ರೆ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಪೌರಾಡಳಿತ ಸಚಿವ ರಹೀಮ್ ಖಾನ್, ವಿಧಾನ ಪರಿಷತ್ ಶಾಸಕರಾದ ಬಿ ಕೆ ಹರಿಪ್ರಸಾದ್ ಹಾಗೂ ಸಂಸದ ಸಾಗರ್ ಖಂಡ್ರೆ ಪಾಲ್ಗೊಳ್ಳುವರು. ಅಧ್ಯಕ್ಷತೆಯನ್ನು ಹಿಂದುಳಿದ ಜಾತಿಗಳ ಒಕ್ಕೂಟದ ಉಪಾಧ್ಯಕ್ಷ ತಾನಾಜಿ ಸಗರ್ ವಹಿಸುವರು. ಅತಿಥಿಗಳಾಗಿ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ್ ಚಿಮಕೊಡೆ, ಸಂವಿಧಾನ ಸಂರಕ್ಷಣಾ ಸಮಿತಿಯ ಅಧ್ಯಕ್ಷರಾದ ಅಬ್ದುಲ್ ಮುನ್ನಾನ ಸೇಟ್, ಸಮಿತಿಯ ಮಹಾ ಪ್ರಧಾನ ಕಾರ್ಯದರ್ಶಿ ಅನಿಲಕುಮಾರ ಬೆಲ್ದಾರ್, ಹಿಂದುಳಿದ ಜಾತಿಗಳ ಒಕ್ಕೂಟ ಕಲಬುರ್ಗಿ ಅಧ್ಯಕ್ಷ ಮಹದೇವ ವಕೀಲ, ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ರಮೇಶ ಢಾಕೊಳಗಿ ಭಾಗವಹಿಸುವರು.

ಜನವಾರಿ ಮಹಿಳಾ ಸಂಘದ ಅಧ್ಯಕ್ಷ ಪ್ರೊ ವಿಜಯಲಕ್ಷ್ಮಿ ಗಡ್ಡೆ, ಮುಖ್ಯ ಭಾಷಣಕಾರರಾಗಿ ಪಾಲ್ಗೊಳ್ಳುವರು. ತಾನು ಪ್ರಾಸ್ತಾವಿಕ ನುಡಿ ನುಡಿಯುದಾಗಿ ಮಾಳಗೆ ತಿಳಿಸಿದರು.

ಸಂವಿಧಾನ ಸಂರಕ್ಷಣಾ ಸಮಿತಿಯ ಮಹಾ ಪ್ರಧಾನ ಕಾರ್ಯದರ್ಶಿ ಅನಿಲಕುಮಾರ ಬೆಲ್ದಾರ್ ಈ ಸಂದರ್ಭದಲ್ಲಿ ಮಾತನಾಡಿ, ಹಿಂದುಳಿದ ಜಾತಿಗಳ ಒಕ್ಕೂಟದ ಹಿರಿಯ ಮುಖಂಡ ಗಂಧರ್ವ ಸೇನಾ, ದಲಿತ ಸಂಘಟನೆಗಳ ಒಕ್ಕೂಟದ ಮುಖಂಡ ಬಾಬುರಾವ್ ಪಾಸ್ವಾನ್, ರೆಡ್ಡಿ ಸಮಾಜದ ಅಧ್ಯಕ್ಷ ಶಂಕರ ರೆಡ್ಡಿ ಚಿಟ್ಟಾ, ಬಂಜಾರಾ ಸಮಾಜದ ಅಧ್ಯಕ್ಷ ಗೋವರ್ಧನ್ ರಾಥೋಡ್, ವಿಶ್ವಕರ್ಮ ಸಮಾಜದ ಅಧ್ಯಕ್ಷ ಮಹೇಶ ಪಾಂಚಾಳ್, ಕೋರವಾ ಸಮಾಜದ ಅಧ್ಯಕ್ಷ ರಘುನಾಥ್ ಮರ್ಕಲ್, ಗೊಂಡಪರ ಸಂಘಟನೆಗಳ ಒಕ್ಕೂಟದ ಮುಖಂಡ ತುಕಾರಾಮ ಚಿಮಕೋಡೆ, ಗಾಣಿಗ ಸಮಾಜದ ಅಧ್ಯಕ್ಷ ಬಸವರಾಜ ಚಿಕ್ಲೆ, ಟೋಕ್ರಿ ಕೋಳಿ ಸಮಾಜದ ಉಪಾಧ್ಯಕ್ಷ ಸುನಿಲಕುಮಾರ ಕಾಶೆಂಪುರ, ಹಡಪದ ಸಮಾಜದ ಅಧ್ಯಕ್ಷ ಪ್ರಭುರಾವ ತರನಳ್ಳಿ ವಕೀಲರು, ಮಡಿವಾಳ ಸಮಾಜದ ಧನರಾಜ ಮಡಿವಾಳ, ಕರ್ನಾಟಕ ಮರಾಠ ಸೇವಾ ಸಂಘದ ಅಧ್ಯಕ್ಷ ಶಂಕರರಾವ್ ಬಿರಾದಾರ, ಪದ್ಮಶಾಲಿ ಸಮಾಜದ ಅಧ್ಯಕ್ಷ ಮೋಹನ್ ಭಾಚಾ, ಖಾಟಿಕ ಸಮಾಜದ ಅಧ್ಯಕ್ಷ ಸಾಯಿಕುಮಾರ್, ಸಕುಳ ಸಾಳಿ ಸಮಾಜದ ಮುಖಂಡ ಯೋಗೇಶ, ಡೋಹರ್ ಕಕ್ಕಯ್ಯ ಸಮಾಜದ ಪ್ರಧಾನ ಕಾರ್ಯದರ್ಶಿ ರಮೇಶ ಪೋಳ್, ಭೋವಿ ವಡ್ಡರ ಸಮಾಜದ ಅಧ್ಯಕ್ಷ ಮಾಣಿಕರಾವ್ ವಾಡೇಕರ್, ಮೇದರ ಕೇತಯ್ಯ ಸಮಾಜದ ಅಧ್ಯಕ್ಷ ಸುರೇಶ್ ಮೇಧಾ, ಹೇಳವ ಸಮಾಜದ ಅಧ್ಯಕ್ಷ ಸುಭಾಷ್ ಹಳ್ಳಿಖೇಡ, ಹರಳಯ್ಯ ಸಮಾಜದ ಅಧ್ಯಕ್ಷ ಸುಭಾಷ್ ಹಮಿಲಪುರೆ, ಭೋಯಿ ಸಮಾಜದ ಅಧ್ಯಕ್ಷ ಶೈಲೇಂದ್ರ ಹಿವಾರೆ, ಭಾವುಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷ ಸಂಜೀವಕುಮಾರ ಘನಾತೆ, ಹಟಕರ್ ಸಮಾಜದ ಅಧ್ಯಕ್ಷ ಶರಣಪ್ಪ ಹಾವಗೊಂಡೆ ಗೊಲ್ಲ ಸಮಾಜದ ಅಧ್ಯಕ್ಷ ಹೇಮಂತ ಯಾದವ್, ಈಡಿಗ ಸಮಾಜದ ಪ್ರಧಾನ ಕಾರ್ಯದರ್ಶಿ ಸುಭಾಷ ಚೌದ್ರಿ ಹಾಗೂ ಇತರರು ಗೌರವ ಅತಿಥಿಗಳಾಗಿ ಉಪಸ್ಥಿತರಿರುವರು ಎಂದು ಬೆಲ್ದಾರ್ ವಿವರಿಸಿದರು.

ಮೂವರಿಗೆ ಅಭಿನಂದನೆ:- ಇದೇ ಸಂದರ್ಭದಲ್ಲಿ ಸತಿಪತಿಗಳೊಂದಾದ ಭಕ್ತಿ ಹಿತವಪ್ಪದು ಶಿವಂಗೆ ಎನ್ನುವಂತೆ ಪತಿಯ ಸೇವೆಯಲ್ಲಿ ಕೈಜೋಡಿಸಿ ತನ್ನ ಕರ್ತವ್ಯದಲ್ಲಿದ್ದಾಗ ಅನೇಕರಿಗೆ ಸಹಾಯ ಮಾಡಿ ಮಾನವೀಯತೆ ಮೆರೆದ ನಿವೃತ್ತ ಶಿಕ್ಷಕಿ ಶಶಿಕಲಾ ಮಾಳಗೆ, ಗ್ರಾಮೀಣ ಭಾಗದಲ್ಲಿ ಉಚಿತವಾಗಿ ಆರೋಗ್ಯ ಸೇವೆ ನೀಡಿ ಭೇಷ್ ಅನಿಸಿಕೊಂಡ ಡಾ ರಾಜಶೇಖರ ಸೇಡಂಕರ್ ಹಾಗೂ ರಾಜ್ಯ ಸಹಕಾರ ರತ್ನ ಪ್ರಶಸ್ತಿ ವಿಜೇತರಾದ ಬಾಬುರಾವ್ ಕುಂಬಾರ್ ಇವರಿಗೆ ಅಭಿನಂದನಾ ಸಮಾರಂಭ ಜರುಗಲಿದೆ ಎಂದು ಕಾರ್ಯಕ್ರಮದ ಇನ್ನೋರ್ವ ಸಂಘಟಕರಾದ ಗಂಧರ್ವ ಸೇನಾ ಈ ಸಂದರ್ಭದಲ್ಲಿ ತಿಳಿಸಿದರು.

ಡಾ ರಾಜಶೇಖರ್ ಸೇಡಂಕರ್, ರಮೇಶ ಡಾಕುಳಗಿ, ಗೋವರ್ಧನ ರಾಠೋಡ, ಶಂಕರರಾವ ಬಿರಾದಾರ್ ಮಾತನಾಡಿದರು.

ಬಾಬುರಾವ ಕುಂಬಾರ್, ಸುಭಾಷ ಹಮಿಲಪುರ, ರಮೇಶ ಕೊಳೇಕರ್, ತಾನಾಜಿ ಸಗರ, ಸಿನಿಲ ಖಾಶೆಂಪುರ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಪರಭಾಷೆಯ ನಡುವೆ ಕನ್ನಡ ಕಟ್ಟಿದ ಮಹಾನ ಸಂತ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.23: ಗಡಿಭಾಗದಲ್ಲಿ ಧಾರ್ಮಿಕ ಸೇವೆ ಜತೆಗೆ ಕನ್ನಡ ಭಾಷೆ ಮತ್ತು ಸಾಹಿತ್ಯ ಕ್ಷೇತ್ರ-ಕ್ಕೆ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ವಿಶಿಷ್ಟ ಕೊಡುಗೆ ನೀಡಿದ್ದಾರೆ ಎಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ನಿಶ್ಚಲಾನಂದ ಸ್ವಾಮೀಜಿ ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ವಚನ ಜಾತ್ರೆ-2025& ಮತ್ತು ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ನಿಮಿತ್ತ ಮಂಗಳವಾರ ಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಪರಭಾಷೆಯ ಆಡಳಿತದಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯ ಕ್ಷೇತ್ರದ ಸಂರಕ್ಷಣೆಗೆ ಪೂಜ್ಯರು ತೋರಿದ ದಿಟ್ಟತನ ಮಾದರಿ ಎನಸಿದೆ ಎಂದರು.

ಬಸವಾದಿ ಶರಣರ ವಾರಸುದಾರರಾಗಿ ಪೂಜ್ಯರು ಶಿಕ್ಷಣ ವಂಚಿತರಿಗೆ ಅಕ್ಷರ, ಬಡವರಿಗೆ ಅನ್ನ ಮತ್ತು ದುರ್ಬಲ ವರ್ಗದವರಿಗೆ ಆಶ್ರಯ ಕಲ್ಪಿಸಿ ಮಹಾತ್ಮರಾಗಿದ್ದಾರೆ.

ಸಿದ್ಧಗಂಗೆ,ಸುತ್ತೂರು,ಆದಿಚುಂಚನಗಿರಿ ಮಠದ ಮಾದರಿಯಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಭಾಲ್ಕಿ ಹಿರೇಮಠ ಸಂಸ್ಥಾನ ಕಾರ್ಯ ನಿರ್ವಹಿಸುತ್ತಿರುವುದು ಹೆಮ್ಮೆ ತರಿಸಿದೆ. ಇಲ್ಲಿಯ ಭಕ್ತರು ಶ್ರೀಮಠದ ಬೆಳವಣಿಗೆಗೆ ಸದಾ ದುಡಿಯುತ್ತಿರುವುದು ಅಭಿಮಾನ ತರಿಸಿದೆ ಎಂದು ತಿಳಿಸಿದರು.

ಕವಲಗಿ ಜಗದ್ಗುರು ಶಿವಯೋಗಿ ಸಿದ್ದರಾಮೇಶ್ವರ ಮಹಾಸಂಸ್ಥಾನ ಮಠದ ಡಾ.ಅಭಿನವ ಸಿದ್ರಾಮೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಚನ್ನಬಸವ ಶಿಖಾರವಾನೆ, ಮಲ್ಲಿಕಾರ್ಜುನ ನಾಗಮಾರಪಳ್ಳಿ ವಚನ ಸಂಗೀತ ನಡೆಸಿ ಕೊಟ್ಟರು. ಕುಮಾರಿ ಆದಿತಿ ಎ ಮೈಸೂರು, ಬೀದರ್ ನ ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯದ ಮಕ್ಕಳು ವಚನ ನೃತ್ಯ ನಡೆಸಿ ಕೊಟ್ಟರು. ಹಾಸ್ಯ ಕಲಾವಿದ ವೈಜಿನಾಥ ಸಜ್ಜನಶೆಟ್ಟಿ ನಿರೂಪಿಸಿದರು.

ಲಿಂಗಾಯತರು ಸಂಘಟಿತರಾಗಲಿ:

ವಿಶ್ವಗುರು ಬಸವಣ್ಣನವರು ಸ್ಥಾಪಿಸಿದ ಲಿಂಗಾಯತ ಧರ್ಮ ವಿಶ್ವದ ಶ್ರೇಷ್ಠ ಧರ್ಮವಾಗಿದೆ ಎಂದು ಕಲಬುರಗಿಯ ಹಿರಿಯ ಸಾಹಿತಿ ನಾಡೋಜ ಕುಂ.ವೀರಭದ್ರಪ್ಪ ಹೇಳಿದರು. ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಭಾಲ್ಕಿ ಶ್ರೀಮಠ ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ ಸೇವೆ ಮೂಲಕ ರಾಜ್ಯದಲ್ಲಿ ವಿಶಿಷ್ಟವಾಗಿ ಗುರುತಿಸಿ ಕೊಂಡಿದೆ. ಬಸವತತ್ವದ ಆಧಾರದ ಮೇಲೆ ನಡೆಯುತ್ತ ಎಲ್ಲ ಮಠಾಧೀಶರಿಗೆ ಆದರ್ಶ ಪ್ರಾಯವಾಗಿದೆ.

– ಡಾ.ಶಿವಾನಂದ ಸ್ವಾಮೀಜಿ ಗುರು ಬಸವೇಶ್ವರ ಸಂಸ್ಥಾನ ಮಠ ಹುಲಸೂರು

ಲಿಂಗಾಯತ ಧರ್ಮದಲ್ಲಿ ಒಡಕು ನಿಲ್ಲಬೇಕು. ಸಂಘಟಿ-ತರಾಗಿ ಹೋರಾಟ ಮಾಡಿದರೇ ಲಿಂಗಾಯತ ಧರ್ಮಕ್ಕೆ ಹೆಚ್ಚಿನ ಶಕ್ತಿ ಬರಲಿದೆ ಎಂದು ತಿಳಿಸಿದರು.

ಗುಳೇದಗುಡ್ಡ ಜಗದ್ಗುರು ಗುರುಸಿದ್ಧೇಶ್ವರ ಬ್ರಹ್ಮಠದ ಜಗದ್ಗುರು ಬಸವರಾಜ ಪಟ್ಟದಾರ್ಯ ಸ್ವಾಮೀಜಿ, ಜಗದ್ಗುರು ಗುರುಸಿದ್ಧ ಪಟ್ಟದಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಿದ್ದರು.

ಹುಲಸೂರು ಗುರುಬಸವೇಶ್ವರ ಸಂಸ್ಥಾನ ಮಠದ ಡಾ.ಶಿವಾನಂದ ಸ್ವಾಮೀಜಿ, ಸಾಯಿಗಾಂವ ಶಿವಾನಂದ ಸ್ವಾಮೀಜಿ, ಕಲಬುರಗಿ ಶರಣಬಸವೇಶ್ವರ ದಾಸೋಹ ಮಠದ ಚಿರಂಜೀವಿ ಶರಣಬಸಪ್ಪ ಅಪ್ಪ, ಮೈತ್ರಾದೇವಿ ತಾಯಿ, ಡಾ.ಮಹಾದೇವಮ್ಮ ತಾಯಿ ಸಮ್ಮುಖ ವಹಿಸಿದ್ದರು.

ಈ ಸಂದರ್ಭದಲ್ಲಿ ಕಲಬುರಗಿ ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷ ರವೀಂದ್ರ ಶಾಬಾದಿ, ಪ್ರಭುಲಿಂಗ ಮಹಾಗಾಂವಕರ್, ಅನಿಲಕುಮಾರ ಬೆಲ್ದಾರ, ವಿಜಯಕುಮಾರ ಸೋನಾರೆ ಸೇರಿದಂತೆ ಹಲವರು ಇದ್ದರು.

ವಿಶೇಷ ಸನ್ಮಾನ

ಇದೇವೇಳೆ ಕಲಬುರಗಿಯ ಶರಣಬಸವೇಶ್ವರ ವಿದ್ಯಾರ್ಧಕ ಸಂಘದ ಚೇರಮನ್ ಮಾತೋಶ್ರೀ ಡಾ.ದಾಕ್ಷಾಯಣಿ ತಾಯಿ ಶರಣಬಸಪ್ಪ ಮತ್ತು ಕಲಬುರಗಿ ಸಮಾಜ ಸೇವಕ ಉಮೇಶ ಶೆಟ್ಟಿ ಅವರನ್ನು ಶ್ರೀಮಠದ ಪರವಾಗಿ ಸನ್ಮಾನಿಸಿ, ಗೌರವಿಸಲಾಯಿತು.

ಯಕ್ಷಗಾನ ಬಯಲಾಟ

ಇದೇವೇಳೆ ಕುಮಾರ ಆರ್ಯ ಮತ್ತು ಮಹೇಶ್ವರ ಅವರು ನಡೆಸಿಕೊಟ್ಟ ಯಕ್ಷಗಾನ ಬಯಲಾಟ ನೆರೆದ ಭಕ್ತರ ಗಮನ ಸೆಳೆಯಿತು. ದೀಪಕ ಠಮಕೆ ನಿರೂಪಿಸಿದರು. ವೀರಣ್ಣ ಕುಂಬಾರ ವಂದಿಸಿದರು. ಅನುಭವ ಮಂಟಪ ಸಾಂಸ್ಕೃತಿಕ ವಿದ್ಯಾಲಯದ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿ ಕೊಟ್ಟರು.

# ಕಾಶ್ಮೀರದಲ್ಲಿ ಬಾಗಲಕೋಟೆಯ 13 ಜನ ಸುರಕ್ಷಿತ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.23: ಜಮ್ಮು, ಕಾಶ್ಮೀರ ಪ್ರವಾಸ ಕೈಗೊಂಡಿರುವ ಬಾಗಲಕೋಟೆ ನಗರದ 4 ಕುಟುಂಬಗಳ 13 ಜನ ಸುರಕ್ಷಿತವಾಗಿದ್ದಾರೆ.

ನಗರದ ಮಾರವಾಡಿ ಗಲ್ಲಿಯ ಸೂರಜ್ ಕಾಸಟ, ಕಿಶೋರ ಕಾಸಟ, ಗಿರೀಶ ಕಾಸಟ ಹಾಗೂ ನಿತೀಶ ಬಂಗ್ ದಂಪತಿಗಳು ಮತ್ತು ಐವರು ಮಕ್ಕಳು ಕಾಶ್ಮೀರ ಪ್ರವಾಸದಲ್ಲಿದ್ದು ಎಲ್ಲರೂ ಸುರಕ್ಷಿತವಾಗಿದ್ದಾರೆ.

ಮಂಗಳವಾರ ನಡೆದ ಉಗ್ರರ ದುಷ್ಕೃತ್ಯದ ಸಮಯದಲ್ಲಿ ಈ ಪ್ರವಾಸಿ ತಂಡ ಪಹಲ್ಗಾಮನಲ್ಲೇ ಇರಬೇಕಿತ್ತು. ಆದರೆ ದಾರಿ ಮಧ್ಯದಲ್ಲಿ ಗುಡ್ಡ ಕುಸಿತವಾಗಿ ಸಂಚಾರಕ್ಕೆ ತೊಂದರೆ-ಯಾಗಿದ್ದರಿಂದ ಇವರುಗಳು ಪ್ರವಾಸ ಮೊಟಕುಗೊಳಿಸಿದ್ದರು.

ಸಧ್ಯಕ್ಕೆ 13 ಜನರ ಈ ಪ್ರವಾಸಿ ತಂಡ ಶ್ರೀನಗರ ಬಳಿಯ ರಾಜೋರಿ ಪ್ರದೇಶದಲ್ಲಿದ್ದು, ಜಮ್ಮುವಿಗೆ ಪ್ರಯಾಣ ಬೆಳೆಸಿದ್ದು, ಅಲಿಂದ ಬಾಗಲಕೋಟೆಗೆ ವಾಪಸ್ ಆಗಲಿದೆ ಎಂದು ಅವರ ಕುಟುಂಬದ ಸದಸ್ಯರು ತಿಳಿಸಿದ್ದಾರೆ.

# ಪಹಲ್ಗಾಮ್ ಘಟನೆ ಖಂಡನೀಯ ಹಾಗೂ ನಿಂದನಿಯ: ಈಶ್ವರಸಿಂಗ್ ಠಾಕೂರ್



ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ. 23 :ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಂಗಳವಾರ ವಿಶೇಷವಾಗಿ ಹಿಂದು ಪ್ರವಾಸಿಗರ ಮೇಲೆ ನಡೆದ ಕ್ರೂರ ದಾಳಿ ಖಂಡನೀಯ ಹಾಗೂ ನಿಂದನಿಯವಾಗಿದ್ದು, ಇದು ವ್ಯವಸ್ಥಿತವಾದ ದಾಳಿಯಂತಿದೆ ಎಂದು ಬಿಜೆಪಿ ಸ್ಥಳಿಯ ಹಿರಿಯ ಮುಖಂಡ ಈಶ್ವರಸಿಂಗ್ ಠಾಕೂರ್ ತಿಳಿಸಿದರು. ಬುಧವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಹತ್ಯೆ ಮಾಡುವ ಮುನ್ನ ಅವರ ಐಡಿ ಹಾಗೂ ಧರ್ಮವನ್ನು ತಿಳಿದು ಹತ್ಯೆ ಮಾಡಿದ್ದು ಪೈಶಾಚಿಕ ಕೃತ್ಯ. ದೇಶದ ಏಕತೆ ಹಾಗೂ ಅಖಂಡತೆಗೆ ಧಕ್ಕೆಯುಂಟು ಮಾಡಲು ಇಂಥ ದುಷ್ಕೃತ್ಯ ಎಸಗಲಾಗಿದೆ. ಜಗತ್ತಿನಲ್ಲಿ ಭಾರತದ ಕೀರ್ತಿ ಹೆಚ್ಚಾಗುತ್ತಿದ್ದು, ಎಲ್ಲ ದೇಶಗಳು ಭಾರತದ ಏಳಿಗೆಯನ್ನು ಮುಕ್ತಕಂಠದಿಂದ ಹೊಗಳುತ್ತಿದ್ದುದು ಈ ರಾಕ್ಷಸರಿಗೆ ಸಹಿಸಲಿಕ್ಕಾಗುತ್ತಿಲ್ಲ. ಈ ನರಭಕ್ಷಕರು ಇಂಥ ಹೇಡಿ ಕೇಲಸ ಮಾಡಿದರೂ ನಮ್ಮ ಕೇಂದ್ರ ಸರ್ಕಾರ ಈ ಹೇಡಿಗಳಿಗೆ ಜಗ್ಗುವುದಿಲ್ಲ, ಬಗ್ಗುವುದಿಲ್ಲ, ಕುಗ್ಗುವುದೂ ಇಲ್ಲ. ಆ ನರರಾಕ್ಷಸರ ಹೆಡೆ ಮುರಿ ಕಟ್ಟಲು ನಮ್ಮ ಸೇನೆ ಸನ್ನದ್ದವಾಗಿದೆ. ನಮ್ಮ ಯೋಧರ ಮೇಲೆ ನಮಗೆ ನಂಬಿಕೆ ಹಾಗೂ ಆತ್ಮವಿಶ್ವಸವಿದೆ ಎಂದರು.

ಮುಂದುವರೆದು ಮಾತನಾಡಿರುವ ಠಾಕೂರ್ ಅವರು, ವಕ್ಫ್ ಕಾಯಿದೆ ತಿದ್ದುಪಡಿ ವಿರೂದ್ಧ ಅಖಿಲಭಾರತೀಯ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿ ಬೀದರ್ ನಲ್ಲಿ ಹೋರಾಟ ಮಾಡಲು ಮುಂದಾಗಿರುವುದಕ್ಕೆ ನಮ್ಮ ಆಕ್ಷೇಪವಿಲ್ಲ. ನಮ್ಮ ಸಂವಿಧಾನದ ಪ್ರಕಾರ ಎಲ್ಲರಿಗೂ ಹೋರಾಟ ಮಾಡುವ ಅಧಿಕಾರ ಇದೆ. ಆದರೆ ಹೋರಾಟ ಕಾನೂನಿನ ಚೌಕಟ್ಟಿಲ್ಲಿ ಆಗಬೇಕು. ಈಗಾಗಲೇ ದೇಶದ ವಿವಿಧ ಕಡೆಗಳಲ್ಲಿ ಪರ್ಸನಲ್ ಲಾ ಬೋರ್ಡ ವತಿಯಿಂದ ನಡೆದ ಹೋರಾಟಗಳಲ್ಲಿ ಗಲಾಟೆಗಳು ಆಗಿವೆ. ಎಲ್ಲಲ್ಲಿ ಪ್ರತಿಭಟನೆಗಳು ಆಗಿವೆ ಅಲ್ಲಿ ದೊಂಬಿ, ಗಲಾಟೆಯೊಂದಿಗೆ ಹತ್ಯೆಗಳು ಕೂಡ ನಡೆದಿವೆ. ಪಶ್ಚಿಮ ಬಂಗಾಳದಲ್ಲಿ ಹಿಂದುಗಳ ಮೇಲೆ ದಾಳಿ ನಡೆದಿವೆ ಇದಕ್ಕೆ ಮುರ್ಶಿದಾಬಾದ ಘಟನೆಯೆ ಸಾಕ್ಷಿಯಾಗಿದೆ ಎಂದರು. ಈಗಾಗಲೆ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿ ಹೋರಾಟಕ್ಕೆ ನಮ್ಮ ಅಭ್ಯಂತರವಿಲ್ಲ ಆದರೂ ಕೂಡ ಬೀದರ್ ಅತಿ ಸೂಕ್ಷ್ಮವಾದ ಸ್ಥಳವಾಗಿದೆ. ಈ ಹಿಂದೆ ಇಲ್ಲಿ ಅನೇಕ ಘಟನೆಗಳಾಗಿವೆ. ಬೀದರ್ ಶಾಂತಿಯುತ ನಗರವಾಗಿದೆ. ಇಲ್ಲಿ ದೊಡ್ಡ ಮಟ್ಟದ ಪ್ರತಿಭಟನೆಗೆ ಅವಕಾಶ ನೀಡಬಾರದು ಎಂದು ಮನವಿ ಮಾಡಿದ್ದೇನೆ. ಒಂದು ವೇಳೆ ಸರ್ಕಾರಕ್ಕೆ ಮಣಿದು ಅನುಮತಿ ನೀಡಿದರೆ ಸೂಕ್ಷ್ಮ ಪ್ರದೇಶದಲ್ಲಿ ಜನರ ಸುರಕ್ಷತೆಗೆ ವ್ಯವಸ್ಥೆ ಮಾಡಬೇಕು. ಹೋರಾಟಕ್ಕೆ ಕರೆ ನೀಡಿದವರಿಂದ ಬಾಂಡ್ ಮಾಡಿಸಿ ಅವರನ್ನು ಹೊಣೆಗಾರರಾಗಿ ಮಾಡಬೇಕು. ಬೀದರ್ನಲ್ಲಿ ಯಾವುದೇ ರೀತಿಯ ಅಶಾಂತಿ ಆಗಬಾರದು. ಜಿಲ್ಲಾಡಳಿತ ಗಮನಿಸಬೇಕು. ಸಾವಿರಾರು ಸಂಖ್ಯೆಯಲ್ಲಿ ಜನ ಸೇರಿ ಗೊಂದಲ ಸೃಷ್ಟಿಸುವುದು ಸರಿಯಲ್ಲ ಇದ-ಕ್ಕೆ ಜಿಲ್ಲಾಡಳಿತ ಸೂಕ್ತ ವ್ಯವಸ್ಥೆ ಮಾಡಬೇಕೆಂದು ಆಗ್ರಹಿಸಿದರು. ಡಾ.ವಿಶ್ವನಾಥ ಉಪ್ಪೆ, ವೆಂಕಟ ಚಿದ್ರಿ ಪತ್ರಿಕಾಗೋಷ್ಠಿಯಲ್ಲಿದ್ದರು.

# ಸಚಿವ ರಾಮಲಿಂಗಾರೆಡ್ಡಿ ಅವರಿಗೆ ವಿವಿಧ ಬೇಡಿಕೆಗಳ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.23:ಕರ್ನಾಟಕ ರಾಜ್ಯದ ನಾಲ್ಕು ಸಾರಿಗೆ ನಿಗಮಗಳಲ್ಲಿಯೆ, ನಮ್ಮ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯನ್ನು ಅತ್ಯುತ್ತಮವಾಗಿ ಅನುಷ್ಠಾನಗೊಳಿಸಿದೆ ಹಾಗೂ ಇದಲ್ಲದೆ ಪ್ರಯಾಣಿಕರ ಅನುಕೂಲಕ್ಕಾಗಿ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸಿ, ರಾಷ್ಟ್ರೀಯ ಮಟ್ಟದಲ್ಲಿ ಸುಮಾರು ಪ್ರಶಸ್ತಿಗಳನ್ನು ಪಡೆದುಕೊಂಡಿರುತ್ತದೆ. ಎಂದು ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾ ಮಂಡಳಿ ಕಲ್ಯಾಣ ಕರ್ನಾಟಕ ನಿಗಮ ಕಲಬುರಗಿ ವತಿಯಿಂದ ಸಾರಿಗೆ ಮತ್ತು ಮುಜರಾಯಿ ಖಾತೆ ಸಚಿವರಾದ ರಾಮಲಿಂಗಾರೆಡ್ಡಿ ಅವರಿಗೆ ಮನವಿ ಸಲ್ಲಿಸಲಾಯಿತು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನೌಕರರ ಪರವಾಗಿ ಈ ಕೆಳಗಿನಂತೆ ಬೇಡಿಕೆಗಳಾದ ದಿನಾಂಕ 01/01/2020 ರಿಂದ 28/02/2023 ರವರೆಗೆ 38 ತಿಂಗಳ ಹಿಂಬಾಕಿ ವೇತನ ಪಾವತಿಸಬೇಕು, ದಿನಾಂಕ 01/01/2024 ರಿಂದ ಶೇಕಡಾ 25% ಭಾಗ ವೇತನ ಹೆಚ್ಚಳ ಕೂಡಲೇ ಪಾವತಿಸಲು ವೇತನ ಪರೀಷ್ಕರಣೆ ಕೈಗೊಳ್ಳಬೇಕು, 2500 ನಿರ್ವಾಹಕರು, 2000 ಚಾಲಕರು, 1500 ತಾಂತ್ರಿಕ ಸಿಬ್ಬಂದಿಗಳ ಹಾಗೂ ಇನ್ನುಳಿದ ಸಿಬ್ಬಂದಿಗಳ ಕೂಡ ತುರ್ತು ಅವಶ್ಯಕ ಇರುತ್ತದೆ.

ಸದರಿ ವರ್ಗಗಳ ನೇಮಕಾತಿ ಕೋರಿ ಸರ್ಕಾರಕ್ಕೆ ಅನೇಕ ಬಾರಿ ಮನವಿಯನ್ನು ಸಲ್ಲಿಸಲಾಗಿದ್ದು, ಇಂದಿನವರೆಗೆ ನೇಮಕಾತಿಗಾಗಿ ಅನುಮತಿ ನೀಡಿರುವುದಿಲ್ಲ. ಆದ್ದ-ರಿಂದ ಸದರಿ ಹುದ್ದೆಗಳ ನೇಮಕಾತಿ ಕೈಗೊಳ್ಳಲು ಕೂಡಲೇ ಅನುಮತಿ ದೊರಕಿಸಿ ಕೊಡಬೇಕು, ಸಂವಿಧಾನ 371 (ಜೆ) ಅಡಿ ನೇಮಕಾತಿಗೆ ಅರ್ಹ ಇರುವ ಹುದ್ದೆಗಳ ತಕ್ಷಣ ನೇಮಕಾತಿಗಾಗಿ ಕೂಡಲೇ ಅನುಮತಿ ದೊರಕಿಸಿ ಕೊಡಬೇಕು,

ಕಕರಸಾ ನಿಗಮದಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವುದರಿಂದ ಸಂಸ್ಥೆಯು ವಿವಿಧವಾಗಿ ಗಂಭೀರ ಸ್ವರೂಪದಲ್ಲಿ ಆರ್ಥಿಕವಾಗಿ ನಷ್ಟ ಅನುಭವಿಸಬೇಕಾಗುತ್ತದೆ.

ಆದ್ದರಿಂದ ಹೊರಗುತ್ತಿಗೆ ನೇಮಕಾತಿಯನ್ನು ತಕ್ಷಣದಿಂದಲೇ ನಿಲ್ಲಿಸಿ, ನಿಗಮದವತಿಯಿಂದ ನೇಮಕಾತಿಗೆ ಅನುಮತಿ ನೀಡಬೇಕು. ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಭೀಮರಾವ ಯರಗೋಳ, ಕಾರ್ಯಾಧ್ಯಕ್ಷ ಸಂಗಮನಾಥ ರಬಶೆಟ್ಟಿ, ಮುಖ್ಯ ಉಪಾಧ್ಯಕ್ಷ ರಾಮಚಂದ್ರ ಹೈಯ್ಯಾಳಕರ, ಜಂಟಿ ಕಾರ್ಯದರ್ಶಿ ಚಂದ್ರಕಾಂತ ಡೊಳ್ಳಿ ಸೇರಿದಂತೆ ಇತರರು ಇದ್ದರು.

# ಗಾಂಜಾ ಮಾರಾಟ: ಇಬ್ಬರ ಬಂಧನ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.23:ಸಬ್-ಅರ್ಬನ್ ಪೊಲೀಸರು ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿ 6.50 ಲಕ್ಷ ರೂ. ಮೌಲ್ಯದ 6.915 ಕೆಜಿ ನಿಷೇಧಿತ ಗಾಂಜಾ ವಶಪಡಿಸಿಕೊಂಡಿದ್ದಾರೆ. ಆಜಾದಪುರ ರಸ್ತೆಯ ಉಮರ್ ಕಾಲೋನಿಯ ಶಹಾಬಾಜ್ ತಂದೆ ಅಬ್ದುಲ್ ರಶೀದ್ (30) ಮತ್ತು ಹಾಗರಗಾ ರಸ್ತೆಯ ಅಮನ್ ನಗರದ ಬಾನು ಗಂಡ ಮಹ್ಮದ್ ಇಸ್ಮಾಯಿಲ್ (31) ಬಂಧಿತ ಆರೋಪಿಗಳಾಗಿದ್ದಾರೆ.

ಉಮರ್ ಕಾಲೋನಿಯ ಅಬ್ಬು ಶೇಖ್ ಅಲಿಯಾಸ್ ಸ್ಪೀಡ್ ಅಬ್ಬು ತಂದೆ ನವಾಬ್ ಶೇಖ್ ಹಾಗೂ ಬಾಪು ನಗರದ ರಮೇಶ ತಂದೆ ವಿಜಯಕುಮಾರ ಕಾಳೆ ಎಂಬುವವರಿಗೆ ಮಾರಾಟ ಮಾಡಲು ಮಹಾರಾಷ್ಟ್ರ ರಾಜ್ಯದ ಜಲಗಾಂವದಿಂದ ನಿಷೇಧಿತ ಗಾಂಜಾ ತಂದಿರುವುದಾಗಿ ಆರೋಪಿಗಳು ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಶಹಾಬಾಜ್ ಮತ್ತು ಬಾನು ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಅಬ್ಬು ಶೇಖ್ ಮತ್ತು ರಮೇಶ ಕಾಳೆ ವಿರುದ್ಧ ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ನಗರದಲ್ಲಿ ನಡೆಯುವ ಅಪರಾಧ ಹಾಗೂ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದಂತೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ ಅವರ ಮಾರ್ಗದರ್ಶನದಲ್ಲಿ ಉತ್ತರ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಚಂದ್ರಶೇಖರ ಜಿ.ಅವರ ನೇತೃತ್ವದಲ್ಲಿ ಸಬ್-ಅರ್ಬನ್ ಪೊಲೀಸ್ ಠಾಣೆಯ ಪಿಐ ಸಂತೋಷ ಎಲ್. ತಟ್ಟೆಪಳ್ಳಿ, ಸಿಬ್ಬಂದಿಗಳಾದ ಫಿರೋಜ್, ಶಶಿಕಾಂತ, ಮಹಾಂತೇಶ ಅವರನ್ನು ಒಳಗೊಂಡ ತಂಡ ಕಾರ್ಯಾಚರಣೆ ನಡೆಸಿ ನಗರದ ಲಂಗಾರ ಹನುಮಾನ ಗುಡಿ ಹತ್ತಿರ ಗಾಂಜಾ ಮಾರಾಟ ಮಾಡುತ್ತಿದ್ದ ವೇಳೆ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ. ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಸಬ್-ಅರ್ಬನ್ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರು ಶ್ಲಾಘಿಸಿದ್ದಾರೆ.

# ಸುಚಿವ್ರತ್ ಕುಲಕರ್ಣಿ ಕುಟುಂಬಕ್ಕೆ ಕನಿಷ್ಠ ಹತ್ತು ಲಕ್ಷ. ರೂ. ಆರ್ಥಿಕ ನೆರವು ನೀಡಬೇಕು: ಬಂಡೆಪ್ಪ ಖಾಶೆಂಪುರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 23 : ಜನಿವಾರ ವಿವಾದದಿಂದ ಸಿಇಟಿ ಪರೀಕ್ಷೆಯಿಂದ ವಚಿಂತನಾಗಿದ್ದ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿರವರ ಕುಟುಂಬಕ್ಕೆ ಮುಖ್ಯಮಂತ್ರಿಗಳು ಕನಿಷ್ಠ ಹತ್ತು ಲಕ್ಷ ರೂ.ಗಳ ಆರ್ಥಿಕ ನೆರವು ನೀಡಬೇಕು ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಆಗ್ರಹಿಸಿದ್ದಾರೆ.

ಇತ್ತೀಚೆಗೆ ಜನಿವಾರ ವಿವಾದದಿಂದ ಸಿಇಟಿ ಪರೀಕ್ಷೆಯಿಂದ ವಚಿಂತನಾಗಿದ್ದ ಬೀದರ್ ನಗರದ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿರವರ ಮನೆಗೆ ಭೇಟಿ ನೀಡಿದ ಬಳಿಕ ಮಾತನಾಡಿದ ಅವರು,

ನಾನು ಸುಚಿವ್ರತ್ ಕುಲಕರ್ಣಿರವರ ಮನೆಗೆ ಭೇಟಿ ನೀಡಿ, ವಿದ್ಯಾರ್ಥಿ ಹಾಗೂ ಆತನ ಪೋಷಕರನ್ನು ಮಾತನಾಡಿಸಿ, ಆತ್ಮಸ್ಥೈರ್ಯ ತುಂಬಿ, ನಿಮ್ಮೊಂದಿಗೆ ನಾವು ಇದ್ದೇವೆ, ನಿಮಗೆ ನ್ಯಾಯ ಕೊಡಿಸಲು ನಾವು ಪ್ರಯತ್ನಿಸುತ್ತೇವೆಂದು ಧೈರ್ಯ ನೀಡಿದ್ದೇನೆ ಎಂದರು.

ಸುಚಿವ್ರತ್ ಕುಟುಂಬ ಕಡುಬಡ ಕುಟುಂಬವಾಗಿದ್ದು, ಅವರು ಬಿಪಿಎಲ್ ಕಾರ್ಡುದಾರರಾಗಿದ್ದಾರೆ. ಆತನ ತಾಯಿ ಮಕ್ಕಳಿಗೆ ಪಾರ್ಟ್ ಟೈಮ್ ಟ್ಯೂಷನ್ ಹೇಳಿಕೊಟ್ಟು ಸಂಸಾರ ಸಾಗಿಸುತ್ತಿದ್ದಾರೆ. ಅದೇ ವೃತ್ತಿ ಬದುಕಿನಿಂದಲೇ ಮಗನನ್ನು ಓದಿಸುತ್ತಿದ್ದಾರೆ. ಈಗ ಮಗ ಸಿಇಟಿಯಿಂದ ವಂಚಿತನಾಗಿರುವುದು ಆ ಕುಟುಂಬಕ್ಕೆ ದೊಡ್ಡಮಟ್ಟದ ನಷ್ಟವಾಗಿದೆ. ಆ ವಿದ್ಯಾರ್ಥಿಯ ಒಂದು ವರ್ಷದ ಜೀವನ ಕೂಡ ಹಾಳಾದಂತಾಗಿದೆ. ಆತ ಈಗ ಸರ್ಕಾರಿ ಸೀಟ್ ನಿಂದ ವಂಚಿತನಾಗಿದ್ದು, ಖಾಸಗಿಯಾಗಿಯೇ ಓದಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಕಲಿಬೇಕು ಅಂದ್ರೆ ಸಾಕಷ್ಟು ಖರ್ಚು ವೆಚ್ಚ ಬರುತ್ತದೆ. ಇದರಿಂದಾಗಿ ಮುಖ್ಯಮಂತ್ರಿಗಳು ಆ ವಿದ್ಯಾರ್ಥಿಯ ಶಿಕ್ಷಣಕ್ಕಾಗಿ ಮುಖ್ಯಮಂತ್ರಿ ಪರಿಹಾರ ನಿಧಿಯಿಂದಾಗಲಿ ಅಥವಾ ಇತರೆ ನಿಧಿಯಿಂದಾಗಲಿ ಕನಿಷ್ಠ ಹತ್ತು ಲಕ್ಷ ರೂ.ಗಳ ಆರ್ಥಿಕ ನೆರವನ್ನು ನೀಡಬೇಕು. ಆ ಮೂಲಕ ವಿದ್ಯಾರ್ಥಿಯ ಶಿಕ್ಷಣಕ್ಕೆ ಸಹಕರಿಸಬೇಕು ಎಂದು ನಾನು ಮುಖ್ಯಮಂತ್ರಿಗಳಿಗೆ ಮನವಿ ಮಾಡುತ್ತೇನೆ.

ಮುಖ್ಯಮಂತ್ರಿಗಳು ಮರು ಪರೀಕ್ಷೆ ಮಾಡಿಸುವ ಬಗ್ಗೆ ಮಾತನಾಡಿದ್ದಾರೆ. ಈಗಾಗಲೇ ಆ ವಿದ್ಯಾರ್ಥಿ ಮಾನಸಿಕವಾಗಿ ನೊಂದಿದ್ದಾನೆ. ಅದು ಅವನಿಗೆ ಕಷ್ಟ ಆಗಬಹುದು. ಆತನ ಭವಿಷ್ಯ ಹಾಳು ಮಾಡಿದ ಪರೀಕ್ಷಾ ಸಿಬ್ಬಂದಿಗಳ ಮೇಲೆ ಕ್ರಿಮಿನಲ್ ಕೇಸ್ ದಾಖಲಿಸಬೇಕು. ಈ ಪ್ರಕರಣ ಇತರರಿಗೆ ಪಾಠ ಆಗಬೇಕು. ಮುಂದಿನ ದಿನಗಳಲ್ಲಿ ಈ ರೀತಿಯ ಪ್ರಕರಣ ಮರುಕಳಿಸದಂತೆ ನೋಡಿಕೊಳ್ಳಬೇಕು. ಈ ಪ್ರಕರಣಕ್ಕೆ ಕಾರಣರಾದವರನ್ನು ಕೇವಲ ಸಸ್ಪೆಂಡ್ ಮಾಡಿದರೆ ಸಾಲದು ಅವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಿಕೊಂಡು ಕಠಿಣ ಶಿಕ್ಷೆ ವಿಧಿಸಬೇಕು. ಪ್ರಕರಣದ ಕುರಿತು ಉನ್ನತಮಟ್ಟದ ತನಿಖೆ ಆಗಬೇಕು ಎಂದು ಬಂಡೆಪ್ಪ ಖಾಶೆಂಪುರ್ ರವರು ಆಗ್ರಹಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರು ಹಾಗೂ ನಗರಸಭೆಯ ಮಾಜಿ ಸದಸ್ಯರಾದ ಮನೋಹರ್ ದಂಡೆ, ಪ್ರಮುಖರಾದ ಗಿರೀಶ್ ಮೈಲೂರಕರ್, ಸಂಜಯ್ ಹಿಪ್ಪರಗಿ, ಶಶಿಕಾಂತ್ ದೀಕ್ಷಿತ್, ನಗರಸಭೆ ಸದಸ್ಯ ಸೈಯದ್ ಸೌದ್, ವಿದ್ಯಾರ್ಥಿಯ ತಾಯಿ ಗೀತಾ, ತಂದೆ ಕಲ್ಯಾಣರಾವ್ ಕುಲಕರ್ಣಿರವರು ಸೇರಿದಂತೆ ಅನೇಕರಿದ್ದರು.

# ಪಹಲ್ಗಾಮ್ ದಾಳಿ: ಮೃತ ಕನ್ನಡಿಗರಿಗೆ ತಲಾ 10 ಲಕ್ಷ ರೂ. ಪರಿಹಾರ ಘೋಷಿಸಿದ ರಾಜ್ಯ ಸರ್ಕಾರ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.23: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ನಲ್ಲಿ ಮಂಗಳವಾರ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯಲ್ಲಿ ಮೂವರು ಕನ್ನಡಿಗರು ಸೇರಿದಂತೆ 28 ಮಂದಿ ಮೃತಪಟ್ಟಿದ್ದಾರೆ. ಉಗ್ರರ ದಾಳಿಯಲ್ಲಿ ಮೃತಪಟ್ಟ ಕನ್ನಡಿಗರಿಗೆ ತಲಾ 10 ಲಕ್ಷ ಪರಿಹಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ತಿಳಿಸಿದ್ದಾರೆ.

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟಿರುವ ರಾಜ್ಯದ ಪ್ರತಿ ನಾಗರಿಕರ ಕುಟುಂಬಗಳಿಗೆ ತಲಾ ಹತ್ತು ಲಕ್ಷ ರೂ. ಪರಿಹಾರ ನೀಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇದಕ್ಕು ಮುನ್ನ ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ದಾಳಿ ಸಂಪೂರ್ಣ ಯೋಜಿತವಾಗಿದ್ದು, 28 ಜನರನ್ನು ಬಲಿ ಪಡೆದ ಉಗ್ರರ ಹೇಯಕೃತ್ಯವನ್ನು ಖಂಡಿಸುತ್ತೇನೆ ಎಂದು ಸಿಎಂ ಹೇಳಿದ್ದರು.

"ಈ ಘಟನೆಯಲ್ಲಿ ಗುಪ್ತಚರ ವೈಫಲ್ಯ ಕಂಡುಬಂದಿದೆ. ಈ ಹಿಂದೆ ಪುಲ್ವಾಮಾ ದಾಳಿಯಾಗಿತ್ತು ಮತ್ತು ಈಗ ಮತ್ತೊಂದು ಭಯೋತ್ಪಾದಕ ದಾಳಿ ನಡೆದಿದೆ" ಎಂದು ಅವರು ತಿಳಿಸಿದ್ದರು.

# ಪಹಲ್ಗಾಮ್ ದಾಳಿ ಖಂಡಿಸಿ ಯುವ ಕಾಂಗ್ರೆಸ್ ಪ್ರತಿಭಟನೆ




ಕಲಬುರಗಿ:ಏ.23: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ಮಾಡಿದ ಭಯೋತ್ಪಾದಕರ ವಿರುದ್ಧ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶಕೀಲ್ ಅಹಮದ್ ಸರಡಗಿ ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಛೇರಿ ಎದುರು ಬೃಹತ್ ಪ್ರತಿಭಟನೆ ನಡೆಸಿದರು.

ಪಹಲ್ಗಾಮ್‌ನಲ್ಲಿ ದಾಳಿ ಮಾಡಿರುವ ಭಯೋತ್ಪಾದಕರ ಕೂಡಲೇ ಬಂಧಿಸುವಂತೆ ಒತ್ತಾಯಿಸಿ ಕೇಂದ್ರ ಸರ್ಕಾರದ ಗೃಹ ಮಂತ್ರಿ ಆಗಿರುವ ಅಮಿತ್ ಷಾ ಪ್ರತಿಕೃತಿ ಸುಟ್ಟು ಆಕ್ರೋಶ ವ್ಯಕ್ತಪಡಿಸಿದ ಯುವ ಕಾಂಗ್ರೆಸ್ ಕಾರ್ಯಕರ್ತರು.

ಕೇಂದ್ರ ಸರ್ಕಾರದ ಗೃಹ ಮಂತ್ರಿ ಅಮಿತ್ ಷಾ ಹಾಗೂ ರಕ್ಷಣಾ ಸಚಿವ ರಾಜನಾಥ ಸಿಂಗ್ ಈ ಕೂಡಲೇ ತಮ್ಮ ಹುದ್ದೆಗೆ ರಾಜೀನಾಮೆ ನೀಡುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಯುವ ಘಟಕದ ಮಾಜಿ ಅಧ್ಯಕ್ಷ ಶಿವಾನಂದ ಹೊನಗುಂಟಿ, ಈರಣ್ಣ ಪಾಟೀಲ್ ಝುಳಕಿ, ಕಾರ್ತಿಕ ನಾಟಿ-ಕರ್, ಪರಶುರಾಮ್ ನಾಟಿಕಾರ್, ಉಮೇರ್ ಜುನೈಧಿ, ಮೊಹಮ್ಮದ್ ಅಸ್ವಾನ, ರಾಮ್ ಪ್ರಸಾದ್ ಕಾಂಬಳೆ, ಸಂಘಪಾಲ್ ಕಾಂಬಳೆ, ರಾಜು ಮಾಳಿಗೆ, ಏಜಾಜ್ ನಿಂಬಾಳ್ಕರ್, ದೇವಿಂದ್ರ ಯಾಬಾಳ್, ಅಸ್ಲಾಂ ಸಿಂದಗಿ, ಅಮ್ಮೈರ್ ಮರ್ಚೆಂಟ್, ಕಿರಣ್ ಚಹ್ವಾಣ, ನಿಖಿಲ್ ನಾಗತಿಲಕ್ ಹಿರಾಪುರ್, ಶೇಖ್ ಅಸೀಫ್ ಅಲಿ, ಶೇಖ ಸಮರೀನ್, ಗೀತಾ ಮುದ್ದಗಲ್, ಹರೂನ್ ಖುರೇಷಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.